**ಸಂಪುಟ:** 05 **ಸಂಚಿಕೆ:** 141 **ಪುಟಗಳು:** 08 ಭಾನುವಾರ 03 ಆಗಸ್ಟ್ 2025

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಪ್ರಪಂಚವು ಬಹಳಷ್ಟು ವಿಶಾಲವಾಗಿದೆ. ಒತ್ತಾಯವಾಗಿ ಯಾರಾ ಜೊತೆಯೂ ಬದುಕುವ ಪ್ರಯತ್ನ ಮಾಡಬೇಡಿರಿ. ನಿಮ್ಮನ್ನು ಗೌರವಿಸುವವರು ನಿಮ್ಮನ್ನೇ ಹುಡುಕಿಕೊಂಡು ಬರುತ್ತಾರೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮತಕಳ್ಳತನ ಜಟಾಪಟಿ: ಆ. 5ಕ್ಕೆ ಕಾಂಗ್ರೆಸ್ ಪ್ರತಿಭಟನೆಗೆ, ಬಿಜೆಪಿ ಕೌಂಟರ್

• ಉದಯವಾಹಿನಿ, ಬೆಂಗಳೂರು

**ವಿಧಾನಸೌಧದಲ್ಲೇ ಹೋರಾಟ: ವಿಜಯೇಂದ್ರ**

ರಾಹುಲ್ ಗಾಂಧಿಯವರು ಚುನಾವಣಾ ಅಕ್ರಮದ ಹೇಳಿಕೆಯ ಮೂಲಕ ದೇಶ ಮತ್ತು ರಾಜ್ಯದ ಮತದಾರರಿಗೆ ಅವಮಾನ ಮಾಡಿದ್ದಾರೆ. ಅವರ ಹೇಳಿಕೆ ಮತ್ತು ಸಂವಿಧಾನ ವಿರೋಧಿ ನಡೆಯನ್ನು ಖಂಡಿಸಿ ಬಿಜೆಪಿ ವತಿಯಿಂದ ಆ. 5ರಂದು ಬೆಳಿಗ್ಗೆ 10 ಗಂಟೆಗೆ ವಿಧಾನಸೌಧದ ಗಾಂಧೀಜಿ ಅವರ ಪ್ರತಿಮೆ ಬಳಿ ಪ್ರತಿಭಟನೆ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಪ್ರಕಟಿಸಿದ್ದಾರೆ. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಭಟನೆಯ ಬಳಿಕ ಮಾನ್ಯ ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ನೀಡಲಿದ್ದೇವೆ ಎಂದು ತಿಳಿಸಿದರು. ರಾಹುಲ್ ಗಾಂಧಿಯವರು ಇದೇ 5ರಂದು ಬೆಂಗಳೂರಿನಲ್ಲಿ ನಾಟಕ ಮಾಡಲು ಹೊರಟಿದ್ದಾರೆ ಎಂದು ದೂರಿದರು. ಪಕ್ಷದ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ಸಂಸದರು, ಮಾಜಿ ಶಾಸಕರು, ವಿಧಾನಪರಿಷತ್ ಮಾಜಿ ಸದಸ್ಯರು ಇದರಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷದ ಧೋರಣೆಯನ್ನು ಜನರಿಗೆ ತಿಳಿಸುವ ಉದ್ದೇಶವಿದೆ ಎಂದು ಹೇಳಿದರು.

ರಾಹುಲ್ ಗಾಂಧಿಯವರು ಬರುತ್ತಾರೆಂಬ ಕಾರಣಕ್ಕೆ ರಾಜ್ಯ ಸರಕಾರವು ನಿನ್ನೆ ಫ್ರೀಡಂ ಪಾರ್ಕಿನಲ್ಲಿ ಕಾಂಪೌಂಡನ್ನು ಒಡೆದು ಹಾಕಿ ಅಲ್ಲಿದ್ದ ಮರವನ್ನೂ ಕಡಿದು ಹಾಕಿಸಿದೆ. ರಾಹುಲ್ ಗಾಂಧಿ, ಮುಖ್ಯಮಂತ್ರಿಗಳು ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು. ಕಾಂಗ್ರೆಸ್ ಪಕ್ಷ ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ಮತ್ತು ದೇಶದಲ್ಲಿ ಒಂದು ಹೊಸ ಚರ್ಚೆ ಮತ್ತು ಹೊಸ ವರಸೆ ಪ್ರಾರಂಭ ಮಾಡಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ರಾಜ್ಯವೂ ಒಳಗೊಂಡಂತೆ ಬೇರೆ ಬೇರೆ ರಾಜ್ಯಗಳಲ್ಲಿ ಚುನಾವಣೆಗಳಲ್ಲಿ ಅಕ್ರಮ ನಡೆದಿದೆ ಬಿಜೆಪಿ, ಚುನಾವಣಾ ಆಯೋಗದ ದುರ್ಬಳಕೆಯನ್ನು ಮಾಡಿಕೊಂಡಿದೆ ಎಂಬ ಆರೋಪವನ್ನು ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಕಾಂಗ್ರೆಸ್ಸಿನ ಮಾರ್ಗದರ್ಶನವಿಲ್ಲದ ಕ್ಷಿಪಣಿಯಂತಿರುವ ಸುಪ್ರೀಂ ನಾಯಕ ಆದ ರಾಹುಲ್ ಗಾಂಧಿ ಅವರು ಮಾಡುತ್ತಿದ್ದಾರೆ ಎಂದು ಟೀಕಿಸಿದರು.



**ಹತಾಶ ರಾಹುಲ್ ಗಾಂಧಿಯವರ ಕಪಟ ನಾಟಕ:** ರಾಹುಲ್ ಗಾಂಧಿ ಅವರು ಗೊಂದಲದಲ್ಲಿದ್ದಾರೆ. ಸೋಲಿನ ಅವಮಾನ ಮತ್ತು ಹತಾಶರಾಗಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ಆರೋಪಗಳನ್ನು ಮಾಡುತ್ತಿದ್ದಾರೆ. ಈ ದೇಶದ ಜನರ ವಿಶ್ವಾಸವನ್ನು ಪಡೆದುಕೊಳ್ಳುವಲ್ಲಿ ವಿಫಲರಾದ ರಾಹುಲ್ ಗಾಂಧಿಯವರು ಒಂದು ಕಪಟ ನಾಟಕವನ್ನು ಪ್ರಾರಂಭ ಮಾಡಿದ್ದಾರೆ ಎಂದು ವಿಜಯೇಂದ್ರ ಅವರು ಆಕ್ಷೇಪಿಸಿದರು. ಚುನಾವಣೆಗಳಲ್ಲಿ ಅಕ್ರಮ ನಡೆದಿರುವುದಕ್ಕೆ ನನ್ನ ಬಳಿ 100 ಪ್ರತಿಶತ ಪುರಾವೆ ಇದೆ ಎಂದು ರಾಹುಲ್ ಗಾಂಧಿ ಅವರ ಹೇಳಿಕೆ ನೀಡಿದ್ದಾರೆ. ರಾಹುಲ್ ಗಾಂಧಿ, ಅವರ ಹೇಳಿಕೆಗೆ ಧ್ವನಿಗೂಡಿಸಿರುವ ರಾಜ್ಯದ ಸಿಎಂ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ಚುನಾವಣೆಯಲ್ಲಿ ಅಕ್ರಮವಾಗಿರುವ ಬಗ್ಗೆ ಮತ್ತು ಚುನಾವಣಾ ಆಯೋಗದಲ್ಲಿ ದುರ್ಬಳಕೆ ಆಗಿದೆ ಎನ್ನುವ ಮಾಹಿತಿ, ಪುರಾವೆ ಇದ್ದರೆ. ಅದನ್ನು ರಾಜ್ಯ ಹೈಕೋರ್ಟಿಗೆ ಅಥವಾ ಸುಪ್ರೀಂ ಕೋರ್ಟಿಗೆ ಪುರಾವೆಗಳನ್ನು ನೀಡಿ ಪ್ರಶ್ನಿಸಬಹುದಾಗಿತ್ತು ಎಂದು ಆಕ್ಷೇಪಿಸಿದರು.

## ಆ.15ರಂದು ಪ್ರಧಾನಿ ಮೋದಿಯಿಂದ ಹಳದಿ ಮೆಟ್ರೋ ಮಾರ್ಗ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಮೆಟ್ರೋ ಹಳದಿ ಮಾರ್ಗ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಂದ ಉದ್ಘಾಟನೆಗೊಳ್ಳುವ ಸಾಧ್ಯತೆಗಳಿವೆ.ಆ.15 ರಿಂದ ಹಳದಿ ಮಾರ್ಗ ಲೋಕಾರ್ಪಣೆಗೊಳ್ಳುವ ಸಾಧ್ಯತೆ ಇದ್ದು, ಸಮಾರಂಭಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕರೆತರುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ಆರ್ ವಿ ರಸ್ತೆಯಿಂದ ಬೊಮ್ಮಸಂದ್ರದ ನಡುವಿನ 19.15 ಕಿಲೋ ಮೀಟರ್ ಉದ್ದದ ಹಳದಿ ಮಾರ್ಗಕ್ಕೆ ರೈಲ್ವೆ ಸುರಕ್ಷತಾ ಆಯೋಗದಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆ.

ಜುಲೈ 22 ರಂದು ರೈಲ್ವೆ ಸುರಕ್ಷತಾ ಆಯುಕ್ತ ಎ.ಎಂ. ಚೌಧರಿಯಿಂದ ಸುರಕ್ಷತಾ ಪರೀಕ್ಷೆ ನಡೆಸಿ, ವಿದ್ಯುತ್ ಸರಬರಾಜು ವ್ಯವಸ್ಥೆ, ಸಿಗ್ನಲಿಂಗ್, ಹಳಿಗಳು ಸುರಕ್ಷತಾ ಪರೀಕ್ಷಿಸಿದ್ದರು. ಮೂರು ಚಾಲಕರಹಿತ ರೈಲುಗಳು ಹಳದಿ ಮಾರ್ಗದಲ್ಲಿ ಓಡಾಟ ನಡೆಸಲಿವೆ. ಸುಮಾರು 20 ನಿಮಿಷಗಳ ಅಂತರದಲ್ಲಿ ಮೆಟ್ರೋ ಓಡಾಟ ಇರಲಿದೆ.

ಸೆಂಟ್ರಲ್ ಸಿಲ್ಕ್ ಬೋರ್ಡ್, ಎಚ್‌ಎಸ್‌ಆರ್ ಲೇಔಟ್ ಮತ್ತು ಎಲೆಕ್ಟ್ರಾನಿಕ್ ಸಿಟಿ ಮೂಲಕ ಹಾದು ಹೋಗಲಿರೋ ಹಳದಿ ಮೆಟ್ರೋ ಮಾರ್ಗದಲ್ಲಿ ಸದ್ಯಕ್ಕೆ ನಾಲ್ಕು ಮೆಟ್ರೋ ಬೋಗಿಗಳು ಇವೆ.ಉಳಿದ ಮೆಟ್ರೋ ಬೋಗಿಗಳು ಇನ್ನೊಂದು ವಾರದಲ್ಲಿ ಲಭ್ಯವಾಗುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

## ಚುನಾವಣಾ ಆಯೋಗವನ್ನು ಬಿಜೆಪಿಯವರು ಸಮರ್ಥಿಸಿಕೊಳ್ಳುತ್ತಿರುವುದೇಕೆ?:ಡಿ.ಕೆ. ಸುರೇಶ್

• ಉದಯವಾಹಿನಿ, ಬೆಂಗಳೂರು

ಕೇಂದ್ರ, ಚುನಾವಣಾ ಆಯೋಗದ ಕುರಿತು ಹೇಳಿಕೆ ನೀಡಿದರೆ ಬಿಜೆಪಿ ಅಡ್ಡಬಾಯಿ ಹಾಕಿ ಸಮರ್ಥಿಸಿಕೊಳ್ಳುತ್ತಿರುವುದೇಕೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಪ್ರಶ್ನಿಸಿದ್ದಾರೆ.

ಚುನಾವಣೆಯಲ್ಲಿ ಅಕ್ರಮಗಳಾಗಿವೆ ಎನ್ನುತ್ತಿದ್ದಂತೆ ಬಿಜೆಪಿಯವರು ಭಯ ಬೀಳುತ್ತಿದ್ದಾರೆ. ಆಯೋಗ ಸ್ವಾಯತೆಯ ಸಂಸ್ಥೆ. ಅದು ತನ್ನನ್ನು ತಾನು ಸಮರ್ಥಿಸಿಕೊಳ್ಳುತ್ತದೆ ಎಂದು ಹೇಳಿದರು. ಮತ ಕಳ್ಳತನದ ಬಗ್ಗೆ ಈ ಹಿಂದೆ ಕರ್ನಾಟಕದಲ್ಲಿ ಸಾಕಷ್ಟು ದೂರುದಾಖಲಾಗಿದ್ದವು. ಚಿಲುಮೆ ಸಂಸ್ಥೆಯ ಅಕ್ರಮಗಳ ಬಗ್ಗೆ ಬಿಜೆಪಿಯ ಅವಧಿಯಲ್ಲೇ ಪ್ರಕರಣ ದಾಖಲಾಗಿತ್ತು. ಇವುಗಳನ್ನು ಮುಂದಿಟ್ಟುಕೊಂಡೇ ರಾಹುಲ್ ಗಾಂಧಿ ಪ್ರತಿಭಟನೆ ಮಾಡುತ್ತಿದ್ದಾರೆ. ಚುನಾವಣಾ ಆಯೋಗ ಬಿಜೆಪಿಯ ಕೈಗೊಂಬೆಯಂತೆ ಕೆಲಸ ಮಾಡುತ್ತಿದೆ. ದೂರು ಎಷ್ಟು ನೀಡಿದರೂ ಕ್ರಮಕೈಗೊಳ್ಳುತ್ತಿಲ್ಲ. ಪ್ರತಿ ಭಾರಿಯೂ ಕೇಂದ್ರ ಸರ್ಕಾರದ ಅಣತಿಯಂತೆ ವರ್ತಿಸುತ್ತಿದೆ ಎಂದು ದೂರಿದರು. ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಯಾವುದೇ ಅಕ್ರಮಗಳಿಗೆ ಅವಕಾಶ ಕೊಟ್ಟಿಲ್ಲ. ಸ್ವಾಯತೆ ಸಂಸ್ಥೆಗಳ ಮೇಲೆ ಪ್ರಭಾವ ಬೀರಲಿಲ್ಲ. ಸುಪ್ರೀಂಕೋರ್ಟ್ ಕೇಂದ್ರ ತನಿಖಾ ಸಂಸ್ಥೆಗಳ ಬಗ್ಗೆ ಪದೇಪದೇ ಟೀಕೆ ಮಾಡುತ್ತಲೇ ಇದೆ. ಅದರೆ ಅದರ ಲೋಪಗಳನ್ನು ತಿದ್ದಿಕೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ರಾಹುಲ್‌ಗಾಂಧಿ ಪ್ರತಿಭಟನೆಗಾಗಿ ಮರ ಕಡಿದ ಪೊಲೀಸರ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು

ಮತಕಳ್ಳತನ ಹೆಸರಿನಲ್ಲಿ ನಗರದಲ್ಲಿ ರಾಹುಲ್‌ಗಾಂಧಿ ನಡೆಸಲು ತೀರ್ಮಾನಿಸಿರುವ ಪ್ರತಿಭಟನೆಗಾಗಿ ಅನುಮತಿ ಇಲ್ಲದೆ ಫ್ರೀಡಂ ಪಾರ್ಕ್‌ನಲ್ಲಿದ್ದ ಮರ ಕಡಿದಿರುವ ಉಪ್ಪಾರಪೇಟೆ ಪೊಲೀಸರ ವಿರುದ್ಧ ಬಿಬಿಎಂಪಿ ಎಫ್‌ಐಆರ್ ದಾಖಲಿಸಿದೆ. ಮರ ಕಡಿದಿರುವುದಕ್ಕೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾದ ಬೆನ್ನಲ್ಲೆ ಎಚ್ಚೆತ್ತುಕೊಂಡಿರುವ ಬಿಬಿಎಂಪಿ ಅಧಿಕಾರಿಗಳು ಉಪ್ಪಾರಪೇಟ್ ಪಿಸಿ ಮಹದೇವಸ್ವಾಮಿ ಎಂಬುವರ ವಿರುದ್ಧ ಪ್ರಕರಣ ದಾಖಲಿಸಿದೆ. ಆ.5 ರಂದು ರಾಹುಲ್‌ಗಾಂಧಿ ಪ್ರತಿಭಟನೆಗಾಗಿ ಫ್ರೀಡಂ ಪಾರ್ಕ್‌ನ ಕಾಂಪೌಂಡ್ ಒಡೆದು, ಕೆಲ ಮರ ಕಡಿದು ರಸ್ತೆ ನಿರ್ಮಾಣ ಮಾಡಲು ಪೊಲೀಸರು ಮುಂದಾಗಿದ್ದರು. ಇದೀಗ ರಾಜಕಾರಣಿಗಳ ಸಲುವಾಗಿ ಮರಗಳ ಬುಡಕ್ಕೆ ಕೊಡಲಿ ಇಟ್ಟಿರೋದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಈ ಪ್ರತಿಭಟನೆಯಲ್ಲಿ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ರಾಷ್ಟ್ರೀಯ ನಾಯಕರು ಭಾಗಿಯಾಗುತ್ತಿದ್ದಾರೆ. ಈ ಪ್ರತಿಭಟನೆಯಗೆ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಮಂದಿ ಬರುತ್ತಿದ್ದಾರೆ. ಹಾಗಾಗಿ ಪ್ರತಿಭಟನೆಗೆ ಹೆಚ್ಚಿನ ಜಾಗದ ಅವಶ್ಯಕತೆ ಇರುವುದನ್ನು ಮನಗಂಡು ಮರ ಕಡಿದು ಜಾಗ ವಿಸ್ತರಣೆ ಮಾಡಲಾಗುತ್ತಿದೆ.

# ಕೈನಾಯಕರ ಬೆರಗು ದಲಿತ ಸಿಎಂ ಕೂಗು

- ಕಾಂಗ್ರೆಸ್ ನಾಯಕತ್ವ ಬದಲಾವಣೆಗೆ ಮೆಗಾ ಟ್ವಿಸ್ಟ್, ಖರ್ಗೆ ಹೇಳಿಕೆ,
- ಮೀಸಲಾತಿ ಚರ್ಚೆ ನೆಪದಲ್ಲಿ ಮತ್ತೆ ದಲಿತ ಸಿಎಂ ಕೂಗು
- ಕುತೂಹಲ ಮೂಡಿಸಿರುವ ಜಿ ಪರಮೇಶ್ವರ್ ಮೀಟಿಂಗ್!
- ದಲಿತ ಸಚಿವ, ಶಾಸಕರಿಗೆ ಆಹ್ವಾನ

1. ಡಾ.ಜಿ. ಪರಮೇಶ್ವರ್ ಅವರು ದಲಿತ ಸಮುದಾಯದ ಸಚಿವರು ಮತ್ತು ಶಾಸಕರ ಮೀಟಿಂಗ್.
2. ಸಭೆಯ ಉದ್ದೇಶವು ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲು ಜಾರಿಗೆ ತಯಾರಿ ಎಂದ ಗೃಹಸಚಿವ.
3. ಡಾ.ಎಚ್. ಸಿ.ಮಹದೇವಪ್ಪ, ಸೇರಿ ಹಲವರು ಭಾಗಿ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ವರ್ಗದಲ್ಲಿ ಒಳಮೀಸಲಾತಿ ಜಾರಿ ಕುರಿತಂತೆ ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಅವರ ನೇತೃತ್ವದಲ್ಲಿ ಸದಾಶಿವನಗರದ ಕಚೇರಿಯಲ್ಲಿ ಸಚಿವರು, ಶಾಸಕರಗಳೊಂದಿಗೆ ಸಭೆ ನಡೆಯಿತು. ಸಭೆಯ ಬಳಿಕ ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಹಲವು ವರ್ಷಗಳಿಂದ ಒಳ ಮೀಸಲಾತಿ ಬಗ್ಗೆ ಚರ್ಚೆಯಾಗುತ್ತಿದೆ. ಸುಪ್ರೀಂ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಜಸ್ಟಿಸ್ ನಾಗಮೋಹನ್ ದಾಸ್ ಅವರ ಆಯೋಗ ನೇಮಿಸಲಾಗಿದೆ. ಅಂಕಿ-ಅಂಶಗಳನ್ನು ಸಂಗ್ರಹಣೆ ಮಾಡಿ. ಅದರ ಆಧಾರದ ಮೇಲೆ ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಿಂದೆ ಉಳಿದಿರುವ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿ ತರಬೇಕು ಎಂಬ ಉದ್ದೇಶದಿಂದ ರಚಿಸಲಾದ ನಾಗಮೋಹನ್ ದಾಸ್ ಅವರ ಆಯೋಗ ಸದ್ಯದಲ್ಲೇ ವರದಿ ಕೊಡುತ್ತಾರೆ ಎಂಬ ಮಾಹಿತಿ ಇದೆ.

ವರದಿ ಕೊಡುವ ಸಂದರ್ಭದಲ್ಲಿ ಪರಿಶಿಷ್ಟ ವರ್ಗದಲ್ಲಿರುವ ವಿವಿಧ ಸಮುದಾಯಗಳು ಒಟ್ಟಾಗಿ ಹೋಗಬೇಕು. ಯಾವುದೆ ಸಂಘರ್ಷ ಅಗಬಾರದು. ಏನೇ ವ್ಯತ್ಯಾಸಗಳು ಬಂದರು ಅದನ್ನ ಸರಿದೂಗಿಸಿಕೊಂಡು ಹೋಗುವ ತೀರ್ಮಾನಕ್ಕೆ ಬರಬೇಕು. ಇಲ್ಲವಾದರೆ ಒಳಮೀಸಲಾತಿ ಜಾರಿ ಮತ್ತೇ ಮುಂದೆ ಹೋಗುತ್ತದೆ ಎಂದರು. ಆ ರೀತಿ ಆಗಬಾರದು ಉದ್ದೇಶಕ್ಕಾಗಿ ಶನಿವಾರ ನಾವೆಲ್ಲ ಸಭೆ ನಡೆಸಿ, ಒಟ್ಟಾಗಿ ಚರ್ಚೆ ಮಾಡಿದ್ದೇವೆ. ಏನೆ ವರದಿಯಲ್ಲಿ ಬರಲಿ, ಅದನ್ನು ನಾವೆಲ್ಲ ಒಟ್ಟಾಗಿ ಚರ್ಚೆ ಮಾಡಿಕೊಂಡು ಹೋಗಬೇಕು ಎಂಬ ತೀರ್ಮಾನ ಮಾಡಿದ್ದೇವೆ ಎಂದು ತಿಳಿಸಿದರು. ವರದಿ ಬಂದ ನಂತರ ಸ್ವಾಭಾವಿಕವಾಗಿ ಸಂಪುಟದ ತೀರ್ಮಾನಕ್ಕೆ ಹೋಗುತ್ತದೆ. ನಂತರ ಸರ್ಕಾರ ತೀರ್ಮಾನ ತೆಗೆದುಕೊಳ್ಳಲಿದೆ. ಅದು ಬೇರೆ ವಿಚಾರ ಎಂದರು.ಪರಿಶಿಷ್ಟ ವರ್ಗದಲ್ಲಿ 101 ಜಾತಿಗಳಿವೆ. ಅವೆಲ್ಲರಿಗು ನ್ಯಾಯ ಸಿಗಬೇಕು. ಸಣ್ಣ ಸಮುದಾಯದವರಿಗೂ ಸಾಮಾಜಿಕ ನ್ಯಾಯ ಸಿಗಬೇಕು. ಈ ಬಗ್ಗೆ ಸಚಿವರುಗಳು. ಶಾಸಕರುಗಳು, ಭಾಗವಹಿಸಿ ಅಭಿಪ್ರಾಯಗಳನ್ನು ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಒಳಮೀಸಲಾತಿಯ ವರದಿ ಬಂದ ನಂತರ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ, ಎಲ್ಲರಿಗು ನ್ಯಾಯ ಸಿಗವಂತ ರೀತಿಯಲ್ಲಿ ತೀರ್ಮಾನಕ್ಕೆ ಬರಬೇಕು ಎಂದು ಸಲಹೆ ಕೊಡುತ್ತೇವೆ ಎಂದು ಹೇಳಿದರು.ಒಳ ಮೀಸಲಾತಿ ಕುರಿತು ಎಲ್ಲರೂ ಸಹಮತವನ್ನು ವ್ಯಕ್ತ ಮಾಡಿದ್ದಾರೆ.



ಸಚಿವರು, ಶಾಸಕರುಗಳಿಲ್ಲದ ಸಮುದಾಯಗಳಿಗು ನ್ಯಾಯ ಒದಗಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂಬುದನ್ನು ಚರ್ಚೆ ಮಾಡಿದ್ದೇವೆ. ಸಣ್ಣ ಸಮುದಾಯಗಳಲ್ಲಿ ಯಾರು ಶಾಸಕರುಗಳಿಲ್ಲ. ಸಚಿವರುಗಳಿಲ್ಲ. ಅವರಿಗು ನ್ಯಾಯ ಸಿಗಬೇಕಲ್ಲವೇ? ಅದನ್ನು ಗಮನದಲ್ಲಿಟ್ಟುಕೊಂಡು ಚರ್ಚೆ ಮಾಡಿದ್ದೇವೆ. ಈ ವಿಚಾರದಲ್ಲಿ ಗೊಂದಲ ಮಾಡಿಕೊಳ್ಳಬಾರದು. ಇಲ್ಲವಾದರೆ ಮತ್ತೆ ಮುಂದಕ್ಕೆ ಹೋಗುತ್ತದೆ. ಅದು ಹೋಗಬಾರದು. ಎಲ್ಲವನ್ನು ಅನುಸರಿಸಿಕೊಂಡು ಹೋಗಬೇಕು ಎಂಬುದನ್ನು ಸಭೆಯಲ್ಲಿ ಚರ್ಚೆ ಮಾಡಿದ್ದೇವೆ ಎಂದು ತಿಳಿಸಿದರು.

ಸಚಿವರಾದ ಕೆ.ಹೆಚ್.ಮುನಿಯಪ್ಪ, ಹೆಚ್.ಸಿ.ಮಹದೇವಪ್ಪ, ಆರ್.ಬಿ.ತಿಮ್ಮಾಪುರ್, ಶಿವರಾಜಿ ತಂಗಡಗಿ, ವಿಧಾನಸಭಾ ಡೆಪ್ಯೂಟಿ ಸ್ಪೀಕರ್ ರುದ್ರಪ್ಪ ಲಮಾಣಿ, ಶಾಸಕರಾದ ಕೆ.ಎಸ್.ಬಸವಂತಪ್ಪ, ಎ.ಸಿ.ಶ್ರೀನಿವಾಸ್, ದರ್ಶನ್ ದ್ರುವ ನಾರಾಯಣ್, ನಯನಾ ಮೋಟಮ್ಮ, ರೂಪಾಕಲಾ ಶಶಿಧರ್, ನೆಲಮಂಗಲ ಶಾಸಕ ಶ್ರೀನಿವಾಸ್, ಪಾವಗಡ ಶಾಸಕ ಹೆಚ್.ವಿ.ವೆಂಕಟೇಶ್, ವಿಧಾನ ಪರಿಷತ್ ಸದಸ್ಯರಾದ ಡಾ.ತಿಮ್ಮಯ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷ ವಸಂತಕುಮಾರ್, ಸುದಾಮ್ ದಾಸ್. ಮಳವಳ್ಳಿ ಶಾಸಕ ನರೇಂದನಾಮಿ ಸಭೆಯಲ್ಲಿ ಇದ್ದರು.



### ಒಳಮೀಸಲಾತಿ ಜಾರಿಗೆ ಸರ್ಕಾರ ಮೀನಾಮೇಷ

ರಾಜ್ಯದ ಕಾಂಗ್ರೆಸ್ ಸರ್ಕಾರ ಆ.15 ರೊಳಗೆ ಸುಪ್ರೀಂಕೋರ್ಟ್ ಆದೇಶದ ಅನ್ವಯ ಒಳಮೀಸಲಾತಿ ಜಾರಿಗೊಳಿಸದಿದ್ದರೆ ಕಂಡು ಕಂಡಲ್ಲಿ ಸರ್ಕಾರದ ಸಚಿವರು, ಶಾಸಕರುಗಳಿಗೆ ಘೇರಾವ್ ಹಾಕುವುದರ ಜತೆಗೆ ಅಸಹಕಾರ ಚಳವಳಿ ಹಮ್ಮಿಕೊಳ್ಳಲಾಗುವುದು ಎಂದು ಮಾದಿಗ ಮುಖಂಡರಾದ ನಿವೃತ್ತ ಐಎಎಸ್ ಅಧಿಕಾರಿ ಅನಿಲ್‌ಕುಮಾರ್ ಹೇಳಿದರು. ಒಳಮೀಸಲಾತಿ ಜಾರಿಯ ಸಂಪೂರ್ಣ ಜವಾಬ್ದಾರಿಯನ್ನು ರಾಜ್ಯ ಸರ್ಕಾರಕ್ಕೆ ನೀಡಿ ರಾಷ್ಟ್ರದ ಸರ್ವೋಚ್ಚ ನ್ಯಾಯಾಲಯ ತೀರ್ಪು ನೀಡಿ ಇಂದಿಗೆ ಒಂದು ವರ್ಷ ಕಳೆದಿದೆ. ಆದರೆ ನಿಖರ ದತ್ತಾಂಶದ ಹೆಸರಿನಲ್ಲಿ ಕಾಂಗ್ರೆಸ್ ಸರ್ಕಾರ ಮೀನಾಮೇಷ ಎಣಿಸುತ್ತಿದೆ. ಇದು ಮಾದಿಗ ವಿರೋಧಿ ಸರ್ಕಾರ ಎಂಬುದರಲ್ಲಿ ಯಾವುದೇ ಸಂಶಯವಿಲ್ಲ. ಅಂತಿಮವಾಗಿ ಇಡೀ ಮಾದಿಗ ಸಮುದಾಯಕ್ಕೆ ಉಳಿದಿರುವ ಏಕೈಕ ಮಾರ್ಗವೆಂದರೆ ಒಳಮೀಸಲಾತಿ ಜಾರಿ ಮಾಡಿ ಇಲ್ಲವೇ, ಕುರ್ಚಿ ಖಾಲಿ ಮಾಡಿ ಎಂಬುದಾಗಿದೆ ಎಂದರು. ಚಿತ್ರದುರ್ಗದಲ್ಲಿ ನಡೆದ ಐಕ್ಯ ಸಮಾವೇಶ ಹಾಗೂ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಒಳಮೀಸಲಾತಿ ಜಾರಿ ಮಾಡಿಯೇ ತೀರುತ್ತೇವೆ ಎಂದು ಕಾಂಗ್ರೆಸ್ ಸರ್ಕಾರ ಹೇಳಿದೆ.

### ಹೈಕಮಾಂಡ್ ಮಾತ್ರ ಜಾಣ ಮೌನ

ಕಾಂಗ್ರೆಸ್‌ನಲ್ಲಿ ಇಷ್ಟೆಲ್ಲ ಬೆಳವಣಿಗೆ ನಡೆಯುತ್ತಿದ್ದರು ಕೂಡ ಹೈಕಮಾಂಡ್ ಮಾತ್ರ ಜಾಣ ಮೌನವಹಿಸಿದೆ. ಯಾವುದಕ್ಕೇ ಸ್ಪಷ್ಟತೆಯನ್ನು ನೀಡಿಲ್ಲ, ಸಿದ್ದರಾಮಯ್ಯ ಹಾಗೂ ಡಿಕೆಶಿ ಒಂದೇ ತಿಂಗಳಲ್ಲಿ ಮೂರು ಬಾರಿ ದಿಲ್ಲಿಗೆ ಹೋಗಿ ಬಂದ್ರೂ ಕೂಡ ಹೈಕಮಾಂಡ್ ಮಾತ್ರ ನುಣುಚಿಕೊಳ್ಳುವ ಕೆಲಸ ಮಾಡುತ್ತಿದೆ. ಆದ್ರೂ ಸಿದ್ದರಾಮಯ್ಯ ನಾನೇ ಐದು ವರ್ಷ ಸಿಎಂ ಎಂದು ದಿಲ್ಲಿ ಅಂಗಳದಲ್ಲೇ ಗುಡುಗಿದ್ರೂ ಸಂಪೂರ್ಣವಾಗಿ ಬ್ರೇಕ್ ಬಿದ್ದಿಲ್ಲ, ಇತ್ತ ಡಿಕೆಶಿ ಕೂಡ ತೆರೆಮರೆಯಲ್ಲಿ ಸಿಎಂ ಕುರ್ಚಿ ಮೇಲೆ ಕೂರಲು ಇನ್ನಿಲ್ಲದ ಹರಸಾಹಸ ಪಡುತ್ತಿದ್ದಾರೆ. ಇತ್ತ ದಲಿತ ನಾಯಕರು ಒಟ್ಟುಗೂಡಿ ದಲಿತ ಸಿಎಂ ಆಗಬೇಕು ಎಂದು ಗುಟುರು ಹಾಕುತ್ತಿದ್ದಾರೆ. ಹೈಕಮಾಂಡ್ ಸ್ಪಷ್ಟತೆ ಕೊಡುವವರೆಗೂ ಸಿಎಂ ಬದಲಾವಣೆ ಚರ್ಚೆ ಮಾತ್ರ ನಿಲ್ಲಲು ಸಾಧ್ಯವಿಲ್ಲ.

### ಮೀಸಲಾತಿ ಜಾರಿಮಾಡಿ

ಕಾಂಗ್ರೆಸ್ ಸರ್ಕಾರಕ್ಕೆ ಸಾಮಾಜಿಕ ನ್ಯಾಯದ ಮೇಲೆ ನಂಬಿಕೆ ಇದ್ದರೆ ತಕ್ಷಣ ಒಳ ಮೀಸಲಾತಿ ಜಾರಿಗೊಳಿಸಬೇಕು ಎಂದು ದಲಿತ ಮುಖಂಡ ಮೂಡಹಳ್ಳಿ ಮೂರ್ತಿ ಒತ್ತಾಯಿಸಿದರು. ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಜಿಲ್ಲಾ ಮಾದಿಗ ಒಳ ಮೀಸಲಾತಿ ಹೋರಾಟ ಒಕ್ಕೂಟದಿಂದ ಜಿಲ್ಲಾಡಳಿತ ಭವನದ ಎದುರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಒಳ ಮೀಸಲಾರಿ ಜಾರಿಮಾಡುವ ಅಧಿಕಾರ ಆಯಾ ರಾಜ್ಯಗಳಿಗೆ ಇದೆ ಎಂದು ಸುಪ್ರೀಂ ಆದೇಶ ನೀಡಿ ಒಂದು ವರ್ಷ ಕಳೆದರೂ ಸರ್ಕಾರ ಕುಂಟುನೆಪ ಹೇಳುತ್ತಿರುವುದು ಖಂಡನೀಯ.

# ಪ್ರಜ್ವಲ್ ರೇವಣ್ಣಗೆ ಜೀವನ ಪರ್ಯಂತ ಜೈಲು: 10 ಲಕ್ಷ ರೂ.ದಂಡ

• ಆರೋಪ ಸಂಬಂಧ ವಾದ -ಪ್ರತಿವಾದ ಸುದೀರ್ಘ ವಿಚಾರಣೆ ನಡೆಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ

• ಉದಯವಾಹಿನಿ, ಬೆಂಗಳೂರು

**ಪ್ರಜ್ವಲ್ ರೇಪ್ ದೋಷಿ**

ಕೆಆರ್ ನಗರದ ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಅಪಹರಣ ಪ್ರಕರಣದಲ್ಲಿ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜೀವನ ಪರ್ಯಂತ ಜೈಲು ಶಿಕ್ಷೆ ಹಾಗೂ 10 ಲಕ್ಷ ರೂ ಗಳಿಗೂ ಹೆಚ್ಚು ಮೊತ್ತದ ದಂಡ ವಿಧಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ. ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧದ ಆರೋಪ ಸಂಬಂಧ ವಾದ -ಪ್ರತಿವಾದ ಸುದೀರ್ಘ ವಿಚಾರಣೆ ನಡೆಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಜೀವಾವಧಿ ಶಿಕ್ಷೆ ಜೊತೆಗೆ 10 ಲಕ್ಷ ರೂ ದಂಡ ವಿಧಿಸಿ ಆದೇಶಿಸಿದ್ದಾರೆ.

ಇದರಲ್ಲಿ ಸಂತ್ರಸ್ತೆಗೆ 7 ಲಕ್ಷ ರೂ.ಗಳ ಪರಿಹಾರವನ್ನು ನೀಡಲು ಸೂಚಿಸಿದೆ. ಇದಕ್ಕೂ ಮುನ್ನ ವೇಳೆ ಪ್ರಾಸಿಕ್ಯೂಷನ್ ಪರ ವಾದ ಮಂಡಿಸಿದ ಎಸ್‌ಪಿಪಿ ಬಿ.ಎನ್. ಜಗದೀಶ, ಅಧಿಕಾರಯುತ ಸ್ಥಾನದಲ್ಲಿದ್ದ ಪ್ರಜ್ವಲ್ ರೇವಣ್ಣ ಸಂತ್ರಸ್ತ ಮಹಿಳೆಯನ್ನು ಬೆದರಿಸಿ ಆಕೆಯ ಮೇಲೆ ಅತ್ಯಾಚಾರವೆಸಗಿದ್ದರು. ಅವಿದ್ಯಾವಂತೆಯಾಗಿದ್ದ ಆಕೆಯ ಮೇಲೆ ಪದೇ ಪದೇ ಅತ್ಯಾಚಾರ ನಡೆದಿದೆ. ಅಪರಾಧಿಯಿಂದ ಸಂತ್ರಸ್ತೆ ಸುಲಭದ ಬಲಿಯಾಗಿದ್ದಳು. ಆಕೆಯ ಒಪ್ಪಿಗೆಯಿಲ್ಲದೇ ಅತ್ಯಾಚಾರದ ವಿಡಿಯೋ ಸಹ ಮಾಡಿಕೊಂಡಿದ್ದರು. ಬ್ಲಾಕ್‌ಮೇಲ್ ಮಾಡುವ ಉದ್ದೇಶದಿಂದಲೇ, ಅಪರಾಧಿ ಪ್ರಜ್ವಲ್ ರೇವಣ್ಣ ವಿಡಿಯೋ ಮಾಡಿಕೊಂಡಿದ್ದು, ಅವುಗಳನ್ನು ಅಸ್ತ್ರವಾಗಿ ಬಳಸಿಕೊಂಡಿದ್ದಾರೆ. ವಿಡಿಯೋ ಹೊರಬಂದ ನಂತರ ಸಂತ್ರಸ್ತೆ ಆತ್ಮಹತ್ಯೆಗೆ ಯತ್ನಿಸಿದ್ದಳು. ವಿಡಿಯೋ ಬಹಿರಂಗವಾದ ಬಳಿಕ ಆಕೆ ಹಾಗೂ ಆಕೆಯ ಕುಟುಂಬದ ಮರ್ಯಾದೆಗೆ ಧಕ್ಕೆಯಾಗಿದೆ. ಪ್ರಕರಣದಲ್ಲಿ ಸಂತ್ರಸ್ತೆ ದೈಹಿಕವಾಗಿ ಮಾತ್ರವಲ್ಲದೆ ಮಾನಸಿಕವಾಗಿಯೂ ಹಿಂಸೆ ಅನುಭವಿಸಿದ್ದಳು ಎಂದು ನ್ಯಾಯಾಲಯಕ್ಕೆ ವಿವರಿಸಿದರು.

**ಸಾಕ್ಷ್ಯಾಧಾರ ನಾಶಕ್ಕೆ ಯತ್ನ:** ಸಾಕ್ಷ್ಯಾಧಾರ ನಾಶಕ್ಕೆ ಪ್ರಯತ್ನಿಸಲಾಗಿದೆ. ಅಪರಾಧಿಯ ಕುಟುಂಬದವರು ಸಂತ್ರಸ್ತೆಯನ್ನೇ ಅಪಹರಿಸಿ, ತಮಗೆ ಬೇಕಾದ ರೀತಿ ಹೇಳಿಕೆ ಪಡೆದುಕೊಂಡಿದ್ದಾರೆ. ಸಂತ್ರಸ್ತೆಗೆ ಬೆದರಿಕೆಯೊಡ್ಡಿ ಸಾಕ್ಷ್ಯನಾಶಕ್ಕೆ ಯತ್ನಿಸಲಾಗಿದೆ. ಇವೆಲ್ಲವೂ ಗಂಭೀರ ಅಪರಾಧವಾಗಿದೆ. ಸಾಲದಕ್ಕೆ ಕೋರ್ಟ್ ವಿಚಾರಣೆಯನ್ನೂ ವಿಳಂಬ ಮಾಡುವ ಯತ್ನವೂ ನಡೆದಿತ್ತು. ಅಪರಾಧಿಯ ಮೇಲೆ ಮತ್ತಷ್ಟು ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ಬೇರೆ ಬೇರೆ ಮಹಿಳೆಯರ ಮೇಲಿನ ಅತ್ಯಾಚಾರದ ವಿಡಿಯೋಗಳಿವೆ. ಹಣ ಅಧಿಕಾರ ಇರುವ ಇವರಿಗೆ ಕಡಿಮೆ ಶಿಕ್ಷೆಯಾಗಬಾರದು. ಅಪರಾಧಿಗೆ ಯಾವುದೇ ರೀತಿ ಕನಿಕರ ತೋರಬಾರದು. ಅಪರಾಧಿಯ ವಕ್ರ ಮನಸ್ಥಿತಿ ಗಮನದಲ್ಲಿಟ್ಟುಕೊಳ್ಳಬೇಕು. ಗರಿಷ್ಠ ಪ್ರಮಾಣದ ಶಿಕ್ಷೆಯನ್ನೇ ಅಪರಾಧಿ ಪ್ರಜ್ವಲ್ ರೇವಣ್ಣಗೆ ನೀಡಬೇಕು. ಜೀವನಪರ್ಯಂತ ಸೆರೆವಾಸದ ಶಿಕ್ಷೆ ವಿಧಿಸಬೇಕು ಎಂದು ಎಸ್‌ಪಿಪಿ ಬಿ. ಎನ್. ಜಗದೀಶ್ ಮನವಿ ಮಾಡಿದರು.

**ಸಂಸದರಾಗಿ ಆಯ್ಕೆ:** ರಾಜಕಾರಣಿಯಾಗಿ ಕಿರಿಯ ವಯಸ್ಸಿನಲ್ಲೇ ಪ್ರಜ್ವಲ್ ರೇವಣ್ಣ ಸಂಸದರಾಗಿ ಆಯ್ಕೆಯಾಗಿದ್ದರು. ಜನ ಇವರನ್ನು ಆಯ್ಕೆ ಮಾಡಿದ್ದು ಏಕೆ? ಇವರು ಮಾಡಿದ್ದೇನು? ಸಂಸದರೇ ಇಂಥ ಹೀನ ಕೃತ್ಯವೆಸಗಿದಾಗ ಗರಿಷ್ಠ ಪ್ರಮಾಣದ ಶಿಕ್ಷೆಯನ್ನೇ ವಿಧಿಸಬೇಕು. ಪ್ರಜ್ವಲ್ ಬಡವನಲ್ಲ, ಕೋಟ್ಯಾಧಿಪತಿಯಾಗಿದ್ದಾರೆ. ಆದ್ದರಿಂದ, ಸೆಕ್ಷನ್ 357ರ ಅಡಿಯಲ್ಲಿ ಹೆಚ್ಚಿನ ಮೊತ್ತದ ದಂಡ ವಿಧಿಸಿ, ಅದರ ಬಹುಭಾಗವನ್ನು ಸಂತ್ರಸ್ತೆಗೆ ಪರಿಹಾರವಾಗಿ



ನೀಡಬೇಕು. ವಿಡಿಯೋ ಬಹಿರಂಗಗೊಂಡ ಬಳಿಕ ಆಕೆ ಹೊರಗೆ ದುಡಿಯಲು ಹೋಗದಂತಾಗಿದೆ. ಆದ್ದರಿಂದ, ಗರಿಷ್ಠ ಪ್ರಮಾಣದ ಶಿಕ್ಷೆ ನೀಡಬೇಕು ಎಂದು ಪ್ರಾಸಿಕ್ಯೂಷನ್ ಪರ ವಕೀಲ ಅಶೋಕ್ ನಾಯಕ್ ವಾದ ಮಂಡಿಸಿದರು.

**ಪ್ರಜ್ವಲ್ ಜನಸೇವೆ:** ಇದಕ್ಕೆ ವಿರೋಧ ವ್ಯಕ್ತಪಡಿಸಿದ ಪ್ರಜ್ವಲ್ ಪರ ವಾದ ಮಂಡಿಸಿದ ವಕೀಲರಾದ ನಳೀನಾ ಮಾಯೇಗೌಡ, ಯುವ ಸಂಸದನಾಗಿ ಪ್ರಜ್ವಲ್ ಜನಸೇವೆ ಮಾಡಿದ್ದಾರೆ. ಹಣ ಮಾಡಬೇಕೆಂಬ ಉದ್ದೇಶದಿಂದ ರಾಜಕಾರಣಕ್ಕೆ ಬಂದವರಲ್ಲ. ಆರೋಪಿಯ ರಾಜಕೀಯ ಸ್ಥಾನಮಾನ ಶಿಕ್ಷೆಗೆ ಕಾರಣವಾಗಬಾರದು. ಇಷ್ಟು ದಿನ ಅವರು ಸಂಪಾದಿಸಿದ್ದ ಒಳ್ಳೆಯ ಹೆಸರು ಏನಾಗಬೇಕು. ಸಂತ್ರಸ್ತೆ ಸಮಾಜದಿಂದ ತಿರಸ್ಕೃತಗೊಂಡವರಲ್ಲ. ಸಂಸಾರದೊಂದಿಗೆ ಎಂದಿನಂತೆ ಜೀವನ ಸಾಗಿಸುತ್ತಿದ್ದಾರೆ. ಚುನಾವಣಾ ಸಂದರ್ಭದಲ್ಲಿಯೇ ವಿಡಿಯೋ ಹರಿಬಿಡಲಾಗಿದ್ದು, ಪ್ರಜ್ವಲ್ ವಿರುದ್ಧ ರಾಜಕೀಯ ಪಿತೂರಿ ನಡೆಸಲಾಗಿದೆ. ಪ್ರಜ್ವಲ್ ಯುವಕನಾಗಿದ್ದು ಆತನ ಭವಿಷ್ಯವನ್ನೂ ಗಮನಿಸಬೇಕು. ಈಗಾಗಲೇ ಮಾಧ್ಯಮಗಳಲ್ಲಿ ತೇಜೋವಧೆ ಆಗಿದೆ. ವಯಸ್ಸಾದ ತಂದೆ-ತಾಯಿ ಇದ್ದಾರೆ. ಅವರ ತಾತ ಮಾಜಿ ಪ್ರಧಾನಿಯಾಗಿದ್ದಾರೆ. ನ್ಯಾಯಾಲಯ ವಿಧಿಸುವ ಶಿಕ್ಷೆಯಿಂದ ಪ್ರಜ್ವಲ್ ಅವರ ಭವಿಷ್ಯಕ್ಕೆ ಹಾನಿಯಾಗಬಾರದು ಎಂದು ಮನವಿ ಮಾಡಿದರು.

**ಕಣ್ಣೀರಿಡುತ್ತಲೇ ಪ್ರತಿಕ್ರಿಯೆ:** ವಾದ ಆಲಿಸಿದ ನ್ಯಾಯಾಧೀಶರು, ಪ್ರಜ್ವಲ್ ಅವರನ್ನು ಕುರಿತು, ನೀವೇನಾದರೂ ಹೇಳಲು ಬಯಸುವಿರೇ ಎಂದು ಪ್ರಶ್ನಿಸಿದರು. ಅದಕ್ಕೆ ಕಣ್ಣೀರಿಡುತ್ತಲೇ ಪ್ರತಿಕ್ರಿಯಿಸಿದ ಪ್ರಜ್ವಲ್, ಹಲವು ಮಹಿಳೆಯರೊಂದಿಗೆ ಈ ಕೃತ್ಯವೆಸಗಿದ್ದೇನೆ ಎಂದು ಆರೋಪಿಸಲಾಗುತ್ತಿದೆ. ಸಂಸದನಾದಾಗ ಯಾರೂ ಇಂಥ ಆರೋಪ ಮಾಡಿಲ್ಲ. ರೇಪ್ ಮಾಡಿದ್ದೇನೆಂದು ಯಾರೂ ಹೇಳಿಲ್ಲ. ಆರು ತಿಂಗಳಿಂದ ತಂದೆ-ತಾಯಿಯನ್ನು ನೋಡಿಲ್ಲ. ನಾನು ಮಾಡಿದ ಒಂದೇ ತಪ್ಪೇನೆಂದರೆ ರಾಜಕೀಯದಲ್ಲಿ ಬೇಗ ಬೆಳೆದದ್ದು. ಈ ವಿಚಾರದಲ್ಲಿ ಮಾಧ್ಯಮಗಳನ್ನೂ ದೂರುವುದಿಲ್ಲ. ಕೋರ್ಟ್ ಆದೇಶಕ್ಕೆ ತಲೆ ಬಾಗುತ್ತೇನೆ ಎಂದು ನುಡಿದರು.

### ಶಿಕ್ಷೆಯ ವಿವರ

- ಐಪಿಸಿ ಸೆಕ್ಷನ್ 376 (2)(ಕೆ)ರಡಿ ಜೀವಾವಧಿ ಶಿಕ್ಷೆ ಹಾಗೂ 5 ಲಕ್ಷ ರೂ. ದಂಡ
- 376(2)(ಎನ್ ) ಅಡಿ ಪದೇಪದೆ ಅತ್ಯಾಚಾರಕ್ಕೆ ಜೀವನಪರ್ಯಂತ ಜೈಲು, 5 ಲಕ್ಷ ರೂ. ದಂಡ
- ಐಪಿಸಿ ಸೆಕ್ಷನ್ 354(ಎ) ಅಡಿ 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ
- ಐಪಿಸಿ ಸೆಕ್ಷನ್ 354 (ಬಿ) ಅಡಿ 7 ವರ್ಷ ಸೆರೆವಾಸ, 50,000 ರೂಪಾಯಿ ದಂಡ
- ಐಪಿಸಿ ಸೆಕ್ಷನ್ 354 (ಸಿ) ಅಡಿ 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ
- ಸೆಕ್ಷನ್ 506 ಅಡಿ 2 ವರ್ಷ ಸೆರೆವಾಸ 10,000 ರೂ. ದಂಡ
- ಸೆಕ್ಷನ್ 201 ಅಡಿ 3 ವರ್ಷ ಸೆರೆವಾಸ 25,000 ರೂ. ದಂಡ
- ಐಟಿ ಕಾಯ್ದೆ ಸೆ.66(ಇ) ಅಡಿ 3 ವರ್ಷ 25,000 ರೂ. ದಂಡ.
- ಪ್ರಜ್ವಲ್ ರೇವಣ್ಣಗೆ ಇಂದಿನಿಂದಲೇ ಶಿಕ್ಷೆ ಆರಂಭ, ಇಲ್ಲಿಯವರೆಗಿನ ಜೈಲುವಾಸ ಮೈನಸ್ ಆಗುವುದಿಲ್ಲ.
- ಏಕೆಂದರೆ ಈ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಬಂಧನವಾಗಿರಲಿಲ್ಲ, ಕೇವಲ ಬಾಡಿ ವಾರಂಟ್ ಮೇಲೆ ಪ್ರಜ್ವಲ್‌ನನ್ನು ವಶಕ್ಕೆ ಪಡೆಯಲಾಗಿತ್ತು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,135 /Gram(24ct) ₹9,290/Gram(22ct) | ಬೆಳ್ಳಿ: ₹113.00/Gram

# ರಾಜ್ಯ ಸರ್ಕಾರದ ವಿರುದ್ಧ ಮಾದಿಗ ಸಮುದಾಯ ಆಕ್ರೋಶ

## ಒಳಮೀಸಲಾತಿ ವಿಳಂಬ: ಡಿ.ಸಿ ಕಚೇರಿ ಎದುರು ಅರೆಬೆತ್ತಲೆ ಪ್ರತಿಭಟನೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಒಳಮೀಸಲಾತಿ ಜಾರಿ ವಿಚಾರವಾಗಿ ರಾಜ್ಯ ಸರ್ಕಾರ ವಿಳಂಬ ನೀತಿ ತೋರುತ್ತಿದೆ. ತಕ್ಷಣವೇ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಮಾದಿಗ ಮಹಾಸಭಾ, ದಲಿತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು, ಮುಖಂಡರು ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಅರೆ ಬೆತ್ತಲೆ ಪ್ರತಿಭಟನೆ ನಡೆಸಿದರು. ಜಿಲ್ಲಾಡಳಿತ ಭವನದ ಮುಂದೆ ಜಮಾವಣೆಗೊಂಡ ಕಾರ್ಯಕರ್ತರು ಬೇಕೇ ಬೇಕು ನ್ಯಾಯ ಬೇಕು, ಒಳ ಮೀಸಲಾತಿ ಹೋರಾಟಕ್ಕೆ ಜಯವಾಗಲಿ, ಒಳಮೀಸಲಾತಿ ಜಾರಿಗೊಳಿಸದ ಸರ್ಕಾರಕ್ಕೆ ಧಿಕ್ಕಾರ ಎಂದು ಘೋಷಣೆಗಳನ್ನು ಕೂಗಿದರು.

ಪ್ರತಿಭಟನಕಾರರು ಜಿಲ್ಲಾಡಳಿತ ಭವನದ ಮೆಟ್ಟಿಲುಗಳ ಮುಂಭಾಗದಲ್ಲಿ ಪ್ರತಿಭಟನೆಗೆ ಕುಳಿತಿದ್ದರು. ಈ ವೇಳೆ ಸ್ಥಳಕ್ಕೆ ಬಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಹಾಗೂ ಅಧಿಕಾರಿಗಳ ನಡುವೆ ಮಾತಿನ ಚಕಮಕಿ ಸಹ ನಡೆಯಿತು.

ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಬಾಲಕುಂಟಹಳ್ಳಿ ಗಂಗಾಧರ್ ಮಾತನಾಡಿ, ಮಂದಕೃಷ್ಣ ಮಾದಿಗ, ಎ.ನಾರಾಯಣಸ್ವಾಮಿ ಸೇರಿದಂತೆ ಮಾದಿಗ ಸಮಾಜದ ಎಲ್ಲಾ ಸಚಿವರು ಮತ್ತು ಶಾಸಕರು ಒಳಮೀಸಲಾತಿ ಹೋರಾಟ ಬೆಂಬಲಿಸಿದ್ದಾರೆ. ಒಳಮೀಸಲಾತಿ


ಉದಯವಾಹಿನಿ ಚಿತ್ರ

ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇದೆ ಎಂದು ಸುಪ್ರೀಂಕೋರ್ಟ್ ಆದೇಶಿಸಿದೆ.

ಹೀಗೆ ಆದೇಶಿಸಿ ಒಂದು ವರ್ಷವಾದರೂ ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ನೆರೆಯ ಆಂಧ್ರಪ್ರದೇಶ, ತೆಲಂಗಾಣ ಸರ್ಕಾರಗಳು ಒಳಮೀಸಲಾತಿ ಜಾರಿಗೊಳಿಸಿವೆ. ಅಹಿಂದ ನಾಯಕ ಎಂದು ಕರೆಸಿಕೊಳ್ಳುವ ಸಿದ್ದರಾಮಯ್ಯ ಮಾತ್ರ ಒಳಮೀಸಲಾತಿ ಜಾರಿಯ ವಿಚಾರವಾಗಿ ವಿಳಂಬ ಮಾಡುತ್ತಿದ್ದಾರೆ ಎಂದರು.

### ಭವನಕ್ಕೆ ನುಗ್ಗಲು ಯತ್ನ

**ಹೋರಾಟಗಾರರು ಜಿಲ್ಲಾಡಳಿತ ಭವನಕ್ಕೆ ನುಗ್ಗಲು ಯತ್ನಿಸಿದರು. ಭವನದ ಮುಖ್ಯದ್ವಾರ ಪ್ರವೇಶಿಸುವಾಗ ಪೊಲೀಸರು ಅಡ್ಡ ನಿಂತರು. ಈ ವೇಳೆ ಒಳ ಬಂದವರನ್ನು ಬಲವಂತವಾಗಿ ಹೊರಗೆ ಎಳೆದರು. ಈ ವೇಳೆ ಪೊಲೀಸರು ಮತ್ತು ಪ್ರತಿಭಟನಕಾರರು ನಡುವೆ ವಾಗ್ವಾದ ನಡೆದವು. ತಕ್ಷಣವೇ ಮುಖ್ಯದ್ವಾರದ ಬಾಗಿಲು ಬಂದ್ ಮಾಡಲಾಯಿತು. ಆಗಲೂ ರಾಜ್ಯ ಸರ್ಕಾರದ ವಿರುದ್ಧ ಮುಖಂಡರು ತೀವ್ರವಾಗಿ ವಾಗ್ವಾಳಿ ನಡೆಸಿದರು.**

ಒಂದು ವರ್ಷವಾದರೂ ರಾಜ್ಯ ಸರ್ಕಾರಕ್ಕೆ ಒಳಮೀಸಲಾತಿ ಜಾರಿಗೊಳಿಸಲು ಸಾಧ್ಯವಾಗಿಲ್ಲ. ಈ ಕೂಡಲೇ ಈ ಬಗ್ಗೆ ಆದೇಶ ಮಾಡದಿದ್ದರೆ ಹೋರಾಟ ತೀವ್ರಗೊಳಿಸುತ್ತೇವೆ ಎಂದರು.

ಈಗಾಗಲೇ 30 ವರ್ಷಗಳಿಗಿಂತಲೂ ಹೆಚ್ಚಿನ ಸಮಯದಿಂದ ಹೋರಾಟ ನಡೆಸಿದ್ದೇವೆ. ಪ್ರಕರಣಗಳು ದಾಖಲಾಗಿವೆ. ಜೈಲಿಗೂ ಹೋಗಿದ್ದೇವೆ. ಮತ್ತೆ ನಾವು ಹೋರಾಟಕ್ಕೆ ಇಳಿದರೆ ಅದು ಯಾವ ಸ್ವರೂಪದಲ್ಲಿ ಇರುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಸರ್ಕಾರ ಇದಕ್ಕೆ ಅದಕ್ಕೆ ಅವಕಾಶ ನೀಡಬಾರದು ಎಂದು ಹೇಳಿದರು.

ಅಂಬೇಡ್ಕರ್ ಸೇನೆಯ ನಾರಾಯಣಸ್ವಾಮಿ, ಈ ಧರೆ ಪ್ರಕಾಶ್, ನಾಗಪ್ಪ, ಸಿ.ಎಂ.ಮಂಜುನಾಥ್, ಎಸ್.ಎನ್.ರಮೇಶ್, ಮೂರ್ತಿ, ಸಾವಿತ್ರಮ್ಮ, ಕಾಳಪ್ಪ, ಪಿಳ್ಳಾಂಜನಪ್ಪ, ಸಾದಲಿ ಮಂಜುನಾಥ್, ವೆಂಕಟರಮಣಪ್ಪ, ರಮಣ್ ಅಕೇಶ್, ತಿರುಮಳಪ್ಪ, ಕದಿರಪ್ಪ, ಪರಮೇಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ

**ಅರೆ ಬೆತ್ತಲೆ ಪ್ರತಿಭಟನೆಯಲ್ಲಿ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಅವರಿಗೆ ನಮ್ಮ ಸಮುದಾಯದ ಬಗ್ಗೆ ಕರುಣೆ ಬರುತ್ತಿಲ್ಲ. ಆ.4ರಂದು ನಾಗಮೋಹನ ದಾಸ್ ಅವರು ಸರ್ಕಾರಕ್ಕೆ ವರದಿ ಕೊಡುತ್ತೇವೆ ಎಂದಿದ್ದಾರೆ. ಸರ್ಕಾರ ವರದಿ ಪಡೆದು ತಕ್ಷಣವೇ ಆದೇಶ ಮಾಡಬೇಕು. ಸಿದ್ದರಾಮಯ್ಯ ಅವರು ಸಬೂಬು ಹೇಳಬಾರದು ಎಂದು ಬಾಲಕುಂಟಹಳ್ಳಿ ಗಂಗಾಧರ್ ಒತ್ತಾಯಿಸಿದರು.**

# ರೈತರ ಮೇಲಿನ ಮೊಕದ್ದಮೆ ಹಿಂಪಡೆಯಿರಿ: ಎಸ್.ಮುನಿಸ್ವಾಮಿ

• **ಉದಯವಾಹಿನಿ, ಚಿಂತಾಮಣಿ**

ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ದಿನಕ್ಕೊಂದು ಭ್ರಷ್ಟಾಚಾರದ ಅವಾಂತರ, ವಿವಿಧ ನಿಗಮಗಳ ಹಣವನ್ನು ನುಂಗಿ ನೀರು ಕುಡಿಯುತ್ತಿದೆ' ಎಂದು ಮಾಜಿ ಸಂಸದ ಎಸ್.ಮುನಿಸ್ವಾಮಿ ಆರೋಪಿಸಿದರು.ತಿಮ್ಮಸಂದ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಒಂದು ಕೋಮಿನ ಬೆಂಬಲದಿಂದ ಜಯಗಳಿಸಿದ್ದೇವೆ ಎಂಬ ಭ್ರಮೆಯಲ್ಲಿ ಮುಳುಗಿದೆ. ಒಂದು ಕೋಮನ್ನು ಮೆರೆಸುತ್ತಿದೆ. ಉಗ್ರವಾದಿಗಳಿಗೆ ಬೆಂಬಲ ನೀಡುತ್ತಿರುವವರನ್ನು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯು ಬ್ರದರ್ಸ್, ಅಮಾಯಕರು, ಲೋಕಜ್ಞಾನ ಇಲ್ಲದವರು ಎಂದು ಹೇಳುತ್ತಿದ್ದಾರೆ. ಎನ್‌ಐಎ ಅಧಿಕಾರಿಗಳು ರಾತ್ರೋರಾತ್ರಿ ಆಗಮಿಸಿ ರಾಜ್ಯದ ವಿವಿಧ ಭಾಗಗಳಲ್ಲಿ ಆಶ್ರಯ ಪಡೆದಿರುವ ಉಗ್ರಗಾಮಿಗಳನ್ನು ಹಾಗೂ ಅವರಿಗೆ ಬೆಂಬಲ ನೀಡುತ್ತಿರುವವರನ್ನು ಬಂಧಿಸಿ ಕರೆದೊಯ್ಯುತ್ತಿದ್ದಾರೆ' ಎಂದು ಟೀಕಿಸಿದರು.

'ಸಚಿವ ಜಮೀರ್ ಅಹ್ಮದ್ ಖಾನ್ ಅವರಿಂದ ವಕ್ಫ್


ಉದಯವಾಹಿನಿ ಚಿತ್ರ

ಜಮೀನು ವಿವಾದ ಬುಗಿಲೆದ್ದಿತು.

ನೂರಾರು ವರ್ಷಗಳಿಂದ ರೈತರು ಉಳುಮೆ ಮಾಡುತ್ತಿದ್ದ ಜಮೀನುಗಳನ್ನು ವಕ್ಫ್ ಸೇರಿದ್ದು ಎಂದು ಅಧಿಕಾರಿಗಳ ಮೂಲಕ ವಶಪಡಿಸಿಕೊಳ್ಳಲು ಆರಂಭಿಸಿದರು. ರೈತರು ಪ್ರತಿಭಟನೆಗೆ ಇಳಿದಾಗ ಎಚ್ಚೆತ್ತುಕೊಂಡ ಸಿದ್ದರಾಮಯ್ಯ ರೈತರ ಯಾವುದೇ ಜಮೀನು ವಶಪಡಿಸಿಕೊಳ್ಳುವುದಿಲ್ಲ, ರೈತರ ಮೇಲೆ ದಾಖಲಿಸಿರುವ ಮೊಕದ್ದಮೆಗಳನ್ನು ವಾಪಸ್ ಪಡೆಯಲಾಗುವುದು ಎಂದು ಭರವಸೆ ನೀಡಿದ್ದರೂ ರಾಜಕೀಯ ಕಾರಣಗಳಿಂದ ಅಮಾಯಕರ ಮೇಲಿನ ದೌರ್ಜನ್ಯ ದಬ್ಬಾಳಿಕೆ ಮುಂದುವರೆದಿದೆ ಎಂದು ಆರೋಪಿಸಿದರು. ತಿಮ್ಮಸಂದ್ರದಲ್ಲಿ ವಕ್ಫ್ ಜಮೀನಿನ ವಿವಾದದಲ್ಲಿ 92 ವರ್ಷದ ವೃದ್ಧನ ಮೇಲೆ, 87, 82 ವರ್ಷದ ವೃದ್ಧರ ಮೇಲೆ, ಬುದ್ಧಿಮಾಂದ್ಯರ ಮೇಲೆ ರಾಜಕೀಯ ಒತ್ತಡಗಳಿಂದ ಪೊಲೀಸ್ ಅಧಿಕಾರಿಗಳು ಎಫ್‌ಐಆರ್ ದಾಖಲಿಸಿದ್ದಾರೆ. ಕೂಡಲೇ ಮೊಕದ್ದಮೆ ಹಿಂತೆಗೆದುಕೊಂಡು ಕ್ಷಮೆ ಕೇಳಬೇಕು.

**ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ ಮಾತನಾಡಿ, 'ಕ್ಷೇತ್ರದಲ್ಲಿ ರಾಜಕೀಯ ದೌರ್ಜನ್ಯ, ದಬ್ಬಾಳಿಕೆ ಅತಿಯಾಗಿದೆ. ತಿಮ್ಮಸಂದ್ರವಕ್ಫ್ ಜಮೀನಿನ ವಿಷಯದಲ್ಲಿ ಕಳೆದ 18 ತಿಂಗಳಿಂದ ಮನೆಯಿಂದ ಹೊರಬರಲಾಗದೆ ಹಾಸಿಗೆ ಮೇಲೆ ಇರುವ ವ್ಯಕ್ತಿಯ ಮೇಲೆ ಮೊಕದ್ದಮೆ ದಾಖಲಿಸಿದ್ದಾರೆ. ಮೇಲ್ನೋಟಕ್ಕೆ ಬಿಜೆಪಿ, ಜೆಡಿಎಸ್ ಕಾರ್ಯಕರ್ತರನ್ನು ಗುರಿಯಾಗಿಸಿಕೊಂಡು ರಾಜಕೀಯವಾಗಿ ಮಣಿಸಲು ಪೊಲೀಸ್ ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ' ಎಂದು ಆರೋಪಿಸಿದರು.**

# ಕೆಆರ್‌ಎಸ್‌ನಿಂದ ಭ್ರಷ್ಟ ಅಧಿಕಾರಿಗೆ ಸನ್ಮಾನ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗೌರಿಬಿದನೂರು**

ಗ್ರಾಮೀಣ ನೀರು, ನೈರ್ಮಲ್ಯ ಎಂಜಿನಿಯರ್ ಅಂಜಿನೇಯ ಮೂರ್ತಿ ಅವರ ಕಚೇರಿ, ಮನೆಗಳ ಮೇಲೆ ಲೋಕಾಯುಕ್ತ ದಾಳಿ ನಡೆಸಿದಾಗ ರೂ. 5 ಕೋಟಿಗೂ ಹೆಚ್ಚು ಆಸ್ತಿ ಪತ್ತೆಯಾಗಿತ್ತು.

ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಕಾರ್ಯಕರ್ತರು ಅವರನ್ನು ಸನ್ಮಾನಿಸಲು, ನಗರದ ಪ್ರವಾಸಿ ಮಂದಿರದಿಂದ ಆಂಜಿನೇಯ ಮೂರ್ತಿ ಭಾವಚಿತ್ರವನ್ನು ಹಿಡಿದುಕೊಂಡು, ಕಾಲ್ನಡಿಗೆ ಜಾಥಾ ಮೂಲಕ ಕಚೇರಿಗೆ ಸಾಗಿದರು. ಕಚೇರಿಯಲ್ಲಿ ಎಂಜಿನಿಯರ್ ಆಂಜಿನೇಯ ಮೂರ್ತಿ ಇರಲಿಲ್ಲ. ಅವರು ಕಾರ್ಯನಿರ್ವಹಿಸುವ ಕುರ್ಚಿಗೆ ಭಾವಚಿತ್ರವನ್ನು ಇಟ್ಟು ಪೇಟ, ಹೂವಿನ ಹಾರಹಾಕಿ ಸನ್ಮಾನ ಮಾಡಿದರು. ಪಕ್ಷದ ಉಪಾಧ್ಯಕ್ಷ ಜಾಣಗೆರೆ ರವಿ ಮಾತನಾಡಿ, ಭ್ರಷ್ಟ ಅಧಿಕಾರಿಗಳಿಗೆ ಯಾರ ಭಯವು ಇಲ್ಲದೇ ಬೇಕಾಬಿಟ್ಟಿಯಾಗಿ ಹಣ ಮಾಡುವ ದಂದೆಯಲ್ಲಿ ತೊಡಗಿದ್ದಾರೆ. ಇಂತಹ ಭ್ರಷ್ಟ ಅಧಿಕಾರಿಗಳಿಗೆ ಬುದ್ಧಿ ಕಲಿಸಲು ಸನ್ಮಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪಕ್ಷದ ರಾಜ್ಯ ಉಪಾಧ್ಯಕ್ಷ ರಘು ಜಾಣಗೆರೆ, ಜಿಲ್ಲಾ ಉಸ್ತುವಾರಿ ಶ್ರೀನಿವಾಸ್, ಜಿಲ್ಲಾ ಸಮಿತಿ ಅಧ್ಯಕ್ಷ ಡೇನಿಯಲ್, ತಾಲ್ಲೂಕು ಘಟಕದ ಅಧ್ಯಕ್ಷರ ರಂಗನಹಳ್ಳಿ ರಾಜಕುಮಾರ ನಾಯ್ಕ, ಬಾಗೇಪಲ್ಲಿ, ಶಿಡ್ಲಘಟ್ಟ ಪದಾಧಿಕಾರಿಗಳು ಭಾಗಿಯಾಗಿದ್ದರು.

# ಉಸ್ತುವಾರಿ ಸಚಿವರು ಕೆ.ಸಿ.ವ್ಯಾಲಿ, ಎಚ್.ಎನ್.ವ್ಯಾಲಿ ಬಳಸಲಿ: ಸಂಸದ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಕೆ.ಸಿ.ವ್ಯಾಲಿ ಮತ್ತು ಎಚ್.ಎನ್.ವ್ಯಾಲಿ ಯೋಜನೆಯ ನೀರಿನ ಮೂರನೇ ಹಂತದ ಶುದ್ಧೀಕರಣ ಅಗತ್ಯವಿಲ್ಲ ಎಂಬ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರ ಹೇಳಿಕೆಯನ್ನು ಸಂಸದ ಡಾ.ಕೆ.ಸುಧಾಕರ್ ತೀವ್ರವಾಗಿ ಖಂಡಿಸಿದ್ದಾರೆ.ಈ ಕುರಿತು ತಮ್ಮ ಫೇಸ್‌ಬುಕ್ ಖಾತೆ ಮತ್ತು ಎಕ್ಸ್‌ನಲ್ಲಿ ಸಂಸದರು ಹಂಚಿಕೊಂಡಿದ್ದಾರೆ. ಜನರು ಸುರಕ್ಷಿತವಲ್ಲದ ನೀರನ್ನು ಕುಡಿಯಬೇಕು ಎಂದು ಕಾಂಗ್ರೆಸ್ ಸರ್ಕಾರವು ಬಯಸುತ್ತಿದೆಯಾ? ಸಾರ್ವಜನಿಕ ಆರೋಗ್ಯ ಸುರಕ್ಷತೆ ಬಗ್ಗೆ ಕಾಂಗ್ರೆಸ್ ಸರ್ಕಾರಕ್ಕೆ ಕಾಳಜಿ ಇಲ್ಲವಾ?

ಕೆ.ಸಿ ವ್ಯಾಲಿ ಮತ್ತು ಎಚ್.ಎನ್ ವ್ಯಾಲಿ ಯೋಜನೆಗಳಡಿಯಲ್ಲಿ ಮೂರನೇ ಹಂತದ ಶುದ್ಧೀಕರಣ ಅಗತ್ಯವಿಲ್ಲ. ಮೂರು ಹಂತದ ಶುದ್ಧೀಕರಣವಾದರೆ ಕುಡಿಯುವ ನೀರಿಗಾಗಿ ಬಳಸಬಹುದು



ಎಂಬ ರಾಜ್ಯ ಸರ್ಕಾರದ ನಿಲುವು ಅತ್ಯಂತ ಕಳವಳಕಾರಿ ಮತ್ತು ಖಂಡನೀಯ.

**ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು, ಮೂರು ಹಂತದ ಶುದ್ಧೀಕರಣವಾದರೆ ಆ ನೀರನ್ನು ಕುಡಿಯಲು ಬಳಸಬಹುದು ಎಂದು ಹೇಳಿದ್ದಾರೆ. ಈ ನೀರನ್ನು ಮೊದಲು ಸಚಿವರೇ ಕುಡಿದು, ತಮ್ಮ ಮನೆಗಳಲ್ಲಿ ಉಪಯೋಗಿಸಿ ತೋರಿಸಲಿ.**
**ಹಾಗೆಯೇ ಕಾಂಗ್ರೆಸ್ ಶಾಸಕರಿಗೆ ಮತ್ತು ಸಂಪುಟ ಸಹೋದ್ಯೋಗಿಗಳಿಗೆ ಕುಡಿಯಲು ಕೊಡಲಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.**

ಕಾಂಗ್ರೆಸ್ ಸರ್ಕಾರ ದಿವಾಳಿ ಆಗಿದೆ. ಮೂರನೇ ಹಂತದ ಶುದ್ಧೀಕರಣ ಮಾಡಲು ಸರ್ಕಾರಕ್ಕೆ ರಾಜಕೀಯ ಇಚ್ಛಾಶಕ್ತಿ ಇಲ್ಲ ಎಂದು ಪ್ರಾಮಾಣಿಕತೆಯಿಂದ ಒಪ್ಪಿಕೊಳ್ಳಲಿ. ಅದು ಬಿಟ್ಟು ಮೂರನೇ ಹಂತದ ಶುದ್ಧೀಕರಣವೇ ಅಗತ್ಯವಿಲ್ಲ ಎಂದು ಬೇಜವಾಬ್ದಾರಿ ಹೇಳಿಕೆ ನೀಡುವುದು ಯಾವ ಸೀಮೆ ನ್ಯಾಯ ಎಂದು ಡಾ.ಕೆ. ಸುಧಾಕರ್ ಪ್ರಶ್ನಿಸಿದ್ದಾರೆ.

ಕಾಂಗ್ರೆಸ್‌ನ ದಿವಾಳಿ ಸರ್ಕಾರದ ಪಾಪಕ್ಕೆ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಜನರು ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳಬೇಕಾ? ತಮ್ಮ ಪಾಪರ್ ಸರ್ಕಾರದ ಅಯೋಗ್ಯತೆಗೆ ಅಮಾಯಕ ಜನರು ಬಲಿ ಆಗಬೇಕಾ? ಕಾಂಗ್ರೆಸ್ ಸರ್ಕಾರಕ್ಕೆ ಯೋಗ್ಯತೆ ಇದ್ದರೆ ಮೂರನೇ ಹಂತದ ಶುದ್ಧೀಕರಣ ಮಾಡಿಸಲಿ. ಇಲ್ಲವಾದರೆ 2028ರಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಮೂರನೇ ಹಂತದ ಶುದ್ಧೀಕರಣ ಯೋಜನೆ ಜಾರಿ ಮಾಡಲಿದೆ ಎಂದು 'ಎಕ್ಸ್' ಮಾಡಿದ್ದಾರೆ.

# ಟ್ರಯಲ್ ನೆಪದಲ್ಲಿ ಬೈಕ್ ಕಳವು: ಆರೋಪಿ ಸೆರೆ

• **ಉದಯವಾಹಿನಿ, ಬಂಗಾರಪೇಟೆ**

ಟ್ರಯಲಿಂಗ್ ಹೋಗಿ ಬರುವ ನೆಪದಲ್ಲಿ ದ್ವಿಚಕ್ರ ವಾಹನಗಳನ್ನು ಕಳವು ಮಾಡುತ್ತಿದ್ದ ಎಂಬ ಆರೋಪದ ಮೇರೆಗೆ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ ಎಂದು ಬೂದಿಕೋಟೆ ಪೊಲೀಸರು ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಪ್ರದೀಪ್ ಎಚ್ ಬಂಧಿತ ಆರೋಪಿ. ಬಂಧಿತನಿಂದ ರೂ.5.5 ಲಕ್ಷ ಮೌಲ್ಯದ ಐದು ದ್ವಿಚಕ್ರ ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ತಾಲ್ಲೂಕಿನ ಬೂದಿಕೋಟೆ ಗ್ರಾಮದ ನಿವಾಸಿ ಅಶೋಕ್ ಎಂಬುವರು ತಮ್ಮ ಬೈಕ್ ಮಾರಾಟಕ್ಕೆ ಮುಂದಾಗಿದ್ದರು. ಈ ಬೈಕ್ ಖರೀದಿಸುವುದಾಗಿ ಹೇಳಿದ್ದ ಆರೋಪಿ ಪ್ರದೀಪ್, ಬೈಕ್ ಅನ್ನು ಟ್ರಯಲ್ ಮಾಡುವುದಾಗಿ ಹೇಳಿದ್ದ. ಇದನ್ನು ನಂಬಿದ್ದ ಅಶೋಕ್ ಅವರನ್ನು ಬೈಕ್ ಅನ್ನು ನೀಡಿದ್ದರು. ಆದರೆ, ಬೈಕ್ ತೆಗೆದುಕೊಂಡು ಹೋದ ಪ್ರದೀಪ್ ವಾಪಸ್ ಬಂದಿರಲೇ ಇಲ್ಲ. ಈ ಬಗ್ಗೆ ಜುಲೈ 15ರಂದು ಬೂದಿಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.


ಉದಯವಾಹಿನಿ ಚಿತ್ರ

ಈ ಪ್ರಕರಣದ ತನಿಖೆಗಾಗಿ ಡಿವೈಎಸ್‌ಪಿ ಎಸ್. ಪಾಂಡುರಂಗ ಮಾರ್ಗದರ್ಶನದಲ್ಲಿ ಪಿಎಸ್‌ಐ ಬಿ.ವಿ. ಕಿರಣ್ ಕುಮಾರ್ ಮತ್ತು ತಂಡದವರು ಕಾರ್ಯಾಚರಣೆ ಕೈಗೊಂಡಿದ್ದರು. ಕಡೂರು ತಾಲ್ಲೂಕಿನ ಪ್ರದೀಪ್‌ನನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ, ತುಮಕೂರು ಜಿಲ್ಲೆಯ ಶಿರಾ ಮತ್ತು ಕುಣಿಗಲ್, ಮೈಸೂರು, ಚನ್ನರಾಯಪಟ್ಟಣ ಮತ್ತು ಶಿಡ್ಲಘಟ್ಟದಲ್ಲಿ ಐದು ದ್ವಿಚಕ್ರ ವಾಹನಗಳನ್ನು ಕಳವು ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

# ಸರಕು ಸಾಗಣೆ ವಾಹನದಲ್ಲಿ ಕ್ರೀಡಾಕೂಟಕ್ಕೆ ಹೊರಟ ವಿದ್ಯಾರ್ಥಿಗಳು

• **ಉದಯವಾಹಿನಿ, ಕೊರಟಗೆರೆ**

ಕೊರಟಗೆರೆ-ತುಮಕೂರು ಹೆದ್ದಾರಿಯಲ್ಲಿ ತಾಲ್ಲೂಕಿನ ತೋವಿನಕೆರೆ ಸಮೀಪದ ಕೆಸ್ತೂರು ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿಗಳನ್ನು ಕ್ರೀಡಾಕೂಟಕ್ಕೆ ಕರೆದೊಯ್ಯುವಾಗ ಕುರಿಗಳಂತೆ ಮಕ್ಕಳನ್ನು ತುಂಬಿಕೊಂಡು ಹೋಗಿದ್ದು, ಸಾರ್ವಜನಿಕರಿಂದ ಆಕ್ಷೇಪ ವ್ಯಕ್ತವಾಗಿದೆ.

ಹೆದ್ದಾರಿಯ ಲಿಂಗಾಪುರ ಬಳಿಯ ಅಕ್ಷಯ ಕಾಲೇಜಿನ ಆವರಣದಲ್ಲಿ ಕ್ರೀಡಾಕೂಟಕ್ಕಾಗಿ ವಿದ್ಯಾರ್ಥಿಗಳನ್ನು ಗೂಡ್ಸ್ ವಾಹನದಲ್ಲಿ ತುಂಬಿಕೊಂಡು ಹೋಗಲಾಯಿತು. ವಿದ್ಯಾರ್ಥಿಗಳನ್ನು ಸರಕು ಸಾಗಣೆ ವಾಹನಗಳಲ್ಲಿ ಸಾಗಿಸುವುದು ನಿಷೇಧ. ಸಣ್ಣ ವಾಹನದಲ್ಲಿ ಪ್ರೌಢಶಾಲೆಯ 40ಕ್ಕೂ ಹೆಚ್ಚು ಬಾಲಕಿಯರು, ಬಾಲಕರನ್ನು ಗೂಡ್ಸ್ ವಾಹನದೊಳಗೆ ಕಿಕ್ಕಿರಿದು ತುಂಬಲಾಗಿತ್ತು. ಮಕ್ಕಳು ಗೂಡ್ಸ್ ವಾಹನದಲ್ಲಿ ಸಂಚರಿಸುತ್ತಿದ್ದ ದೃಶ್ಯವೇ ಆತಂಕಕಾರಿಯಾಗಿತ್ತು. ವಾಹನದಲ್ಲಿ ತುರ್ತು ಬ್ರೇಕ್ ಹಾಕಿದರೂ ಅಥವಾ ಒಂದು ತಪ್ಪಾದ ತಿರುವಿನಲ್ಲಿ ವಾಹನ ಬಿದ್ದರೂ


ಉದಯವಾಹಿನಿ ಚಿತ್ರ

ಅಪಾಯಕ್ಕೆ ಆಹ್ವಾನ ನೀಡುವಂತಿತ್ತು.

ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ವಿಶ್ವಾಸದಿಂದ ಕಳುಹಿಸುತ್ತಾರೆ.

ಆದರೆ ಶಾಲೆಯೇ ಜೀವದ ಅಪಾಯಕ್ಕೆ ತಳ್ಳಿದರೆ ಯಾರನ್ನು ನಂಬಬೇಕು? ಇಂತಹ ನಿರ್ಲಕ್ಷ್ಯಕ್ಕೆ ಕಾರಣರಾದವರ ಮೇಲೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಪೋಷಕರು ಒತ್ತಾಯಿಸಿದ್ದಾರೆ.

**ಶಾಲಾ ಬಸ್ ಅಥವಾ ಅನುಮೋದಿತ ಮಿನಿ ಬಸ್ ಬಳಕೆ, ಸೀಟುಗಳಿಗೆ ಅನುಗುಣವಾಗಿ ಮಾತ್ರ ವಿದ್ಯಾರ್ಥಿಗಳ ಹಾಜರಾತಿ, ವಾಹನದಲ್ಲಿ ಸುರಕ್ಷತಾ ಬಾಗಿಲು, ಸೀಟ್ ಬೆಲ್ಟ್, ತುರ್ತು ಚಿಕಿತ್ಸಾ ಪೆಟ್ಟಿಗೆ, ಸಿಬ್ಬಂದಿಯ ಮೇಲ್ವಿಚಾರಣೆ ಮತ್ತು ವೇಗ ಮಿತಿಯ ಪಾಲನೆ ಮಕ್ಕಳ ಸಾರಿಗೆಗೆ ಕಡ್ಡಾಯವಾಗಿರುವ ನಿಯಮಗಳಾಗಿವೆ. ಆದರೆ ಈ ನಿಯಮಗಳಲ್ಲಿ ಒಂದನ್ನೂ ಪಾಲಿಸದಿರುವುದು ಅಧಿಕಾರಿಗಳ ಕಾರ್ಯವೈಫಲ್ಯಕ್ಕೆ ಹಿಡಿದ ಕನ್ನಡಿ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ..**

# ವ್ಯಸನ ಮುಕ್ತರನ್ನಾಗಿಸಲು ಜಾಗೃತಿ

## ಡಾ.ಬಿ.ಆರ್.ಅಂಬೇಡ್ಕರ್ ಯುವಜನ, ಗ್ರಾಮೀಣಾಭಿವೃದ್ಧಿ ಸಂಸ್ಥೆ ಕಲಾ ತಂಡದಿಂದ ಬೀದಿ ನಾಟಕ

• **ಉದಯವಾಹಿನಿ, ತುಮಕೂರು**

ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ನಗರದ ಟೌನ್‌ಹಾಲ್ ವೃತ್ತದಲ್ಲಿ ವ್ಯಸನಮುಕ್ತರಾಗುವ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ವಾರ್ತಾ ಇಲಾಖೆಯಿಂದ ಹಮ್ಮಿಕೊಳ್ಳಲಾಗಿತ್ತು. ವೈದ್ಯಕೀಯ, ಎಂಜಿನಿಯರಿಂಗ್ , ಕಾಲೇಜು ವಿದ್ಯಾರ್ಥಿಗಳು ಸಾಕ್ಷಿಯಾದರು. ಡಾ.ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಕಲಾ ತಂಡ ಪ್ರದರ್ಶಿಸಿದ ಬೀದಿ ನಾಟಕ ನೆರೆದಿದ್ದವರಲ್ಲಿ ಜಾಗೃತಿ ಮೂಡಿಸಿತು.

ಮಾದಕ ವಸ್ತು ಸೇವನೆಯಿಂದಾಗುವ ದುಷ್ಪರಿಣಾಮ, ಮಾರಣಾಂತಿಕ ರೋಗಕ್ಕೆ ತುತ್ತಾಗುವುದು, ಅಪರಾಧ ಕೃತ್ಯಗಳಲ್ಲಿ ಭಾಗಿ, ಕುಟುಂಬಕ್ಕಾಗುವ ಹಾನಿ, ಅವಮಾನ ಮೊದಲಾದ ಸಮಸ್ಯೆಗಳ ಬಗ್ಗೆ ಕಲಾವಿದರು ಬೆಳಕು ಚೆಲ್ಲಿದರು. ವಿದ್ಯೋದಯ ಕಾನೂನು ಕಾಲೇಜು ವಿದ್ಯಾರ್ಥಿಗಳಾದ ಕೀರ್ತನ, ಕೆ.ಎಸ್.ಸ್ಮಿತಾ, ಮೇಘಶ್ರೀ, ರಕ್ಷಿತಾ, ಭೂಮಿಕಾ, ದರ್ಶನ್, ಸಿದ್ದೇಶ್, ಲಕ್ಷಿತಾ ರಾಣಿ, ಅಥಾ ಕಲಾ ತಂಡದಲ್ಲಿ ಇದ್ದರು.

ವಾರ್ತಾ ಇಲಾಖೆ ಕಲಾವಿದರಾದ ಡಿ.ಸಿ.ಕುಮಾರ್, ಕಾಂತರಾಜು ಅವರು ಯಮನ ವೇಷ ಧರಿಸಿ 'ಮಾದಕ ದ್ರವ್ಯ ಸೇವನೆಯಿಂದ ಸಾವು ಖಚಿತ' ಎಂಬ ಸಂದೇಶ ಸಾರಿದರು. ಬೃಹದಾಕಾರದ ಮದ್ಯದ ಬಾಟಲಿ, ಸಿಗರೇಟ್ ಮಾದರಿ ಪ್ರದರ್ಶಿಸಿದರು. ಮಾದಕ ವಸ್ತು ಸೇವನೆಯಿಂದ ಆರೋಗ್ಯದ


ಉದಯವಾಹಿನಿ ಚಿತ್ರ

ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ತಿಳಿಸಿಕೊಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪೊಲೀಸ್, ವಾರ್ತಾ, ಸಾರ್ವಜನಿಕ ಸಂಪರ್ಕ ಇಲಾಖೆ, ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ.ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಅಚರ್ಡ್ ಸಂಸ್ಥೆ ಸಹಯೋಗದಲ್ಲಿ ಜಾಗೃತಿ ಕಾರ್ಯಕ್ರಮಗಳು ನಡೆದವು.

ಮನೋ ವೈದ್ಯ ಲೋಕೇಶ್ ಬಾಬು, 'ಇತ್ತೀಚಿನ ದಿನಗಳಲ್ಲಿ ಮಹಿಳೆಯರೂ ಮದ್ಯ, ಮಾದಕ ವ್ಯಸನಿಗಳಾಗುತ್ತಿರುವುದು ಆಘಾತಕಾರಿ ಸಂಗತಿಯಾಗಿದೆ ಎಂದು ಹೇಳಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪುರುಷೋತ್ತಮ್, ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಜಿ.ಹಿಮಂತರಾಜು, ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ರಾಜಶೇಖರ್, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕ ಬಾಲಗುರುಮೂರ್ತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಚಂದ್ರಶೇಖರ್, ವಾರ್ತಾ ಸಹಾಯಕಿ ಆರ್.ರೂಪಕಲಾ ಇತರರು ಉಪಸ್ಥಿತರಿದ್ದರು.

**ಆಧುನಿಕ ಜಗತ್ತಿನಲ್ಲಿ ಮಾದಕ ವಸ್ತು ಬಳಕೆ ಪ್ರಮಾಣ ಹೆಚ್ಚಾಗುತ್ತಿದ್ದು, ನಿಯಂತ್ರಿಸುವುದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಮೋಹಕ ಮಾಯಾ ಜಾಲಕ್ಕೆ ಒಳಗಾದ ಅರ್ಧದಷ್ಟು ಜನರಿಗೆ ಸೂಕ್ತ ಚಿಕಿತ್ಸೆ ದೊರೆಯದೆ ಜೀವಕ್ಕೆ ಕುತ್ತು ತಂದುಕೊಳ್ಳುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಮದ್ಯ, ಮಾದಕ ವಸ್ತುಗಳಿಗೆ ಗುಲಾಮರಾದರೆ ನಮ್ಮನ್ನು ಅಣು-ಅಣುವಾಗಿ ಕೊಲ್ಲುತ್ತದೆ. ಸಮಾಜಘಾತುಕ ಕೃತ್ಯಗಳಲ್ಲಿ ಭಾಗಿಯಾಗುವಂತೆ ಮಾಡುತ್ತದೆ. ಈ ಬಗ್ಗೆ ಎಚ್ಚರ ವಹಿಸಬೇಕು' ಎಂದರು.**

**ಜಿಲ್ಲಾಧಿಕಾರಿ ಶುಭ ಕಲ್ಯಾಣ್**

# ಪಠ್ಯದಲ್ಲಿ ಕ್ವಾಂಟಮ್ ಕಂಪ್ಯೂಟಿಂಗ್ ಅಳವಡಿಕೆ: ಸಚಿವ

• **ಉದಯವಾಹಿನಿ, ಕೋಲಾರ**

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಟ್ಲಘಟ್ಟ ತಾಲ್ಲೂಕಿನ ಅಮರಾವತಿ ಗ್ರಾಮದಲ್ಲಿ ನಿರ್ಮಿಸುತ್ತಿರುವ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ನೂತನ ಕಟ್ಟಡದ ಮೊದಲ ಹಂತದ ಕಾಮಗಾರಿ ನವೆಂಬರ್ ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದರು. ನಗರ ಹೊರವಲಯದ ನಂದಿನಿ ಪ್ಯಾಲೇಸ್‌ನಲ್ಲಿ ನಡೆದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ 5ನೇ ವಾರ್ಷಿಕ ಘಟಿಕೋತ್ಸವದಲ್ಲಿ ಅವರು ಮಾತನಾಡಿದರು.

'ಹೊಸ ಕ್ಯಾಂಪಸ್‌ನ ಎರಡನೇ ಹಂತದ ಕಾಮಗಾರಿ ಈಚೆಗೆ ಕ್ಯಾಬಿನೆಟ್‌ನಲ್ಲಿ 123 ಕೋಟಿ ಬಿಡುಗಡೆ ಮಾಡಲಾಗಿದೆ. ಆದಷ್ಟು ಬೇಗ ಟೆಂಡರ್ ಪ್ರಕ್ರಿಯೆ ಮುಗಿಸಿ ಕಾಮಗಾರಿ ಆರಂಭಿಸುತ್ತೇವೆ. ಕ್ಯಾಂಪಸ್‌ಗೆ ರಸ್ತೆ ಮಾಡಲು 9 ಕೋಟಿ ಅಂದಾಜು ಪಟ್ಟಿ ತಯಾರಿಸಿದ್ದು, ಲೋಕೋಪಯೋಗಿ ಸಚಿವರಿಗೆ ವಿನಂತಿ ಮಾಡಿ ಅನುದಾನ ತರಲಾಗುವುದು ಎಂದರು.

ಚಿಕ್ಕಬಳ್ಳಾಪುರ ಜಿಲ್ಲೆ ನನ್ನದಾಗಿದ್ದರೂ ನಮ್ಮ ಬೇರುಗಳು ಇಂದಿಗೂ ಕೋಲಾರ ಜಿಲ್ಲೆಯಲ್ಲಿವೆ. ಹೀಗಾಗಿ, ಕೋಲಾರದ ಸರ್ಕಾರಿ ಪ್ರಥಮದರ್ಜೆ ಕಾಲೇಜು (ಬಾಲಕರ ಕಾಲೇಜು) ಮತ್ತು ಮಹಿಳೆಯರ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಅಭಿವೃದ್ಧಿಗೆ ಸುಮಾರು 80 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.


ಉದಯವಾಹಿನಿ ಚಿತ್ರ

ಮುಂದಿನ ದಿನಗಳಲ್ಲಿ ದಿನಾಂಕ ನಿಗದಿ ಮಾಡಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು' ಎಂದು ಹೇಳಿದರು. ಇಲಾಖೆಯಲ್ಲಿ ಸಾಕಷ್ಟು ಬದಲಾವಣೆ ತರಲಾಗಿದೆ. ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಹಯೋಗದಲ್ಲಿ ಉದ್ಯೋಗಾವಕಾಶ ಹೆಚ್ಚಿಸಲು ಉನ್ನತ ಶಿಕ್ಷಣದಲ್ಲಿ ಕೌಶಲಕ್ಕೆ ಸಂಬಂಧಿಸಿದಂತೆ ಹೊಸ ಪ್ರಯೋಗ ಮಾಡಲಾಗುತ್ತಿದೆ. ಕರ್ನಾಟಕ ಕ್ವಾಂಟಮ್ ಹೆಸರಿನಲ್ಲಿ ಕ್ವಾಂಟಮ್ ಕಂಪ್ಯೂಟಿಂಗ್ ಬಗ್ಗೆ ಮುಖ್ಯಮಂತ್ರಿ ನೇತೃತ್ವದಲ್ಲಿ ಸಮ್ಮೇಳನ ನಡೆಸಿದ್ದೇವೆ. ಪಠ್ಯದಲ್ಲಿ ಕ್ವಾಂಟಮ್ ಕಂಪ್ಯೂಟಿಂಗ್ ಅಳವಡಿಸಿಕೊಂಡು ಭವಿಷ್ಯದ ಸವಾಲುಗಳಿಗೆ ಸಜ್ಜಾಗಬೇಕು.

ಈ ಸಂಬಂಧ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡುತ್ತೇನೆ. ಜೊತೆಗೆ ಕೃತಕ ಬುದ್ಧಿಮತ್ತೆ (ಎಐ) ಕೂಡ ಹಲವಾರು ಬದಲಾವಣೆ ತರುತ್ತಿದ್ದು, ಈ ವಿಚಾರಕ್ಕೆ ಹೆಚ್ಚಿನ ಒತ್ತು ಕೊಡಬೇಕಿದೆ' ಎಂದರು.

**ಇದು ವಿದ್ಯಾರ್ಥಿಗಳ ಜೀವನದ ನಿರ್ಣಾಯಕ ಸಂದರ್ಭ ಹಾಗೂ ಖುಷಿಯ ಸಂದರ್ಭ. ಹಾಗೆಯೇ ಮೂವರು ಸಾಧಕರಿಗೆ ಡಾಕ್ಟರೇಟ್ ಪದವಿ ನೀಡಲಾಗಿದೆ. ಅವರು ವಿದ್ಯಾರ್ಥಿಗಳಿಗೆ ಮಾದರಿಯಾಗಬೇಕು. ಪಿಚ್ಚಳ್ಳಿ ಶ್ರೀನಿವಾಸ್ ನನಗೆ ಗುರುವಿದ್ದಂತೆ. ಮೊದಲ ಬಾರಿ ಶಾಸಕನಾಗಿದ್ದ ಸಂದರ್ಭದಲ್ಲಿ ವಿಧಾನಸೌಧದಲ್ಲಿ ನಡೆದ ಶಾಸಕರ ದಿನಾಚರಣೆ ಸಂದರ್ಭದಲ್ಲಿ ಅವರು ನನ್ನ ಕೈಯಲ್ಲಿ ಕೆರೆಯ ಹಾಡು ಹಾಡಿಸಿದ್ದರು. ಈಗ ಅವರಿಗೆ ನಾನು ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಅವಕಾಶ ಬಂದೊದಗಿದೆ' ಎಂದು ಹೇಳಿದರು.**

## ಮಿನಿ ನ್ಯೂಸ್

### ಮನೆ ಕಳ್ಳತನ ಪ್ರಕರಣ: ಆರೋಪಿ ಬಂಧನ

• **ಉದಯವಾಹಿನಿ, ಕನಕಪುರ**

ಕೋಡಿಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಬೇವಿನಮರದೊಡ್ಡಿಯಲ್ಲಿ ಜೂನ್ 21 ರಂದು ನಡೆದಿದ್ದ ಕಳ್ಳತನ ಪ್ರಕರಣವನ್ನು ಕೋಡಿಹಳ್ಳಿ ಪೊಲೀಸರು ಬೇಧಿಸಿ ಆರೋಪಿಯನ್ನು ಬಂಧಿಸಿ ಅತನಿಂದ 2.5 ಲಕ್ಷ ಮೌಲ್ಯದ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ. ಬೇವಿನಮರದೊಡ್ಡಿ ಗ್ರಾಮದ ಅರುಣ್ (25) ಬಂಧಿತ ಆರೋಪಿ. ಬೇವಿನಮರದೊಡ್ಡಿ ಗ್ರಾಮದ ವೀಣಾ ಲೋಕೇಶ್ ಅವರ ಮನೆಯಲ್ಲಿ ಒಂದು ತಿಂಗಳ ಹಿಂದೆ ಕಳ್ಳತನವಾಗಿತ್ತು. ಜಮೀನಿನಲ್ಲಿದ್ದ ಜಾನುವಾರುಗಳನ್ನು ಮನೆಗೆ ಕರೆತರಲು ಹೋದಾಗ ಕಳವಾಗಿತ್ತು. ಈ ಬಗ್ಗೆ ಕೋಡಿಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರನ್ನು ದಾಖಲಿಸಿಕೊಂಡಿದ್ದ ಪೊಲೀಸರು ಅನುಮಾನದಿಂದ ಓಡಾಡುತ್ತಿದ್ದ ಅರುಣ್‌ನನ್ನು ಜುಲೈ 24ರಂದು ವಶಕ್ಕೆ ಪಡೆದು ವಿಚರಣೆ ನಡೆಸಿದಾಗ ಕಳ್ಳತನ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಪೊಲೀಸರು ಆರೋಪಿಯಿಂದ 2.5 ಲಕ್ಷ ಮೌಲ್ಯದ ಚಿನ್ನಾಭರಣ ವಶಪಡಿಸಿಕೊಂಡು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಎಸ್‌ಐ ಪ್ರದೀಪ್ ಕುಮಾರ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಕಾನ್ಸ್‌ಟೆಬಲ್ ಧನಂಜಯ, ಕೈಲಾಸ್, ಗಿರೀಶ್, ಅರುಣ್ ಕುಮಾರ್ ಮತ್ತು ಮಲ್ಲೇಶ್ ಪಾಲ್ಗೊಂಡಿದ್ದರು.

### ಧ್ವನಿ, ಬೆಳಕು ಸೌಲಭ್ಯದ ಕೊರತೆ: ನಿಂತಹೋದ ಸಂಗೀತ ಕಛೇರಿಗಳು!

• **ಉದಯವಾಹಿನಿ, ಮೈಸೂರು**

ನನಗಾಗ 14 – 15 ವರ್ಷ. ಚೌಡಯ್ಯ ಸ್ಮಾರಕ ಸಾಂಸ್ಕೃತಿಕ ಸಭಾ ಆರಂಭಿಸಿ, ಕರ್ನಾಟಕ ಶಾಸ್ತ್ರೀಯ ಸಂಗೀತದ ಮೇರು ಪರ್ವತವಾಗಿದ್ದ ಚೆಂಬೈ ವೈದ್ಯನಾಥ ಭಾಗವತಾರ್ ಅವರನ್ನು ಕರೆಸಿದ್ದೆವು. ಅಂಥ ಎಷ್ಟೋ ಮಂದಿಯ ಸಂಗೀತ ಪುರಭವನದಲ್ಲಿ ತುಂಬಿದೆ. ಇಂಥ ಕಟ್ಟಡ ಬಿದ್ದು ಹೋಗುವ ಸ್ಥಿತಿಯಲ್ಲಿದೆ ಎಂದರೆ ಸಂಕಟವಾಗುತ್ತದೆ ವಿ.ವಿ.ಮೊಹಲ್ಲಾದಲ್ಲಿ ಕಳೆದ 6 ದಶಕದಿಂದ ನಿರಂತರವಾಗಿ ಸಂಗೀತೋತ್ಸವ ನಡೆಸುತ್ತಿರುವ ಶ್ರೀಪ್ರಸನ್ನ ವಿದ್ಯಾ ಗಣಪತಿ ಮಹೋತ್ಸವ ಚಾರಿಟಬಲ್ ಟ್ರಸ್ಟ್‌ನ ಕಾರ್ಯದರ್ಶಿ ಸಿ.ಆರ್ .ಹಿಮಾಂಶು, ಪುರಭವನದ ಸ್ಮೃತಿಯನ್ನು ತೆರೆದಿಟ್ಟದ್ದು ಹೀಗೆ.

ಕೊಚ್ಚಿಯ ಟಿ.ವಿ.ಗೋಪಾಲಕೃಷ್ಣನ್, ಪಾಲ್ಘಾಟ್‌ನ ಕೆ.ವಿ.ನಾರಾಯಣಸ್ವಾಮಿ, ಕಂಚಿಯ ಡಿ.ಕೆ.ಜಯರಾಮನ್, ಲಾಲ್ಗುಡಿ ಜಯರಾಮನ್ ಅವರಂಥ ದಿಗ್ಗಜರ ಸಂಗೀತವನ್ನು ಮೈಸೂರಿಗರು ಕೇಳಿಸಿಕೊಂಡಿದ್ದರು. ಅವರ ಕಛೇರಿಗಳಿದ್ದರೆ ದೂರದೂರಿನಿಂದಲ್ಲದೇ ನೆರೆ ರಾಜ್ಯಗಳಿಂದಲೂ ಬರುತ್ತಿದ್ದರು ಎಂದರು. ನಾಲ್ವಡಿ, ಜಯಚಾಮರಾಜೇಂದ್ರ ಒಡೆಯರ್ ಅವರ ಕಾಲದಲ್ಲಿ ಅರಮನೆಯಲ್ಲಿ ಸಂಗೀತ ವಿದ್ವಾಂಸರ ಸಂಗೀತ ಕಛೇರಿ ಆಯೋಜಿಸಿದ್ದರೆ, ಅವರದೇ ಮತ್ತೊಂದು ಕಾರ್ಯಕ್ರಮ ಪುರಭವನದಲ್ಲಿ ಇದ್ದೇ ಇರುತ್ತಿತ್ತು. ನಾಟಕಗಳನ್ನು ನೋಡಲು ಬರುತ್ತಿದ್ದವರು, ಸಂಗೀತಕ್ಕೂ ಕಿವಿಯಾಗುತ್ತಿದ್ದರು. ಅಂಥ ವೈಭವ ಮತ್ತೆ ಸಿಗುವುದು ಕಷ್ಟ' ಎಂದು ಹೇಳಿದರು.

### ಅತ್ಯಾಚಾರ ಸಂತ್ರಸ್ತೆಯ ದಿಟ್ಟ ನಡೆ: ಎಸ್‌ಐಟಿ ಅಧಿಕಾರಿ

• **ಉದಯವಾಹಿನಿ, ಮೈಸೂರು**

ಅತ್ಯಾಚಾರ ಸಂತ್ರಸ್ತೆಯ ದಿಟ್ಟ ನಡೆಯೇ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಮೇಲಿದ್ದ ಆರೋಪ ಸಾಬೀತಾಗಲು ಪ್ರಮುಖ ಕಾರಣ' ಎಂದು ಪ್ರಕರಣದ ವಿಶೇಷ ತನಿಖಾ ತಂಡದ (ಎಸ್‌ಐಟಿ) ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿದ್ದಾರೆ. ಅತ್ಯಾಚಾರ ಆರೋಪವಾದ ಕಾರಣ ಪ್ರಕರಣವನ್ನು ಸೂಕ್ಷ್ಮವಾಗಿ ನಿರ್ವಹಿಸಬೇಕಾಗಿತ್ತು.

ತಂಡವು ಆರೋಪಿಯನ್ನು ಹುಡುಕುವ ವೇಳೆಗಾಗಲೇ ಆತನೇ ನಮ್ಮ ಬಲೆಗೆ ಬಿದ್ದ. ಅಲ್ಲಿಂದ ಪ್ರಕರಣ ತಿರುವು ಪಡೆದುಕೊಂಡಿತು. ಸತತವಾಗಿ ಏಳು ತಿಂಗಳು ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸಿ 180 ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದೆವು ಎಂದು ತಂಡದ ಅಧಿಕಾರಿಯೊಬ್ಬರು ತಿಳಿಸಿದರು. ತನಿಖೆಯ ವೇಳೆ ಸಂತ್ರಸ್ತೆಯು ಉತ್ತಮವಾಗಿ ಸಹಕರಿಸಿದ್ದಾರೆ. ಆಕೆ ಮಾಡಿರುವ ಆರೋಪಗಳಿಗೆ ಸ್ಪಷ್ಟನೆ ಕೇಳಲಾಗಿತ್ತು. ಪ್ರಕರಣದ ತನಿಖೆ ಮುಗಿಯುವವರೆಗೂ ಆಕೆ ತೋರಿದ ದಿಟ್ಟತನ ಮಾದರಿ ಎಂದರು. ಪ್ರಕರಣದ ತನಿಖೆಗಾಗಿ ಎಡಿಜಿಪಿ ಬಿ.ಕೆ.ಸಿಂಗ್ ನೇತೃತ್ವದಲ್ಲಿ ಎಸ್‌ಪಿಗಳಾಗಿದ್ದ ಸೀಮಾ ಲಾಟ್ಕರ್ ಹಾಗೂ ಸುಮನ್ ಅವರು ಎಸ್‌ಐಟಿ ತಂಡ ಮುನ್ನಡೆಸಿದ್ದರು. ಅವರೊಂದಿಗೆ 26 ಅಧಿಕಾರಿಗಳೂ ದಾಖಲೆ ಕಲೆಹಾಕುವಲ್ಲಿ ಶ್ರಮಿಸಿದ್ದರು.

ಅಂತರಾಳದಿಂದ.. EDITORIAL

# ಪ್ರಜ್ವಲ್ ರೇವಣ್ಣ ಗೌಡ ದುರಂತ ಯುವನಾಯಕರಿಗೆ ಪಾಠವಾಗಲಿ

ರಾಜ್ಯದಲ್ಲಿ ಒಂದೆಡೆ ಸಂಘ ಪರಿವಾರದ ಜೊತೆಗೆ ಜೆಡಿಎಸ್ ನಡೆಸಿದ ಅನೈತಿಕ ಮೈತ್ರಿ ಚರ್ಚೆಯಲ್ಲಿರುವಾಗಲೇ, ಜೆಡಿಎಸ್‌ನ ಯುವ ಮುಖಂಡ ಪ್ರಜ್ವಲ್ ರೇವಣ್ಣ ಗೌಡನ ಲೈಂಗಿಕ ಹಗರಣ ರಾಷ್ಟ್ರಮಟ್ಟದಲ್ಲಿ ತೆರೆದುಕೊಂಡಿತು. ಕೋಮುವಾದಿ ಶಕ್ತಿಗಳ ಜೊತೆಗೆ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ನಡೆಸಿದ ಅನೈತಿಕ ರಾಜಕಾರಣಕ್ಕೆ ಹೋಲಿಸಿದರೆ ಯುವ ನಾಯಕ ಪ್ರಜ್ವಲ್‌ನ ಅನೈತಿಕ ಕೃತ್ಯಗಳು ಏನೇನೂ ಅಲ್ಲ. ಆದರೆ ಕುಮಾರಸ್ವಾಮಿಯವರು ಕೇಂದ್ರದಲ್ಲಿ ಮಂತ್ರಿಯಾದರು, ಪ್ರಜ್ವಲ್ ಜೈಲು ಸೇರಿದನು. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೋಟದ ಮನೆಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ಪ್ರಜ್ವಲ್‌ನ್ನು ದೋಷಿ ಎಂದು ತೀರ್ಮಾನಿಸಿ ತೀರ್ಪು ನೀಡಿದೆ. ಕೆಲ ಸಮಯದಿಂದ ತಣ್ಣಗಾಗಿದ್ದ ಪ್ರಜ್ವಲ್ ಲೈಂಗಿಕ ಹಗರಣ ಇದೀಗ ಮತ್ತೆ ಮುನ್ನೆಲೆಗೆ ಬಂದಿದ್ದು, ರಾಷ್ಟ್ರಮಟ್ಟದಲ್ಲಿ ನಾಯಕನಾಗಿ ಬೆಳೆಯುವ ಎಲ್ಲಾ ಅರ್ಹತೆಯಿದ್ದ ಯುವ ಮುಖಂಡನೊಬ್ಬ ಕುಟುಂಬ, ಜಾತಿ, ಹಣ ಇತ್ಯಾದಿಗಳ ಬಲದ ಮದದಿಂದ ಹೇಗೆ ತನ್ನ ಜೊತೆಗೆ ಇಡೀ ಪಕ್ಷವನ್ನೇ ದುರಂತದ ಕಡೆಗೆ ಸಾಗಿಸಿದ ಎನ್ನುವುದು ಈ ನಾಡಿನ ಇನ್ನುಳಿದ ಪ್ರಬಲ ರಾಜಕೀಯ ಕುಟುಂಬಗಳಿಗೆ ಪಾಠವಾಗಬೇಕಾಗಿದೆ.

> **ಪ್ರಜ್ವಲ್ ಮಾತ್ರವಲ್ಲ ಆತನ ತಂದೆ ರೇವಣ್ಣ ಅವರ ಹೆಸರು ಕೂಡ ಲೈಂಗಿಕ ಹಗರಣದಲ್ಲಿ ಕೇಳಿ ಬಂದಿತ್ತು. ದೇವೇಗೌಡರ ನಿವಾಸದಲ್ಲೇ ಅವರ ಬಂಧನವೂ ಆಗಿತ್ತು. ಈ ಸಂದರ್ಭದಲ್ಲಿ 'ಲೈಂಗಿಕ ಹಗರಣದಲ್ಲಿ ದೇವೇಗೌಡರ ಕುಟುಂಬವನ್ನು ಎಳೆದು ತರಬೇಡಿ' ಎಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಮಾಧ್ಯಮಗಳಿಗೆ ಸೂಚನೆ ನೀಡಿದ್ದರು. ಆದರೆ, ಪ್ರಜ್ವಲ್‌ನ ಚುನಾವಣಾ ಪ್ರಚಾರದಲ್ಲಿ ದೇವೇಗೌಡರು ಸೇರಿದಂತೆ ಜೆಡಿಎಸ್‌ನ ಹಿರಿಯ ಮುಖಂಡರು ಭಾಗವಹಿಸಿದ್ದರು.**

ಉಪ್ರಜ್ವಲ್ ರೇವಣ್ಣನ ಜೊತೆಗೆ ಜೆಡಿಎಸ್ ಪಕ್ಷ, ದೇವೇಗೌಡರ ಕುಟುಂಬ ಅಂತರವನ್ನು ಕಾಪಾಡಲು ಪ್ರಯತ್ನಿಸುತ್ತಾ ಬಂದಿದೆಯಾದರೂ ಅದರಲ್ಲಿ ಯಶಸ್ವಿಯಾಗಿಲ್ಲ. ದೇವೇಗೌಡರ ಕುಟುಂಬವನ್ನು ಹೊರಗಿಟ್ಟು ಪ್ರಜ್ವಲ್ ಪ್ರಕರಣವನ್ನು ನೋಡಲು ಸಾಧ್ಯವೇ ಇಲ್ಲ. ಲೋಕಸಭಾ ಚುನಾವಣೆಗೆ ಪೂರ್ವದಲ್ಲೇ ಪ್ರಜ್ವಲ್‌ನ ಅನೈತಿಕ ಕೆಲಸಗಳ ಬಗ್ಗೆ ವದಂತಿಗಳು ಹರಡಿದ್ದವು. ಕುಟುಂಬಕ್ಕೆ ಆ ಬಗ್ಗೆ ಅರಿವೂ ಇತ್ತು. ಇಷ್ಟಾದರೂ, ಲೋಕಸಭೆಯಲ್ಲಿ ಜೆಡಿಎಸ್‌ನಿಂದ ಪ್ರಜ್ವಲ್‌ಗೆ ಟಿಕೆಟ್ ನೀಡಲಾಯಿತು. ವಿಪರ್ಯಾಸವೆಂದರೆ, ಬಿಜೆಪಿಯು ಜೆಡಿಎಸ್ ಜೊತೆಗೆ ಕೈ ಜೋಡಿಸಿದ್ದು ಮಾತ್ರವಲ್ಲ, ಪ್ರಜ್ವಲ್‌ನ ಮತಯಾಚನೆಯ ರ್ಯಾಲಿಯಲ್ಲಿ ಬಿಜೆಪಿಯ ರಾಷ್ಟ್ರಮಟ್ಟದ ನಾಯಕರು ಭಾಗವಹಿಸಿದರು. ಚುನಾವಣೆ ನಡೆದ ಬೆನ್ನಿಗೇ ಪ್ರಜ್ವಲ್ ಹಗರಣದಲ್ಲಿ ಪಾಲುಗೊಂಡ ಪೆನ್‌ಡ್ರೈವ್‌ಗಳು ಬಹಿರಂಗಗೊಂಡವು. ಇದು ರಾಷ್ಟ್ರಮಟ್ಟದಲ್ಲಿ ಸಂಚಲವನ್ನೇ ಸೃಷ್ಟಿಸಿತ್ತು. ಪ್ರಜ್ವಲ್ ಒಂದೆರಡು ಮಹಿಳೆಯರನ್ನಲ್ಲ ಲೆಕ್ಕವಿಲ್ಲದಷ್ಟು ಮಹಿಳೆಯರನ್ನು ಶೋಷಣೆ ಮಾಡಿರುವ ವಿವರಗಳು ಪೆನ್‌ಡ್ರೈವ್‌ನಲ್ಲಿದ್ದವು. ತನ್ನ ಬಂಧನವಾಗುವುದು ಖಚಿತ ಎನ್ನುವುದು ಗೊತ್ತಾಗುತ್ತಿದ್ದಂತೆಯೇ ಆತ ವಿದೇಶದಲ್ಲಿ ತಲೆಮರೆಸಿಕೊಂಡನು. ಮೋದಿ ನೇತೃತ್ವದ ಕೇಂದ್ರ ಸರಕಾರ ಆತನನ್ನು ಸುಲಭದಲ್ಲಿ ವಿದೇಶಕ್ಕೆ ಪರಾರಿಯಾಗಲು ಅವಕಾಶ ನೀಡಿತು. ಪ್ರಜ್ವಲ್ ಗೌಡ ಲೈಂಗಿಕ ಹಗರಣ ರಾಷ್ಟ್ರಮಟ್ಟದಲ್ಲಿ ಚರ್ಚೆಯಾಗುತ್ತಿದ್ದರೂ ಈ ಬಗ್ಗೆ ಪ್ರಧಾನಿ ಮೋದಿ ಮೌನ ಮುರಿದಿರಲಿಲ್ಲ. ಪ್ರಜ್ವಲ್‌ಗೆ ನಾನೇ ಆದರ್ಶ ಎಂದು ಸ್ವತಃ ದೇವೇಗೌಡರೇ ಹೇಳಿಕೊಂಡಿದ್ದರು. ಪ್ರಜ್ವಲ್ ಅವರ ರಕ್ಷಣೆಗೆ ದೇವೇಗೌಡರ ಕುಟುಂಬ ಗರಿಷ್ಠ ಪ್ರಯತ್ನವನ್ನು ಮಾಡಿತ್ತು. ಹೀಗಿರುವಾಗ, ದೇವೇಗೌಡರ ಕುಟುಂಬವನ್ನು ಹೊರಗಿಟ್ಟು ಪ್ರಜ್ವಲ್‌ನ ಹಗರಣವನ್ನು ನೋಡುವುದಾದರೂ ಹೇಗೆ? ವಿದೇಶದಲ್ಲಿ ತಲೆಮರೆಸಿಕೊಂಡಿದ್ದ ಪ್ರಜ್ವಲ್‌ಗೆ ಕೊನೆಯಲ್ಲಿ ದೇವೇಗೌಡರೇ ಪತ್ರ ಬರೆದು ಕರೆಸಿಕೊಂಡರು. ಲೈಂಗಿಕ ಹಗರಣಗಳನ್ನು ತೆರೆದಿಟ್ಟ ಪೆನ್‌ಡ್ರೈವ್ ಸೋರಿಕೆಗಾಗಿ ಕುಮಾರಸ್ವಾಮಿಯವರು ಕಾಂಗ್ರೆಸ್ ಪಕ್ಷದ ಕೆಲವು ನಾಯಕರನ್ನು ಹೊಣೆ ಮಾಡುವ ಪ್ರಯತ್ನವನ್ನೂ ಮಾಡಿದರು. ಆದರೆ, ಅದೊಂದು ವಿಫಲ ಪ್ರಯತ್ನವಾಗಿತ್ತು.ಈ ಹಿಂದೆಯೂ ವಿವಿಧ ರಾಜಕೀಯ ನಾಯಕರ ಅಶ್ಲೀಲ ಸಿ.ಡಿ.ಗಳು ರಾಜ್ಯದಲ್ಲಿ ಸುದ್ದಿ ಮಾಡಿದ್ದವು.

ಆದರೆ ಅವುಗಳ ಹಿಂದೆ ರಾಜಕೀಯ ಸಂಚುಗಳಿದ್ದವು. ರಾಜಕೀಯ ನಾಯಕರ ಖಾಸಗಿ ಕೋಣೆಯ ಸಂಗತಿಗಳನ್ನು ಗುಟ್ಟಾಗಿ ಚಿತ್ರಿಸಿ 'ಬ್ಲ್ಯಾಕ್‌ಮೇಲ್ ಮಾಡುವುದು ಅದರ ಹಿಂದಿನ ಉದ್ದೇಶಗಳಾಗಿದ್ದವು. ಒಬ್ಬ ರಾಜಕಾರಣಿ ಅನೈತಿಕ ಸಂಬಂಧವನ್ನು ಇಟ್ಟುಕೊಳ್ಳುವುದು ಎಷ್ಟು ಸರಿ ಎನ್ನುವುದು ಚರ್ಚೆಯ ವಿಷಯ. ಆದರೆ ಖಾಸಗಿ ಕೋಣೆಯೊಳಗೆ ಒಪ್ಪಿತ ಅನೈತಿಕ ಲೈಂಗಿಕ ಸಂಬಂಧವನ್ನು ಗುಟ್ಟಾಗಿ ಚಿತ್ರೀಕರಿಸಿ ಅವರನ್ನು ಬ್ಲ್ಯಾಕ್‌ಮೇಲ್ ಮಾಡುವುದು ಕೂಡ ಅಪರಾಧವೇ ಆಗಿದೆ. ಆದರೆ ಪ್ರಜ್ವಲ್ ಪ್ರಕರಣ ಭಿನ್ನವಾದದ್ದು ಮಾತ್ರವಲ್ಲ, ಆಘಾತಕಾರಿಯಾದದ್ದು. ಇಲ್ಲಿ ನಡೆದಿರುವುದು ಒಪ್ಪಿತ ಲೈಂಗಿಕ ಕ್ರಿಯೆಗಳಲ್ಲ. ಬದಲಿಗೆ ಅತ್ಯಾಚಾರ ಎನ್ನುವುದು ಮೊದಲ ಆರೋಪ. ಎರಡನೆಯದು, ಈ ಲೈಂಗಿಕ ಅಕ್ರಮಗಳನ್ನು ಸೆರೆ ಹಿಡಿದಿರುವುದು ಯಾರೋ ವಿರೋಧ ಪಕ್ಷದ ನಾಯಕರ ಜನರಲ್ಲ. ಸ್ವತಃ ಪ್ರಜ್ವಲ್‌ನೇ ಮಹಿಳೆಯರ ಅಶ್ಲೀಲ ದೃಶ್ಯಗಳನ್ನು ಸೆರೆ ಹಿಡಿದು ತನ್ನ ಮೊಬೈಲ್‌ನಲ್ಲಿ ಸಂಗ್ರಹಿಸಿಟ್ಟುಕೊಂಡಿದ್ದ. ತನ್ನ ಕೆಲಸದಾಳುಗಳ ಜೊತೆಗೆ, ಪಕ್ಷದ ಕಾರ್ಯಕರ್ತೆಯರ ಜೊತೆಗೂ ಅತ್ಯಂತ ಕೀಳಾಗಿ ವರ್ತಿಸಿದ ದೃಶ್ಯಗಳು ಆತನ ಮೊಬೈಲ್‌ನಲ್ಲಿದ್ದವು. ಜೊತೆಗೆ ಅದನ್ನು ಆತ ಪೆನ್‌ಡ್ರೈವ್‌ನಲ್ಲಿ ತೆಗೆದಿಟ್ಟುಕೊಂಡಿದ್ದ. ಈ ಪೆನ್‌ಡ್ರೈವ್‌ಗಳನ್ನು ಮುಂದಿಟ್ಟು ಮಹಿಳೆಯರನ್ನು ಬ್ಲಾಕಮೇಲ್ ಮಾಡಿರುವ ಸಾಧ್ಯತೆಗಳೂ ಇವೆ. ಆತನ ಕೃತ್ಯದಲ್ಲಿ ಒಬ್ಬ ಸೈಕೋಪಾತ್‌ನ ಲಕ್ಷಣಗಳಿದ್ದವು. ತನ್ನ ನೀಚ ಕೃತ್ಯಗಳನ್ನು ಕುಟುಂಬ ಬಲ, ಜಾತಿ, ಹಣ ಬಲಗಳಿಂದ ಆತ ದಕ್ಕಿಸಿಕೊಂಡಿದ್ದ.




• ಹಿಂದಿನ ಸಂಚಿಕೆಯಿಂದ **106ನೆಯ ಅಧ್ಯಾಯ**

ಆ ಸಮಯದಲ್ಲಿ ಪ್ರಳಯಕಾಲದ ಉದಕದ ಮೇಲೆ ಪರಮಪುರುಷನಾದ ನಾರಾಯಣನು ವಟಪತ್ರಶಯನನಾಗಿದ್ದನು. ಆತನ ನಾಭಿಕಮಲದಲ್ಲಿ ಬ್ರಹ್ಮದೇವನು ಜನಿಸಿದನು. ಆಮೇಲೆ ಸಮಸ್ತ ದೇವತೆಗಳೂ ಜನಿಸಿದರು. ವೇವತೆಗಳ ಆಹಾರನಿಮಿತ್ರವಾಗಿಯೂ ಯಜ್ಞಾದಿಸತ್ಕರ್ಮಗಳ ನಿಮಿತ್ತವಾಗಿಯೂ ನೀರಿನಲ್ಲಿ ಮುಳುಗಿದ್ದ ಭೂಮಂಡಲವನ್ನು ವರಮಪುರುಷನಾದ ನಾರಾಯಣನು ವರಾಹಸ್ವರೂವನಾಗಿ ಮೇಲಕ್ಕೆ ನೆಗಹಿದನು.

ಆಮೇಲೆ ಬ್ರಹ್ಮದೇವನು ನಿಖಿಲ ದೇವತೆಗಳನ್ನೂ ಸೃಷ್ಟಿಸಿದನು. ಆತನಿಗೆ ಮರೀಚಿಯು ಜನಿಸಿದನು. ಆತನಿಗೆ ಕಶ್ಯಪಬ್ರಹ್ಮನು ಜನಿಸಿದನು. ಆಸ್ತ್ರವಿಗೆ ವಿವಸ್ವಂತನು ಜನಿಸಿದನು. ಆತನಿಗೆ ವೈವಸ್ವತಮನುವು ಜನಿಸಿದನು. ಆತನಿಗೆ ಇಕ್ಷಾಕುವು ಜನಿಸಿದನು. ವೈವಸ್ವತಮನುವು ತನ್ನ ಮಗನಾದ ಇಕ್ಷಾಕುವಿಗೆ ಅಯೋಧ್ಯಾಪಟ್ಟಣದಲ್ಲಿ ಶಾಸ್ರೋಕ್ತ ಪ್ರಕಾರದಲ್ಲಿ ಪಟ್ಟವನ್ನು ಕಟ್ಟಿದನು. ಇಕ್ಷಾಕುವಿನ ಮಗನು ಕುಕ್ಷಿ. ಆತನ ಮಗನು ವಿಕುಕ್ಷಿ. ಆತನ ಮಗನು ಬಾಣ. ಆತನ ಮಗನು ಅನರಣ್ಯನು. ಆತನ ಮಗನು ಪೃಥುಚಕ್ರವರ್ತಿ, ಆತನ ಮಗನು ತ್ರಿಶಂಕುಮಹಾರಾಯ. ಆತನು ತಾನು ಮಾಡಿದ ದಾನ ಧರ್ಮ ತಪೋವ್ರತಾದಿಗಳಿಂದ ನಕ್ಷತ್ರ ಲೋಕವನ್ನು ಪಡೆದು ಈಗಲೂ ಕಾಣಿಸುತ್ತಿದ್ದಾನೆ. ತ್ರಿಶಂಕುಮಹಾರಾಯನ ಮಗನು ದುಂಧುಮಾರ. ಆತನ ಮಗನು ಯುವನಾಶ್ವ, ಆತನ ಮಗನು ಮಾಂಧಾತ. ಆತನ ಮಗನು ಸುಸಂಧಿ. ಆತನಿಗೆ ಧ್ರುವಸಂಧಿ ಪ್ರಸೇನಜಿತ್ತು ಎಂಬ ಇಬ್ಬರು ಕುಮಾರರಾದರು. ಧ್ರುವಸಂಧಿಗೆ ಭರತನು ಜನಿಸಿದನು. ಆತನಿಗೆ ಅಸಿತನೆಂಬ ಕುಮಾರನು ಜನಿಸಿದನು. ಅವನು ಹೈಹಯರಾಯ ತಾಲಜಂಘರಾಯ ಶನಿಯಿಂದು ಮೊದಲಾದ ಬಹುಮಂದಿ ಶತ್ರುಗಳಿಂದ ಯುದ್ಧರಂಗದಲ್ಲಿ ಮುರಿಯಲ್ಪಟ್ಟು ದೇಶಭ್ರಷ್ಟನಾಗಿ ಗರ್ಭಿಣಿಯರಾದ ತನ್ನ ಈರ್ವರು ಪತ್ನಿಯರನ್ನೂ ಕರೆದುಕೊಂಡು ಹಿಮಾಪರ್ವತಕ್ಕೆ ಹೋದನು. ಆ ಪತ್ನಿಯರಲ್ಲಿ ಒಬ್ಬಳು ಮತ್ಸರದಿಂದ ಕಾಳಿಂದಿಯೆಂಬ ಮತ್ತೊಬ್ಬಳ ಗರ್ಭವನ್ನು ಕರಗಿಸಬೇಕೆಂದು ಆಕೆಗೆ ವಿಷವನ್ನಿಕ್ಕಿದಳು. ಕಾಳಿಂದಿಯು ಆಗ ಹಿಮಾಪರ್ವತದಲ್ಲಿದ್ದ ಭಾರ್ಗವಚ್ಯವನಮುನೀಶ್ವರನ ಸಮೀಪಕ್ಕೆ ಹೋಗಿ ಅಭಿಮದಿಸಿ ತನ್ನ ಉದರದಲ್ಲಿ ಸತ್ಪುತ್ರನು ಜನಿಸುವಂತೆ ಕೃಪೆಮಾಡಬೇಕೆಂದು ಪ್ರಾರ್ಥಿಸಿದಳು. ಆ ಮುನೀಶ್ವರನು ಆಕೆಗೆ ಮಹಾತ್ಮನೂ ಲೋಕಪ್ರಸಿದ್ಧನೂ ವಂಶೋದ್ಧಾರಕನೂ ಆದ ಕುಮಾರನು ಉಂಟಾಗುವನೆಂದು ನುಡಿದನು.

ಕಾಳಿಂದಿಯು ಹರ್ಷಪಟ್ಟು ಆ ಮುನೀಶ್ವರನಿಗೆ ಪ್ರದಕ್ಷಿಣವನ್ನು ಮಾಡಿ ತನ್ನ ಮನೆಗೆ ಹೋಗಿ ಸುಖದಲ್ಲಿದ್ದು ಶುಭಲಗ್ನದಲ್ಲಿ ಒಬ್ಬ ಕುಮಾರನನ್ನು ಪಡೆದಳು. ಕಾಳಿಂದಿಗೆ ಹಾಕಿದ ವಿಷದೊಡನೆ ಜನಿಸಿದ್ದರಿಂದ ಆ ಕುಮಾರನಿಗೆ ಸಗರನೆಂಬ ಹೆಸರಾಯಿತು. ಸಗರನು ಶತ್ರುಗಳನ್ನು ಜಯಿಸಿ ಚಕ್ರವರ್ತಿಯಾಗಿ ಸಮಸ್ತ ಭೂಮಂಡಲವನ್ನೂ ಆಳುತ್ತ ಒಂದು ಸಮಯದಲ್ಲಿ ಯಾಗದೀಕ್ಷಿತನಾಗಿ ಜನರೆಲ್ಲರೂ ಅಂಜುವ ದೊಡ್ಡ ಸಮುದ್ರವನ್ನೇ ತೋಡಿಸಿದನು.

ಮುಂದುವರಿಯುವುದು...

# ಅಗತ್ಯಕ್ಕಿಂತ ಹೆಚ್ಚು ನಿದ್ರೆ ಮಾಡುವುದರಿಂದ ಹೃದಯ ಕಾಯಿಲೆ ಮಾತ್ರವಲ್ಲ ಸಾವು ಕೂಡ ಬೇಗನೇ ಬರಬಹುದಂತೆ!!

ನೀವು ಅಗತ್ಯಕ್ಕಿಂತ ಹೆಚ್ಚು ನಿದ್ರೆ ಮಾಡುತ್ತಿದ್ದರೆ ಜಾಗರೂಕರಾಗಿರಿ, ಏಕೆಂದರೆ ನಿಮ್ಮ ಈ ಅಭ್ಯಾಸವು ನಿಮ್ಮ ಆರೋಗ್ಯ, ಜೀವವನ್ನು ಅಪಾಯಕ್ಕೆ ಸಿಲುಕಿಸಬಹುದು. ಎಲ್ಲರೂ ಮಲಗಲು ಇಷ್ಟಪಡುತ್ತಾರೆ, ಆದರೆ ಅತಿಯಾಗಿ ಮಲಗುವುದು ನಿಮ್ಮ ಆರೋಗ್ಯಕ್ಕೆ ಒಳ್ಳೆಯದಲ್ಲ. ಅತಿಯಾಗಿ ಮಲಗುವ ಅಭ್ಯಾಸವು ನಿಮ್ಮ ಜೀವಕ್ಕೂ ಅಪಾಯವನ್ನುಂಟು ಮಾಡಬಹುದು.

ಅಗತ್ಯಕ್ಕಿಂತ ಹೆಚ್ಚು ನಿದ್ರೆ ಮಾಡುವುದರಿಂದ ಮೆದುಳಿನ ಪಾರ್ಶ್ವವಾಯು ಬರುವ ಅಪಾಯವು ಶೇಕಡಾ 23 ರಷ್ಟು ಹೆಚ್ಚಾಗುತ್ತದೆ ಎಂದು ಅನೇಕ ಸಂಶೋಧನೆಗಳು ಬಹಿರಂಗಪಡಿಸಿವೆ.

ಆದರೆ ಮಧ್ಯಾಹ್ನ 90 ನಿಮಿಷಗಳಿಗಿಂತ ಹೆಚ್ಚು ಕಾಲ ನಿದ್ರೆ ಮಾಡುವವರಲ್ಲಿ, ಈ ಅಪಾಯವು ಶೇಕಡಾ 25 ರಷ್ಟು ಹೆಚ್ಚಾಗುತ್ತದೆ.

**ಆರೋಗ್ಯ ತಜ್ಞರು ಹೇಳುವ ಪ್ರಕಾರ :** ಮನುಷ್ಯನಿಗೆ ಎಂಟರಿಂದ ಒಂಬತ್ತು ಗಂಟೆಗಳ ನಿದ್ರೆ ಸಾಕು ಎಂದು ಸಲಹೆ ನೀಡುತ್ತಾರೆ. ಮತ್ತೊಂದೆಡೆ, ಮನಸ್ಸನ್ನು ಉಲ್ಲಾಸಗೊಳಿಸಲು ಅರ್ಧ ಗಂಟೆ ಮಧ್ಯಾಹ್ನದ ನಿದ್ರೆ ಸಾಕು. ಇದಕ್ಕಿಂತ ಹೆಚ್ಚು ನಿದ್ರೆ ಮಾಡುವುದರಿಂದ ಬೊಜ್ಜು, ಮಧುಮೇಹ, ಸೋಮಾರಿತನ, ಖಿನ್ನತೆ, ಹೃದಯ ಸಮಸ್ಯೆಗಳು, ಥೈರಾಯ್ಡ್, ತಲೆನೋವು ಮತ್ತು ಸ್ಮರಣಶಕ್ತಿ ದುರ್ಬಲಗೊಳ್ಳುವಂತಹ ಅನೇಕ ಸಮಸ್ಯೆಗಳು ಉಂಟಾಗಬಹುದು.

**ಅಧ್ಯಯನ ವರದಿಯ ಪ್ರಕಾರ:** ಯುರೋಪಿಯನ್ ಹಾರ್ಟ್ ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನ ವರದಿಯ ಪ್ರಕಾರ, 6 ಅಥವಾ 8 ಗಂಟೆಗಳಿಗಿಂತ ಹೆಚ್ಚು ಕಾಲ ನಿದ್ರೆ ಮಾಡುವುದರಿಂದ ಹೃದಯ ಕಾಯಿಲೆಯ ಅಪಾಯ ಹೆಚ್ಚಾಗುತ್ತದೆ ಮತ್ತು ಅಕಾಲಿಕ ಮರಣವೂ ಹೆಚ್ಚಾಗುತ್ತದೆ. ಆದಾಗ್ಯೂ, ಉತ್ತಮ ಆರೋಗ್ಯಕ್ಕೆ ಸಾಕಷ್ಟು ನಿದ್ರೆ ಬಹಳ ಮುಖ್ಯ ಎಂದು ಅಧ್ಯಯನ ವರದಿ ಹೇಳುತ್ತದೆ. ಆದರೆ ಅಗತ್ಯಕ್ಕಿಂತ ಹೆಚ್ಚು ನಿದ್ರೆ ಮಾಡುವುದು ಆರೋಗ್ಯಕ್ಕೆ ಹಾನಿ ಮಾಡುತ್ತದೆ. ವಾಸ್ತವವಾಗಿ, ನಿದ್ರೆ ವ್ಯಕ್ತಿಯ ಆರೋಗ್ಯದ ಮೇಲೆ ಗಂಭೀರವಾಗಿ ಪರಿಣಾಮ ಬೀರುತ್ತದೆ. ಅಗತ್ಯಕ್ಕಿಂತ ಹೆಚ್ಚು ನಿದ್ರೆ ಮಾಡುವುದರಿಂದ ಹೃದಯ ಕಾಯಿಲೆಯ ಅಪಾಯ ಮತ್ತು ಅಕಾಲಿಕ ಮರಣ ಹೆಚ್ಚಾಗುತ್ತದೆ ಎಂದು ಅನೇಕ ಅಧ್ಯಯನ ವರದಿಗಳಲ್ಲಿ ಸಾಬೀತಾಗಿದೆ.

**ಅಧ್ಯಯನದ ಸಮಯದಲ್ಲಿ:** ಸಂಶೋಧಕರ ತಂಡವು ವಿವಿಧ ಆದಾಯದ 21 ದೇಶಗಳ 1,16,632 ಜನರ ನಿದ್ರೆಯ ಡೇಟಾವನ್ನು ಪರಿಶೀಲಿಸಿತು.

ಇವುಗಳಲ್ಲಿ ಕೆನಡಾ, ಸ್ವೀಡನ್, ಸೌದಿ ಅರೇಬಿಯಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್‌ನಂತಹ 4 ಹೆಚ್ಚಿನ ಆದಾಯದ ದೇಶಗಳು, ಅರ್ಜೆಂಟೀನಾ, ಬ್ರೆಜಿಲ್, ಚಿಲಿ, ಚೀನಾ, ಕೊಲಂಬಿಯಾ, ಇರಾನ್, ಮಲೇಷ್ಯಾ, ಪ್ಯಾಲೆಸ್ಟೈನ್, ಫಿಲಿಪೈನ್ಸ್, ಪೋಲೆಂಡ್, ದಕ್ಷಿಣ ಆಫ್ರಿಕಾ ಮತ್ತು ಟರ್ಕಿ ಸೇರಿದಂತೆ 12 ಮಧ್ಯಮ ಆದಾಯದ ದೇಶಗಳು ಸೇರಿವೆ. ಇದಲ್ಲದೆ, ಬಾಂಗ್ಲಾದೇಶ, ಭಾರತ, ಪಾಕಿಸ್ತಾನ, ಟಾಂಜಾನಿಯಾ ಮತ್ತು ಜಿಂಬಾಬ್ವೆ ಎಂಬ 5 ಕಡಿಮೆ ಆದಾಯದ ದೇಶಗಳ ಜನರನ್ನು ಸಹ ಅಧ್ಯಯನದಲ್ಲಿ ಸೇರಿಸಲಾಗಿದೆ.



### ಒಬ್ಬ ವ್ಯಕ್ತಿಯು 6 ರಿಂದ 8 ಗಂಟೆಗಳ ಕಾಲ ಮಾತ್ರ ನಿದ್ರೆ ಮಾಡಬೇಕು!

**ಅಧ್ಯಯನದಲ್ಲಿ ಸೇರಿಸಲಾದ ಎಲ್ಲಾ ದೇಶಗಳ ಜನರಿಗೆ ಅವರ ಆರ್ಥಿಕ ಸ್ಥಿತಿ, ಜೀವನಶೈಲಿ, ಮಲಗುವ ಸಮಯ, ಧೂಮಪಾನ, ಮದ್ಯಪಾನ, ದೈಹಿಕ ಚಟುವಟಿಕೆ, ಆಹಾರ ಮತ್ತು ಕಾಯಿಲೆಗಳಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಕೇಳಲಾಯಿತು. ಪ್ರತಿದಿನ 8 ಗಂಟೆಗಳಿಗಿಂತ ಹೆಚ್ಚು ಕಾಲ ನಿದ್ರಿಸುವ ಜನರು ಹೃದಯಾಘಾತ ಮತ್ತು ಪಾರ್ಶ್ವವಾಯುವಿಗೆ ಒಳಗಾಗುವ ಅಪಾಯವನ್ನು ಹೊಂದಿರುತ್ತಾರೆ ಎಂದು ಫಲಿತಾಂಶಗಳು ತೋರಿಸಿವೆ. ಅಲ್ಲದೆ, ಅಂತಹ ಜನರಲ್ಲಿ ಅಕಾಲಿಕ ಮರಣದ ಅಪಾಯವು ಶೇಕಡಾ 41 ರಷ್ಟು ಹೆಚ್ಚಾಗುತ್ತದೆ. ಅಧ್ಯಯನ ವರದಿಯ ಪ್ರಕಾರ, ಒಬ್ಬ ವ್ಯಕ್ತಿಯು 6 ರಿಂದ 8 ಗಂಟೆಗಳ ಕಾಲ ಮಾತ್ರ ನಿದ್ರೆ ಮಾಡಬೇಕು.**

# ಮಕ್ಕಳಿಗೆ ಅಕ್ಷರಾಭ್ಯಾಸ ಏಕೆ, ಹೇಗೆ, ಯಾವಾಗ..?

ವಿಶ್ವಾಸ್.ಡಿ.ಗೌಡ

ಉದಯವಾಹಿನಿ, ವಿಶೇಷ



ವಿದ್ಯಾಭ್ಯಾಸವೆನ್ನುವುದು ಪ್ರತಿಯೊಬ್ಬ ಮಾನವರ ಬದುಕಿನಲ್ಲೂ ಹೆಚ್ಚು ಮುಖ್ಯ ಸಂಗತಿಯಾಗಿದೆ. ಶಿಕ್ಷಣವನ್ನು ಪಡೆಯುವುದು ಎಂದರೆ ಜ್ಞಾನ ಮತ್ತು ಬುದ್ಧಿಯುತ ಲೋಕವನ್ನು ಪ್ರವೇಶಿಸಿದಂತೆ. ದೇವಿ ಸರಸ್ವತಿಯನ್ನು ಪೂಜಿಸುವ ಮೂಲಕ ಅಕ್ಷರಾಭ್ಯಾಸದ ಕ್ರಿಯೆಯನ್ನು ಆರಂಭಿಸಬಹುದಾಗಿದೆ.


**ಮೊದಲು ಗುರು;** ಗಣಪತಿಯನ್ನು ಪೂಜಿಸಿ ಓಂ ಕಾರವನ್ನು ಬರೆಯುವ ಮೂಲಕವೇ ಮಕ್ಕಳಿಗೆ ಅಕ್ಷರಾಭ್ಯಾಸವನ್ನು ಮಾಡಿಸಲಾಗುತ್ತದೆ.( ಓಂ ಗುರುತಿನ ಮಹತ್ವ ಯಾವುದೇ ಆಗಿರಲಿ ಅದರ ಆರಂಭ ಮತ್ತು ಅಂತ್ಯ ಓಂ ಆಗಿದೆ.

ಇದು ಶಾಶ್ವತತೆಯ ಚಿಹ್ನೆಯಾಗಿದೆ. ಸಂಸ್ಕೃತದಲ್ಲಿ ಇದನ್ನು ಬೀಜಾಕ್ಷರ ಎಂದು ಕರೆಯಲಾಗುತ್ತದೆ. ಅಂದರೆ ಪ್ರತಿಯೊಂದರ ಮೂಲ ಎಂದಾಗಿದೆ.) ನಂತರ ಮಕ್ಕಳಿಗೆ ಕುಲದೇವರ; ಇಷ್ಟ ದೇವರ ನಾಮ ಅಕ್ಷರಗಳನ್ನು ಬರೆಸಲಾಗುತ್ತದೆ. ತಮ್ಮ ಹೆಸರನ್ನು ಅಕ್ಷರ ರೂಪದಲ್ಲಿ ಬರೆಯುವುದು ಹೇಗೆ ಎಂಬುದನ್ನು ಈ ದಿನ ತಿಳಿಸಿಕೊಡಲಾಗುತ್ತದೆ. ತದನಂತರ ಅವರುಗಳು ವಾಕ್ಯಗಳನ್ನು ಈ ಮೂಲಕ ರಚಿಸಿ ತಮ್ಮ ಆಲೋಚನೆಗಳನ್ನು ಹೇಗೆ ವ್ಯಕ್ತಪಡಿಸಬೇಕು ಎಂಬುದನ್ನು ತಿಳಿಸಿಕೊಡಲಾಗುತ್ತದೆ.

ಮಕ್ಕಳನ್ನು ಬುದ್ಧಿವಂತರನ್ನಾಗಿಸಲು ಈ ಅಂಶಗಳು ಸಹಕಾರಿಯಾಗಿದೆ. ಮಕ್ಕಳು ಗುರುಕುಲದಲ್ಲಿದ್ದರೆ ಅವರಿಗೆ ಅಕ್ಷರಾಭ್ಯಾಸವನ್ನು ಮರಳ ಮೇಲೆ ಮಾಡಿಸಲಾಗುತ್ತದೆ. ಈಗ ದೊಡ್ಡ ತಟ್ಟೆಯಲ್ಲಿ ಅಕ್ಕಿಯನ್ನು ಇರಿಸಿ ಅದರಲ್ಲಿ ಮಕ್ಕಳ ಕೈ ಹಿಡಿದುಕೊಂಡು ಚಿನ್ನದ ಕಡ್ಡಿ; ಅರಸಿನಕೊಂಬು ಅಥವಾ ಬೆರಳುಗಳ ಮೂಲಕ ಅಕ್ಷರಾಭ್ಯಾಸವನ್ನು ಮಾಡಿಸುತ್ತಾರೆ. ಕೆಲವೆಡೆ ಚಾಕ್ ಹಿಡಿದುಕೊಂಡು ಸ್ಲೇಟ್‌ನಲ್ಲಿ ಬರೆಯುತ್ತಾರೆ ವೇದಗಳ ಕಾಲದಲ್ಲಿ, ಉಪನಯನದ ಸಮಯದಲ್ಲಿ ಅಕ್ಷರಾಭ್ಯಾಸವನ್ನು ನಿರ್ವಹಿಸಲಾಗುತ್ತಿತ್ತು.ಈಗ ಐದನೆಯ ವಯಸ್ಸಿನಲ್ಲಿ ಮಕ್ಕಳಿಗೆ ಇದನ್ನು ನೆರವೇರಿಸಲಾಗುತ್ತದೆ.

ಆದರೆ ವಿದ್ಯಾಭ್ಯಾಸದಲ್ಲಿ ಈಗ ನವೀಕರಣತೆ ಉಂಟಾಗಿದ್ದು ಮಕ್ಕಳು ತಮ್ಮ ಮೂರನೇ(ಎರಡೂವರೆ) ವಯಸ್ಸಿನಲ್ಲಿಯೇ ಪ್ರಥಮ ಅಕ್ಷರದ ಬರವಣಿಗೆಯನ್ನು ಆರಂಭಿಸುತ್ತಾರೆ. ಹೆಚ್ಚಿನ ಕಡೆ ಅಕ್ಷರಾಭ್ಯಾಸವನ್ನು ನವರಾತ್ರಿಯಲ್ಲಿ ಅಥವಾ ತಾರಾಬಲವಿರುವ ವಿಶೇಷ ದಿನದಂದು ಆಚರಿಸುತ್ತಾರೆ.

ನವರಾತ್ರಿಯಲ್ಲಿ ಅಕ್ಷರಾಭ್ಯಾಸ ವಿಜಯದ ಸಂಕೇತವಾಗಿದೆ. ಅಜ್ಞಾನದ ಅಂಧಕಾರದ ಮೇಲೆ ನಡೆಸಿರುವ ವಿಜಯದ ಈ ದಿನಗಳಂದು ಇಚ್ಛಾ, ಕ್ರಿಯಾ ಮತ್ತು ಜ್ಞಾನಗಳೆಂಬ ಮೂರು ಶಕ್ತಿಗಳು ಒಂದಾಗಿರುವ ಕಾರಣ ಇದು ಮಗುವಿನ ಜ್ಞಾನ ದೀವಿಗೆಯನ್ನು ಬೆಳಗಿಸಲು ಸಹಕಾರಿಯಾಗಿದೆ. ಆದ್ದರಿಂದ ನವರಾತ್ರಿ, ಅಕ್ಷರಾಭ್ಯಾಸಕ್ಕೆ ಪ್ರಶಸ್ತ.



# ಸ್ನೇಹಿತರ ದಿನಾಚರಣೆಯ ಶುಭಾಶಯಗಳು

ಮಾನಸಪ್ರವೀಣ್ ಭಟ್



ಸ್ನೇಹ ಎಂದರೆ ನೀನೆ ಎನ್ನುವೆ
ಕಷ್ಟ ಬಂದರೆ ನಿನ್ನೆ ನೆನೆಯುವೆ
ಸುಖ ಬಂದರೆ ನಿನ್ನ ಜೊತೆ ಹಂಚುವೆ
ಯಾರೇನೇ ಅಂದರು ನಿನ್ನ ಜೊತೆ ಇರುವೆ
ಗೆಳತಿ ನಿನ್ನಾ ಜೊತೆ ಇರುವೆ
ನಿನ್ನೊಂದಿಗೆ ಕೂಡಿ ಬಾಳುವೆ
ನಿನ್ನಾ ಕೈ ಹಿಡಿದು ಸಾಗುವೆ
ನಿನ್ನ ಪ್ರತಿ ಹೆಜ್ಜೆಯಲ್ಲೂ ನಾ ಇರುವೆ
ನಿನ್ನ ಸುಖ ದುಃಖಗಳಲ್ಲಿ ಬಾಗಿಯಾಗುವೆ
ಜನುಮ ಜನುಮಾಂತರಕ್ಕೂ ನಿನ್ನ ಸ್ನೇಹ ಬೇಡುವೆ




ನಮ್ಮ ಸ್ನೇಹ ಚಿರವಾಗಿರಲಿ ಎಂದು ನಾ ಬೇಡುವೆ

# ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ: ಭಕ್ತಿಯಲ್ಲಿ ಮಿಂದ ಭಕ್ತಸಾಗರ



• ಉದಯವಾಹಿನಿ, ವಿಜಯನಗರ

ಬಂಟರ ಸಂಘದಲ್ಲಿ ಲೋಕಕಲ್ಯಾಣಾರ್ಥಕ್ಕಾಗಿ ಶ್ರೀ ಶ್ರೀ ನಿವಾಸ ಕಲ್ಯಾಣೋತ್ಸವ ಕಾರ್ಯಕ್ರಮ. ಆಯೋಜಕರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಡಾ॥ಎಸ್. ರಾಜುರವರು, ಶ್ರೀಮತಿ ಸಿರಿ ಎಸ್.ರಾಜು, ಡಾ॥ಶೇಯಸ್ಸ್, ಡಾ॥ ಶ್ರೀಮತಿ ಅಭಿಲಾಶ, ಶ್ರೀಮತಿ ಪ್ರಿಯಾದರ್ಶಿನಿ, ಡಾ॥ರೋಹನ್ ರವರು ಶ್ರೀ ಶ್ರೀನಿವಾಸ ಕಲ್ಯಾಣೋತ್ಸವ ಪೂಜೆ ಸಲ್ಲಿಸಿ, ಚಾಲನೆ ನೀಡಿದರು.

ಶ್ರೀವಾರಿ ಫೌಂಡೇಷನ್ ವೆಂಕಟೇಶ್ ಮೂರ್ತಿ ರವರ ನೇತೃತ್ವದಲ್ಲಿ ಅಗಮ, ಪಂಡಿತರು ಅರ್ಚಕರ ಶ್ರೀನಿವಾಸ ಕಲ್ಯಾಣೋತ್ಸವ ಜರುಗಿತು. ಭಜನೆಯಿಂದ ಆರಂಭವಾಗಿ ಸ್ವಸ್ತಿ ಪೂಜೆ, ಪುಣ್ಯವಚನೆ, ಅಕುರ ಅರ್ಪಣಾ, ರಕ್ಷ ಬಂಧನ, ಚುರ್ಣಿತ, ಕನ್ಯಾದಾನ ಸಂಕಲ್ಪ, ಮಾಂಗಲ್ಯ ಧಾರಣೆ, ಚತುರ್ವೇದ ಪಾರಾಯಣ, ಮಹಾಮಂಗಳರತಿ ನೇರವೆರಿತು. ವಿದ್ವಾಂಸರಾದ ಸುಧಾಕರ್ ರವರಿಂದ ಭಕ್ತಿಗೀತೆ ಏರ್ಪಡಸಲಾಗಿತ್ತು.

ಬಂದ ಭಕ್ತಾಧಿಗಳಿಗೆ ಪ್ರಸಾದ ವಿನಿಯೋಗ ವಿತರಿಸಲಾಯಿತು. ಶಾಸಕರಾದ ಎಂ.ಕೃಷ್ಣಪ್ಪ, ದಕ್ಷಿಣ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಕೆ.ಉಮೇಶ್ ಶೆಟ್ಟಿ, ಮಾಜಿ ಪಾಲಿಕೆ ಸದಸ್ಯರುಗಳಾದ ದಾಸೇಗೌಡ, ಬಾಬಿ ವೆಂಕಟೇಶ್, ಟಿ.ವಿ.ಕೃಷ್ಣ, ಚಂದ್ರಶೇಖರಯ್ಯ, ಆನಂದ್ ರವರು ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

> **ನಾವು ಎಂಬುದು ಅಹಂಕಾರ, ನಾವೆಲ್ಲರು ಎಂದು ಶ್ರೀನಿವಾಸ ದೇವರು ಎದುರು ತಲೆ ಬಾಗಿದರೆ ಸಾಕು ಬಂದ ಸಂಕಷ್ಟ ದೂರವಾಗುವುದು ಎಂಬುದು ಅಚಲವಾದ ನಂಬಿಕೆ. ತಿರುಮಲ ತಿರುಪತಿ ದೇವಸ್ಥಾನದಲ್ಲಿ ನಡೆಯುವ ಶ್ರೀನಿವಾಸ ಕಲ್ಯಾಣೋತ್ಸವ ಮಾದರಿಯಲ್ಲಿ ಇಲ್ಲಿ ನಡೆಯುತ್ತಿದ್ದು. ಭಕ್ತಾಧಿಗಳಿಗೆ ತಿರುಪತಿ ಹೋಗಲು ಸಾಧ್ಯವಾಗುವುದಿಲ್ಲ, ಇಲ್ಲಿಯ ಬಂದು ಶ್ರೀನಿವಾಸ ಕಲ್ಯಾಣೋತ್ಸವ ವೀಕ್ಷಣೆ ಮಾಡಿ ದೇವರ ದರ್ಶನ ಪಡೆಯಬಹುದು. ರಾಜ್ಯದಲ್ಲಿ ಉತ್ತಮ ಮಳೆ, ಬೆಳೆಯಾಗಲಿ ನಾಡಿನ ಸಮಸ್ತ ಜನರಿಗೆ ಸುಖ, ಶಾಂತಿ ನೆಮ್ಮದ್ದಿ ಲಭಿಸಲಿ ಎಂದು ಶ್ರೀನಿವಾಸ ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದರು.** -ಡಾ॥ಎಸ್.ರಾಜು

**ಉತ್ತಮ ಮಳೆ, ಬೆಳೆಯಾಗಲಿ**

# ಮನೆಯಲ್ಲೇ ಮಾಡಿ ಮಿಲ್ಕ್ ಕೇಕ್.. ಎಷ್ಟು ಸುಲಭ ಗೊತ್ತಾ

ರಕ್ಷಾ ಬಂಧನ ಹಬ್ಬಕ್ಕೆ ಪರ್ಫೆಕ್ಟ್ ಇದು. ಕೇವಲ 15 ನಿಮಿಷದಲ್ಲಿ ಮನೆಯಲ್ಲೇ ಮಾಡಿ ಮಿಲ್ಕ್ ಕೇಕ್ ರೆಡಿ. ನಿಮ್ಮ ಸಹೋದರರನ್ನು ಮಂತ್ರಮುಗ್ಧ ಮಾಡುತ್ತೆ ಈ ಮಿಲ್ಕ್ ಕೇಕ್. ಹೌದು, ರಕ್ಷಾಬಂಧನವು ಸಹೋದರ-ಸಹೋದರಿ ಬಾಂಧವ್ಯದ ಪವಿತ್ರ ಸಂಭ್ರಮ. ಪ್ರತಿ ವರ್ಷ ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಲಾಗುವ ಈ ಹಬ್ಬದಲ್ಲಿ, ಸಹೋದರರು ತಮ್ಮ ಸಹೋದರಿಯರಿಗೆ ಪ್ರೀತಿಯ ಉಡುಗೊರೆಗಳನ್ನು ನೀಡುತ್ತಾರೆ. ಈ ವಿಶೇಷ ದಿನದಂದು, ನೀವು ಮನೆಯಲ್ಲೇ ರುಚಿಕರವಾದ ಸಿಹಿಯನ್ನು ತಯಾರಿಸಿ, ನಿಮ್ಮ ಪ್ರೀತಿಯನ್ನು ವ್ಯಕ್ತಪಡಿಸಬಹುದು. ಇದು ಆರೋಗ್ಯಕ್ಕೂ ಉತ್ತಮ, ರುಚಿಗೂ ಹೆಚ್ಚು. ಹೌದು, ರಕ್ಷಾಬಂಧನ ಹಬ್ಬದಂದು ಮಿಷ್ಠಾನ, ಮಿಠಾಯಿ ಇಲ್ಲದೆ ಹಬ್ಬವೇ ಆಗೋದಿಲ್ಲ. ಆದರೆ, ಈ ಬಾರಿ ಮನೆಯಲ್ಲಿ ತಯಾರಿಸಬಹುದಾದ ಒಂದು ವಿಶೇಷ ಸಿಹಿ ರೆಸಿಪಿ ಬಗ್ಗೆ ತಿಳಿಯಬೇಕಾ ಅದುವೇ ಮಿಲ್ಕ್ ಕೇಕ್. ನಿಮ್ಮ ಸಹೋದರರಿಗಾಗಿ ವಿಶೇಷವಾದ ಏನನ್ನಾದರೂ ಮಾಡಬೇಕೆಂದು ನೀವು ಬಯಸಿದರೆ, ಈ ರಕ್ಷಾ ಬಂಧನಕ್ಕೆ ಖಂಡಿತವಾಗಿಯೂ ಮಿಲ್ಕ್ ಕೇಕ್ ತಯಾರಿಸಿ. ಇದನ್ನು ಸವಿದು ನಿಮ್ಮ ಸಹೋದರರು ಸಂತೋಷಪಡುತ್ತಾರೆ. ಲಾಡುಗೆ ಬದಲಿಗೆ ಈ ಮಿಲ್ಕ್ ಕೇಕ್ ಸೂಕ್ತವಾಗಿದೆ. ಇದನ್ನು ತಯಾರಿಸಲು ಬೇಕಾಗುವ ಪದಾರ್ಥಗಳು ಮತ್ತು ಸುಲಭ ವಿಧಾನವನ್ನು ತಿಳಿಯೋಣ ಬನ್ನಿ.

**ಮಿಲ್ಕ್ ಕೇಕ್ ತಯಾರಿಸುವ ವಿಧಾನ :** ಮಿಲ್ಕ್ ಕೇಕ್ ತಯಾರಿಸಲು, ಮೊದಲು ದಪ್ಪ ತಳದ ಪಾತ್ರೆಯನ್ನು ತೆಗೆದುಕೊಂಡು ಅದಕ್ಕೆ 2 ಲೀಟರ್ ಹಾಲನ್ನು ಸುರಿಯಿರಿ. ಮಧ್ಯಮ ಉರಿಯಲ್ಲಿ ಹಾಲನ್ನು ಚೆನ್ನಾಗಿ ಕುದಿಸಿ. ಹಾಲು ಕುದಿಯಲು ಪ್ರಾರಂಭಿಸಿದಾಗ, ಉರಿಯನ್ನು ಕಡಿಮೆ ಮಾಡಿ ಮತ್ತು ನಿರಂತರವಾಗಿ ಬೆರೆಸುತ್ತಿರಿ. ಹಾಲು ಅರ್ಧದಷ್ಟು ಕಡಿಮೆಯಾದ ನಂತರ, ಪಾತ್ರೆಯ ಅಂಚಿನಲ್ಲಿ ಸಂಗ್ರಹವಾದ ಕೆನೆಯನ್ನು ತೆಗೆಯಿರಿ. ಈಗ ಈ ಹಾಲಿಗೆ ನಿಂಬೆ ರಸವನ್ನು ಹಾಕಿ, ನಂತರ ಮೊಸರು ಹಾಕಿ, ಎಲ್ಲವನ್ನೂ ಚೆನ್ನಾಗಿ ಮಿಕ್ಸ್ ಮಾಡಿ. ಇದು ಮಿಲ್ಕ್ ಕೇಕ್‌ನಲ್ಲಿ ಕಣ ಕಣವಾಗಿರುವ ರಚನೆಯನ್ನು ನೀಡಲು ಸಹಾಯ ಮಾಡುತ್ತದೆ. ಈಗ ಹಾಲು ಸಂಪೂರ್ಣವಾಗಿ ಹೆಪ್ಪುಗಟ್ಟಿ ಛೇನಾ (ಗಿಣ್ಣು) ಆದ ನಂತರ, ಅದನ್ನು ಮಸ್ಲಿನ್ ಬಟ್ಟೆಯಲ್ಲಿ ಸೋಸಿ. ನಂತರ, ಗಿಣ್ಣನ್ನು ತಣ್ಣೀರಿನಿಂದ ಚೆನ್ನಾಗಿ ತೊಳೆಯಿರಿ. ಈಗ ಗಿಣ್ಣನ್ನು ಬಟ್ಟೆಯಲ್ಲಿ ಬಿಗಿಯಾಗಿ ಕಟ್ಟಿಕೊಂಡು, ಅದರ ಮೇಲೊಂದು ಭಾರವಾದ ವಸ್ತುವನ್ನು ಇರಿಸಿ ಹೆಚ್ಚುವರಿ ನೀರನ್ನು ಹೊರಹಾಕಿ. ಒಂದು ಬಾಣಲೆಯಲ್ಲಿ ತುಪ್ಪವನ್ನು ಬಿಸಿ ಮಾಡಿ. ತುಪ್ಪ ಕಾದ ನಂತರ, ಅದಕ್ಕೆ ತಯಾರಿಸಿದ ಛೇನಾವನ್ನು ಸೇರಿಸಿ. ಮಧ್ಯಮ ಉರಿಯಲ್ಲಿ 10 ರಿಂದ 15 ನಿಮಿಷಗಳ ಕಾಲ ಚೆನ್ನಾಗಿ ಹುರಿಯಿರಿ. ಈಗ ಹುರಿದ ಗಿಣ್ಣಗೆ ಸಕ್ಕರೆ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಸಕ್ಕರೆ ಕರಗಿ ಮಿಶ್ರಣವು ಇನ್ನಷ್ಟು ದಪ್ಪವಾಗುವವರೆಗೆ ಬಿಸಿಮಾಡುವುದನ್ನು ಮುಂದುವರಿಸಿ. ಈ ಹಂತದಲ್ಲಿ, ಮಿಶ್ರಣದ ಸ್ವಾದ ಮತ್ತು ಅಂತಿಮ ರಚನೆ ಸುಧಾರಿಸುತ್ತದೆ. ಈಗ ಒಂದು ಟ್ರೇಗೆ ಸ್ವಲ್ಪ ತುಪ್ಪವನ್ನು ಹಚ್ಚಿ. ನಂತರ, ತಯಾರಾದ ಮಿಶ್ರಣವನ್ನು ಟ್ರೇಗೆ ಸುರಿಯಿರಿ. ಅದನ್ನು ಸಮವಾಗಿ ಹರಡಿ. ನಿಮಗೆ ಬೇಕಾದ ಆಕಾರದಲ್ಲಿ ಕೇಕ್ ತುಂಡುಗಳನ್ನು ಕತ್ತರಿಸಬಹುದು. ನಂತರ, ಟ್ರೇಯನ್ನು ಸ್ವಲ್ಪ ಸಮಯದವರೆಗೆ ಫ್ರಿಜ್‌ನಲ್ಲಿ ಇಡಿ, ಕೇಕ್ ಗಟ್ಟಿಯಾಗಲು ಬಿಡಿ. ಇಷ್ಟು ಮಾಡಿದರೆ, ನಿಮ್ಮ ರುಚಿಕರವಾದ ಮಿಲ್ಕ್ ಕೇಕ್ ಸಿದ್ಧ. ಇದನ್ನು ಒಂದು ಅಥವಾ ಎರಡು ವಾರಗಳವರೆಗೆ ಸಂಗ್ರಹಿಸಿಡಬಹುದು. ನಿಮ್ಮ ಮಿಲ್ಕ್ ಕೇಕ್‌ಗೆ ಇನ್ನಷ್ಟು ಸ್ವಾದ ಸೇರಿಸಲು ಬಯಸಿದರೆ, ಏಲಕ್ಕಿ ಪುಡಿ, ಕೇಸರಿ ಅಥವಾ ಪಿಸ್ತಾ ಪುಡಿಯನ್ನು ನಿಮ್ಮ ಆಯ್ಕೆಯಂತೆ ಸೇರಿಸಬಹುದು. ಈ ಸುಲಭ ವಿಧಾನದ ಮೂಲಕ, ನೀವು ಮನೆಯಲ್ಲೇ ಮಿಲ್ಕ್ ಕೇಕ್ ತಯಾರಿಸಿ ನಿಮ್ಮ ಸಹೋದರನನ್ನು ಸಂತೋಷಪಡಿಸಬಹುದು. ಈ ರಕ್ಷಾಬಂಧನವನ್ನು ಇನ್ನಷ್ಟು ಸ್ಮರಣೀಯವನ್ನಾಗಿಸಲು ಇದು ಅತ್ಯುತ್ತಮ ಮಾರ್ಗವಾಗಿದೆ.

**ರಕ್ಷಾ ಬಂಧನ ಸ್ಪೆಷಲ್!**



### ಮಿಲ್ಕ್ ಕೇಕ್ ತಯಾರಿಸಲು ಬೇಕಾಗುವ ಪದಾರ್ಥಗಳು

**ಮಿಲ್ಕ್ ಕೇಕ್ ತಯಾರಿಸಲು, ನಿಮಗೆ ಕೆಲವು ಅಗತ್ಯ ಸಾಮಗ್ರಿಗಳು ಬೇಕಾಗುತ್ತವೆ. ಈ ವಸ್ತುಗಳನ್ನು ಬಳಸಿ ನೀವು ಮನೆಯಲ್ಲಿ ಸುಲಭವಾಗಿ ಈ ಸಿಹಿಯನ್ನು ತಯಾರಿಸಬಹುದು. ಅವು ಈ ಕೆಳಗಿನಂತಿವೆ.**

- ಹಾಲು - 2 ಲೀಟರ್
- ನಿಂಬೆ ರಸ - ಒಂದು ಚಿಟಿಕೆ
- ಮೊಸರು - 2 ಚಮಚ
- ಸಕ್ಕರೆ - 200 ಗ್ರಾಂ
- ತುಪ್ಪ - 50 ಗ್ರಾಂ
- ಎಲಕ್ಕಿ ಪುಡಿ - ಸ್ವಲ್ಪ

# ಇನ್ನೂ 11 ಕೋಟಿ ಹಣ ಬಂದಿಲ್ಲ; ನೀರನ್ನು ಬಂದ್ ಮಾಡಿ: ರೈತರ ಆಕ್ರೋಶ

• ಉದಯವಾಹಿನಿ, ಸಿಂಧನೂರು

ಕೇಂದ್ರ, ರಾಜ್ಯ ಸರ್ಕಾರಗಳು ಸಾವಿರಾರು ಕೋಟಿ ರೂ ವೆಚ್ಚದಲ್ಲಿ ಕಾಮಗಾರಿಗಳ ಎಸ್ಟಿಮೇಟ್ ಮಾಡಿಸಿ ಭೂ ಪೂಜೆ ದಿನದಂದು ಸಚಿವರನ್ನು ಅದ್ದೂರಿ ಸ್ವಾಗತ ಮಾಡಿಕೊಂಡು ಸ್ಥಳೀಯ ಶಾಸಕರು ತಾಲ್ಲೂಕಿನ ತಿಮ್ಮಾಪುರ್ ಏತ ನೀರಾವರಿ ಯೋಜನೆಗೆ ಚಾಲನೆ ನೀಡಿ ತಮ್ಮ ಕೆಲಸ ಇಲ್ಲಿಗೆ ಮುಗಿಯಿತು ಎಂಬಂತೆ ಹೊರಟು ಹೋಗುತ್ತಾರೆ. ನಷ್ಟಕ್ಕೆ ಒಳಗಾದ ರೈತರಿಗೆ ಪರಿಹಾರ ಸಮಸ್ಯೆ ಬಗ್ಗೆ ಯಾರೂ ಕೂಡ ಮಾತನಾಡುವುದಿಲ್ಲ. ಕೊನೆಗೂ ಹಂಗೂ ಹಿಂಗೂ ತಿಮ್ಮಾಪುರ ಏತ ನೀರಾವರಿ ಕಾಮಗಾರಿಗಳು ಮುಗಿದ ಮೇಲೆ ಮತ್ತೊಮ್ಮೆ ಸಚಿವರನ್ನು ಅದ್ದೂರಿ ಸ್ವಾಗತಿಸಿ ಕಾರ್ಯಕ್ರಮ ರೂಪಿಸಿ ಸಚಿವರು ಕೂಡ ಉದ್ಘಾಟನೆ ನೆರವೇರಿಸಿ ರೈತರು ಜಮೀನಿನ ಗಳಿಗೆ ನೀರಿನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಯಿತು ಎಂದು ದೊಡ್ಡದಾಗಿ ಭಾಷಣ ಮಾಡುತ್ತಾರೆ.ಆದರೆ ನಷ್ಟವಾದ ರೈತಾಪಿ ವರ್ಗದ ಜಮೀನುಗಳಿಗೆ ಯಾವುದೇ ಪರಿಹಾರ ನೀಡಿಲ್ಲ ಎಂದು ಸರ್ಕಾರಕ್ಕೆ ಮೂರ್ನಾಲ್ಕು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಹಾಗಾಗಿ ರೈತರು ತಿಮ್ಮಾಪುರ ಏತ ನೀರಾವರಿಯನ್ನು ಬಂದ್ ಮಾಡಿ ಆಕ್ರೋಶವನ್ನು ವ್ಯಕ್ತಪಡಿಸಿದರು. ತಿಮ್ಮಾಪುರ ಗ್ರಾಮದಲ್ಲಿ ಏತ ನೀರಾವರಿ ಯೋಜನೆಯ ಮೂಲಕ ನೀರು ತಂದದ್ದು 54ನೇ ಕಾಲುವೆಗೆ ನೀರು ಸರಬರಾಜು ಮಾಡಬೇಕಾದದ್ದು. ಇದರಿಂದ ಸುಮಾರು 15 ಗ್ರಾಮಗಳ ಪ್ರದೇಶದಲ್ಲಿ 33 ಸಾವಿರ ಎಕರೆಗೆ ಸಂಪೂರ್ಣ ನೀರಾವರಿ ಒದಗಿಸಲಾಗುತ್ತಿದೆ. ರೈತರ ಸಮಸ್ಯೆ ಅರಿತು ಜೆಡಿಎಸ್ ತಾಲ್ಲೂಕು ಅಧ್ಯಕ್ಷರಾದ ಬಸವರಾಜ ನಾಡಗೌಡ ಏತ ನೀರಾವರಿ ಯೋಜನೆ ಸ್ಥಳಕ್ಕೆ ಭೇಟಿ ಮಾಡಿ ನೀರಾವರಿ ಅಧಿಕಾರಿಗಳೊಂದಿಗೆ ರೈತರು ಸಮಸ್ಯೆ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ಪ್ರತಿದಿನ 90 ರಷ್ಟು ಕ್ಯೂಸೆಕ್ ನೀರು ಬಿಡುಗಡೆ ಮಾಡುತ್ತಿದ್ದಾರೆ. ರೈತರು ದೊಡ್ಡ ಮನಸ್ಸು ಮಾಡಿ ಉಳಿದ ಯಲ್ಲಿ ರೈತರಿಗೆ ತೊಂದರೆ ಆಗದಂತೆ ಅನುಕೂಲ ಮಾಡಿಕೊಡಬೇಕು ಇಂದಲ್ಲ ನಾಳೆ ನಿಮಗೆ ನೀರು ಬರಬೇಕಾದ ಪರಿಹಾರದ ಹಣ ಸರ್ಕಾರದಿಂದ ಬರುತ್ತಿದೆ.ನಾವು ಪ್ರಯತ್ನ ಮಾಡಿ ಪೂರು ಕೊಡಿಸುವ ವ್ಯವಸ್ಥೆ ಮಾಡುತ್ತೇವೆ ಎಂದು ಭರವಸೆ ನೀಡಿದರು. ಯಾವುದೇ ಕಾರಣಕ್ಕೂ ಬಗ್ಗದ ಕೇಳದ ರೈತರು ಗುರುವಾರ ನೀರು ಸರಬರಾಜು ಹಠಾತ್ತನೆ ಸ್ಥಗಿತಗೊಳಿಸಿದರು. ಸರ್ಕಾರದಿಂದ ನಮ್ಮ ರೈತರಿಗೆ ಇನ್ನೂ 11 ಕೋಟಿ ನೆಯ ಬಾಕಿ ಬರಬೇಕಾಗಿದೆ ಹಣ ಬಂದಿಲ್ಲ. ಈ ಬಗ್ಗೆ ತಿಳಿದ ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಬಸವರಾಜ ನಾಡಗೌಡ ಒಳಬಳ್ಳಾರಿಗೆ ತೆರಳಿ ರೈತರನ್ನು ಸಮಾಧಾನ ಪಡಿಸಲು ಎಷ್ಟೇ ಪ್ರಯತ್ನಿಸಿದರು ಏತ ಕೂಡ ರೈತರು ತೃಪ್ತರಾಗಲಿಲ್ಲ ಹಿಂದೆ ಸರಿಯಲಿಲ್ಲ. ಪಟ್ಟು ಹಿಡಿದು ಲಿಫ್ಟ್ ಬಂದ್ ಈ ಮಾಡಿ ಆಗ್ರಹಿಸಿದರು.


ಉದಯವಾಹಿನಿ ಚಿತ್ರ

**ಈಗಾಗಲೇ ಮುಂಗಾರು ಹಂಗಾಮಿ ಮಾನ್ಸೂನ್ ಪ್ರಾರಂಭವಾಗಿದ್ದು ಬಿತ್ತುವ ಸಸಿ ನಾಟಿ ಮಾಡಬೇಕು ಅಂತ ಭರದಿಂದ ಸಾಗುತ್ತಿದ್ದು. ಹಾಗೆ ತುಂಗಭದ್ರಾ ಡ್ಯಾಂ ಯಿಂದ ಎಡದಂಡೆ ಕಾಲುವೆ ನೀರು ಬೀಟ್ಟು ತಿಂಗಳ ಕಳೆದರೂ ತಾಲ್ಲೂಕಿನ ಒಳ ಬಳ್ಳಾರಿ ಸೀಮೆಯಲ್ಲಿ ಇನ್ನು ವರೆಗೂ ರೈತರು ಹೊಲದಲ್ಲಿ ನೀರು ಕಾಣುತ್ತಿಲ್ಲ ಎಂದು ಆಗ್ರಹಿಸಿದರು.**

## ಸುಳ್ಳು ದಾಖಲೆ ಸಲ್ಲಿಸಿ ಬ್ಯಾಂಕ್‌ಗೆ 1.31 ಕೋಟಿ ವಂಚನೆ; ದೂರು ದಾಖಲು

• ಉದಯವಾಹಿನಿ, ಕಲಬುರಗಿ

ಹಲವರು ನಕಲಿ, ಮಾರ್ಪಡಿಸಿದ ದಾಖಲೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಿ ಬ್ಯಾಂಕ್‌ಗೆ ಕೋಟ್ಯಂತರ ರೂಪಾಯಿ ವಂಚಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಈ ಕುರಿತು ನಗರದ ಜಗತ್ ವೃತ್ತದ ಎಚ್‌ಡಿಎಫ್‌ಸಿ ಬ್ಯಾಂಕ್ ಉದ್ಯೋಗಿ 13 ಮಂದಿ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದಾರೆ. 2024ರ ಜನವರಿ 2ರಿಂದ ಈತನಕ 13 ಮಂದಿ ಆನ್‌ಲೈನ್ ಮೂಲಕ ಸ್ಯಾಲರಿ ಸ್ಲಿಪ್ ಸೇರಿದಂತೆ ವಿವಿಧ ನಕಲಿ, ಮಾರ್ಪಡಿಸಿದ ದಾಖಲೆ ನೀಡಿ, 1.85 ಕೋಟಿ ವೈಯಕ್ತಿಕ ಸಾಲ ಪಡೆದಿದ್ದಾರೆ. ನಂತರ ಅವರು ಸಾಲ ಮರುಪಾವತಿಸದ ಕಾರಣ ಬ್ಯಾಂಕ್ ಅಧಿಕಾರಿಗಳು ಸಾಲ ಪಡೆದವರ ಕೆಲಸದ ಸ್ಥಳ, ವಾಸಸ್ಥಳದಲ್ಲಿ ಪರಿಶೀಲಿಸಿದಾಗ ಮೋಸ ಪತ್ತೆಯಾಗಿದೆ. ನಕಲಿ, ಮಾರ್ಪಡಿಸಿದ ದಾಖಲೆ ನೀಡಿ ಬ್ಯಾಂಕ್‌ಗೆ 1.31 ಕೋಟಿ ವಂಚಿಸಿ ಮೋಸ ಮಾಡಲಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.



ಈ ಸಂಬಂಧ ಬೀದರ್‌ನ ಶ್ರೀಕೃಷ್ಣ, ಬೀದರ್ ಜಿಲ್ಲೆಯ ಖಟಕಚಿಂಚೋಳಿಯ ಆಕಾಶ, ಬೀದರ್‌ನ ಚಿಮಕೋಡ ನಿವಾಸಿ ವಿಶ್ವನಾಥ, ಆಳಂದ ತಾಲ್ಲೂಕಿನ ಗೋಳಾ (ಬಿ) ಗ್ರಾಮದ ಮತಾಬ್ ಮಹಿಬೂಬ್, ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ದೌಲಪ್ಪ, ಭಾಲ್ಕಿ ತಾಲ್ಲೂಕಿನ ಸಿದ್ದೇಶ್ವರದ ಆನಂದ, ಚಿಮಕೋಡನ ಆನಂದ ದಿಂಪೆ, ಕಲಬುರಗಿಯ ಕಪನೂರು ಪ್ರದೇಶದ ಮಂಜುನಾಥ ಡೋಣೆ, ಕಲಬುರಗಿಯ ಕೋಡ್ಲಿ ಕ್ರಾಸ್ ಪ್ರದೇಶದ ಬಂದೇನವಾಜ್, ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಸಂದೀಪ ಬೊಕ್ಕೆ, ಬೀದರ್ ಜಿಲ್ಲೆಯ ನಾವಡಗೇರಿಯ ಅಮರ, ಬೀದರ್ ಜಿಲ್ಲೆಯ ಬಸವಕಲ್ಯಾಣದ ಶ್ರೀಕಾಂತ ಹಾಗೂ ಬೀದರ್ ಜಿಲ್ಲೆಯ ಕೋಡಂಬಲ್‌ನ ಸುನೀಲ್ ವಿರುದ್ಧ ಕಲಬುರಗಿ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮುದ್ದೇಬಿಹಾಳ ಒಳಮೀಸಲಾತಿಗೆ ಒತ್ತಾಯ; ಬೃಹತ್ ಪ್ರತಿಭಟನೆ, ತಮಟೆ ಚಳವಳಿ

## ಬಹಿರಂಗ ಸಭೆಯ ಮೂಲಕ ತೀವ್ರ ಆಕ್ರೋಶ

• ಉದಯವಾಹಿನಿ, ಮುದ್ದೇಬಿಹಾಳ

ಹಿಂದುಳಿದ ಸಮುದಾಯಗಳಿಗೆ ನ್ಯಾಯ ಲಭಿಸಬೇಕೆಂಬ ಸದುದ್ದೇಶದಿಂದ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ನೇತೃತ್ವದಲ್ಲಿ ಪಟ್ಟಣದಲ್ಲಿ ಬೃಹತ್ ತಮಟೆ ಚಳವಳಿ ನಡೆಯಿತು. ವಿವಿಧ ದಲಿತ, ಪ್ರಗತಿಪರ ಸಂಘಟನೆಗಳ ಬೆಂಬಲ ಹೊಂದಿದ ಈ ಹೋರಾಟವು, ತಹಶೀಲ್ದಾರ್ ಕಚೇರಿ ಎದುರು ಬಹಿರಂಗ ಸಭೆಯ ಮೂಲಕ ತೀವ್ರ ಆಕ್ರೋಶ ವ್ಯಕ್ತಪಡಿಸಿತು. ಹೋರಾಟದ ಪ್ರಮುಖ ಮುಖಂಡರಾದ ವಕೀಲ ಕೆ.ಬಿ. ದೊಡಮನಿ, 35 ವರ್ಷಗಳ ಹೋರಾಟದ ಹೊರತಾಗಿಯೂ ಸರ್ಕಾರ ಒಳಮೀಸಲಾತಿ ಜಾರಿಗೆ ಸ್ಪಂದಿಸಿಲ್ಲ. ಸಿದ್ದರಾಮಯ್ಯ ಅವರು ಅಹಿಂದ ಸಮುದಾಯದ ನಾಯಕರೆಂದು ಮಾತನಾಡುತ್ತಾ, ನುಡಿದಂತೆ ನಡೆದುಕೊಳ್ಳುತ್ತಿಲ್ಲ ಎಂದು ಟೀಕಿಸಿದರು.

**ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಕೆ**

ಸುಪ್ರೀಂ ಕೋರ್ಟ್‌ನ ಏಳು ನ್ಯಾಯಮೂರ್ತಿಗಳ ಪೀಠವು 2024ರ ಆಗಸ್ಟ್ 1ರಂದು ಒಳಮೀಸಲಾತಿಗೆ ಅನುಮತಿ ನೀಡಿದ ಹಿನ್ನೆಲೆಯಲ್ಲಿ, ಕಳೆದ ಒಂದು ವರ್ಷದಿಂದಲೂ ಜಾರಿ ನಿರ್ಲಕ್ಷಿಸಿರುವ ಸರ್ಕಾರದ ವಿರುದ್ಧ ಅವರು ಅಸಮಾಧಾನ ವ್ಯಕ್ತಪಡಿಸಿದರು. ರಾಜಕೀಯ ಲಾಭಕ್ಕಾಗಿ ನಮ್ಮ ಸಮುದಾಯವನ್ನು ಉಪಯೋಗಿಸಿ, ಈಗ ಮೌನ ವಹಿಸುವುದು ನಿಷ್ಠೆಯಲ್ಲ, ಎಂದು ಅವರು ಗುಡುಗಿದರು. ಬಸವೇಶ್ವರ ವೃತ್ತದಿಂದ ಆರಂಭವಾದ ತಮಟೆ ಚಳವಳಿ ತಹಶೀಲ್ದಾರ್ ಕಚೇರಿಯವರೆಗೂ ಸಾಗಿದ ಮುಗಿಲು ಮುಟ್ಟಿದ ಆಕ್ರೋಶದಲ್ಲಿ, ಪ್ರತಿಭಟನಾಕಾರರು ಮುಖ್ಯಮಂತ್ರಿ ಹಾಗೂ ಕೆಲವು ಸಚಿವರ ಭಾವಚಿತ್ರಗಳಿಗೆ ಕೆಂಪು ಬಣ್ಣದ 'ಎಕ್ಸ್' ಗುರುತು ಹಾಕಿ, ವಿವಿಧ ತೀವ್ರ ನಿಘಂಟುಗಳಿಂದ ಕೂಡಿದ ಬ್ಯಾನರ್‌ಗಳನ್ನು ಹಿಡಿದು ಸಾಗಿದರು.

ಸಭೆಯಲ್ಲಿ ಡಿಎಸ್‌ಎಸ್ ಜಿಲ್ಲಾಧ್ಯಕ್ಷ ಬಾಲಚಂದ್ರ ಹುಲ್ಲೂರ, ಮುಖಂಡರು ಶೇಖರ್ ಮಾದರ, ಮಾರುತಿ ಸಿದ್ದಾಪುರ, ಆನಂದ ಮುದೂರ ಸೇರಿದಂತೆ ಹಲವರು ಮಾತನಾಡಿ, ಸುಪ್ರೀಂ ಕೋರ್ಟ್ ಆದೇಶ ಜಾರಿಗೆ ಆಗ್ರಹಿಸಿದರು. ತಹಶೀಲ್ದಾರ್ ಕೀರ್ತಿ ಚಾಲಕ್ ಅವರಿಗೆ ರಾಜ್ಯಪಾಲರಿಗೆ ಉದ್ದೇಶಿಸಿದ ಮನವಿ ಪತ್ರವನ್ನೂ ಸಲ್ಲಿಸಲಾಯಿತು.


ಉದಯವಾಹಿನಿ ಚಿತ್ರ

**ವಾಗ್ವಾದ - ಶವಯಾತ್ರೆಗೆ ಅನುಮತಿ ನಿರಾಕರಣೆ**

**ಪ್ರತಿಭಟನೆಯ ಭಾಗವಾಗಿ ಸರ್ಕಾರದ ಶವಯಾತ್ರೆ ನಡೆಸುವ ಯೋಜನೆ ಇದ್ದರೂ, ಸ್ಥಳೀಯ ಪೊಲೀಸರು ಇದಕ್ಕೆ ಅನುಮತಿ ನೀಡಲಿಲ್ಲ. ಈ ಹಿನ್ನೆಲೆಯಲ್ಲಿ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನಾಕಾರರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಸಿಪಿಐ ಮೆಹಮ್ಮೂದ್ ಫಸಿಯುದ್ದೀನ್ ಹಾಗೂ ಪಿಎಸ್ಐ ಸಂಜಯ್ ತಿಪ್ಪರಡ್ಡಿ ಅವರೊಂದಿಗೆ ವಾಗ್ವಾದ ನಡೆದಿದ್ದು, ಕೆಲ ಹೊತ್ತು ಸಂಚಾರವೂ ಅಸ್ತವ್ಯಸ್ತವಾಯಿತು. ವಕೀಲ ದೊಡಮನಿಯವರು, ಶವದ ಪ್ರತಿಕೃತಿ ಸುಟ್ಟು ನಮ್ಮ ಆಕ್ರೋಶ ವ್ಯಕ್ತಪಡಿಸುತ್ತೇವೆ. ಅತಿಕ್ರಮಣದ ಆರೋಪದಲ್ಲಿ ಬಂಧಿಸಲಾಗಿದ್ರೂ, ಹೋರಾಟ ಹಿಂತಿರುಗುವುದಿಲ್ಲ ಎಂದು ಘೋಷಿಸಿದರು.**

## ಕಾಯಂ ಜನತಾ ನ್ಯಾಯಾಲಯ: 726 ಪ್ರಕರಣ ಇತ್ಯರ್ಥ

• ಉದಯವಾಹಿನಿ, ಧಾರವಾಡ

ನಗರದ ಕಾಯಂ ಜನತಾ ನ್ಯಾಯಾಲಯದಲ್ಲಿ 2024 ಮೇ ನಿಂದ 2025 ಜುಲೈವರೆಗೆ 726 ಪ್ರಕರಣ ಇತ್ಯರ್ಥಪಡಿಸಲಾಗಿದೆ, 479 ಪ್ರಕರಣ ಬಾಕಿ ಇವೆ ಎಂದು ಕಾಯಂ ಜನತಾ ನ್ಯಾಯಾಲಯ ಧಾರವಾಡ ವಿಭಾಗದ ಅಧ್ಯಕ್ಷ ನಾಗರಾಜಪ್ಪ ಕುರಡಕರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಾಯಂ ಜನತಾ ನ್ಯಾಯಾಲಯದ ವಿಶೇಷ ಅಭಿಯಾನ (ಜುಲೈ 26 ರಿಂದ ಆ.26ರವರೆಗೆ) ನಡೆಯುತ್ತಿದೆ. ಅಭಿಯಾನದಡಿ ಪ್ರತಿ ತಾಲ್ಲೂಕಿನಲ್ಲಿ ಐದು ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕಾಯಂ ಜನತಾ ನ್ಯಾಯಾಲಯದ ಕುರಿತು ಮಾಹಿತಿ ನೀಡಲಾಗುತ್ತಿದೆ.

ಧಾರವಾಡ ವಿಭಾಗ ವ್ಯಾಪ್ತಿಗೆ ಧಾರವಾಡ, ಬಳ್ಳಾರಿ, ದಾವಣಗೆರೆ, ಹಾವೇರಿ, ಗದಗ, ಕೊಪ್ಪಳ, ಉತ್ತರ ಕನ್ನಡ ಜಿಲ್ಲೆಗಳು ಒಳಪಡುತ್ತವೆ ಎಂದರು.

ಪ್ರಕರಣ ದಾಖಲಿಸಲು ಶುಲ್ಕ ಇಲ್ಲ. ಬೇರೆ ನ್ಯಾಯಾಲಯದಲ್ಲಿರುವ ಪ್ರಕರಣವನ್ನು ಇಲ್ಲಿ ದಾಖಲಿಸಲು ಅವಕಾಶ ಇಲ್ಲ. 1 ಕೋಟಿಮೌಲ್ಯದವರೆಗಿನ ವ್ಯಾಜ್ಯ, ಹಣಕಾಸಿನ ಪ್ರಕರಣ ದಾಖಲಿಸಬಹುದು. ಕಾಯಂ ಜನತಾ ನ್ಯಾಯಾಲಯದಲ್ಲಿ ಇತ್ಯರ್ಥವಾದ ಪ್ರಕರಣವನ್ನು ಯಾವುದೇ ಸಿವಿಲ್ ಅಥವಾ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಶ್ನಿಸಲು ಅವಕಾಶ ಇಲ್ಲ.

ಹೈಕೋರ್ಟ್‌ನಲ್ಲಿ 'ರಿಟ್' ಅರ್ಜಿ ಸಲ್ಲಿಸಲು ಅವಕಾಶ ಇದೆ ಎಂದು ತಿಳಿಸಿದರು. ಸೆ.9ರಂದು ಲೋಕ ಅದಾಲತ್ ಜಿಲ್ಲೆಯ ಎಲ್ಲಾ ಕೋರ್ಟ್‌ಗಳಲ್ಲಿ ಸೆ.9ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ಎಫ್.ದೊಡ್ಡಮನಿ ತಿಳಿಸಿದರು.

'ಚೆಕ್' ಅಮಾನ್ಯ ಮೋಟಾರು ವಾಹನ ಅಪಘಾತ ಸಾಲ ವಸೂಲಿ ವ್ಯಾಜ್ಯ ಪೂರ್ವ ದಾವೆ ಮೊದಲಾದ ಪ್ರಕರಣಗಳನ್ನು ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಇದೆ ಎಂದರು.

ಮಾಹಿತಿಗಾಗಿ ದೂ: 08362740128 ಸಂಪರ್ಕಿಸಬಹುದು.

**ಕಾಯಂ ಜನತಾ ನ್ಯಾಯಾಲಯದಲ್ಲಿ ಸಾರ್ವಜನಿಕ ಉಪಯುಕ್ತತಾ ಸೇವೆ ಪ್ರಕರಣ ದಾಖಲಿಸಬಹುದು. ಸಾರಿಗೆ, ಅಂಚೆ, ದೂರವಾಣಿ, ವಿದ್ಯುತ್, ನೀರು ಪೂರೈಕೆ, ವಿಮೆ, ಆಸ್ಪತ್ರೆ, ಹಣಕಾಸು ಸಂಸ್ಥೆ, ಶಿಕ್ಷಣ ಸಂಸ್ಥೆ, ಗೃಹ, ರಿಯಲ್ ಎಸ್ಟೇಟ್, ಎಲ್‌ಪಿಜಿ ಹೊಸ ಸಂಪರ್ಕ ಮತ್ತು ಮರುಪೂರಣ ಸೇವೆಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ದಾಖಲಿಸಬಹುದು.**

**-ನಾಗರಾಜಪ್ಪ ಕುರಡಕರ್, ಅಧ್ಯಕ್ಷ**



## ರಾಜ್ಯಾದ್ಯಂತ ಆ. 5ರಿಂದ ಬಸ್ ಸಂಚಾರ ಬಂದ್ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ

• ಉದಯವಾಹಿನಿ, ಹುಬ್ಬಳ್ಳಿ

ನಾಲ್ಕು ಸಾರಿಗೆ ನಿಗಮಗಳ ನೌಕರರ ವೇತನ ಪರಿಷ್ಕರಣೆ ಹಾಗೂ ಪರಿಷ್ಕರಣೆ ವೇತನ ಬಾಕಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆಗಸ್ಟ್ 5ರಿಂದ ರಾಜ್ಯಾದ್ಯಂತ ಬಸ್ ಸಂಚಾರ ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಲಾಗಿದೆ ಎಂದು ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯ ಸದಸ್ಯ ಆರ್.ಎಫ್. ಕವಳಿಕಾಯಿ ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗಸ್ಟ್ 4ರ ಒಳಗೆ ಸರ್ಕಾರ ಸಂಘಟನೆಗಳ ಜೊತೆ ಚರ್ಚಿಸಿ ಬೇಡಿಕೆ ಈಡೇರಿಸಲು ಒಪ್ಪಿಗೆ ನೀಡಿದರೆ, ಮುಷ್ಕರ ಹಿಂಪಡೆಯಲು ಸಿದ್ಧರಿದ್ದೇವೆ. ಹಠಕ್ಕೆ ಬಿದ್ದರಂತೂ ನಾವಂತೂ ಹಿಂದೆ ಸರಿಯುವುದಿಲ್ಲ. ನಾಲ್ಕು ಸಾರಿಗೆ ನಿಗಮದ ಎಲ್ಲಾ ಸಂಘಟನೆಗಳು, ಎಐಟಿಸಿ ಸೇರಿದಂತೆ ಇತರೆ ಸಂಘಟನೆಗಳು ನಮಗೆ ಬೆಂಬಲ ವ್ಯಕ್ತಪಡಿಸಿವೆ. ಬೇಡಿಕೆ ಈಡೇರುವವರೆಗೂ ಮುಷ್ಕರ ಕೈ ಬಿಡುವುದಿಲ್ಲ ಎಂದು ಎಚ್ಚರಿಸಿದರು.


ಉದಯವಾಹಿನಿ ಚಿತ್ರ

ಒಂದೇ ಒಂದು ಬಸ್ ಸಹ ರಸ್ತೆಗೆ ಇಳಿಯುವುದಿಲ್ಲ. ಎಸ್ಮಾ ಜಾರಿ ಮಾಡಿದರೂ ನಾವು ಎದುರಿಸುತ್ತೇವೆ. ಅದು ಸರ್ಕಾರಕ್ಕೆ ತಿರುಗು ಬಾಣವಾಗಲಿದೆ. ಖಾಸಗಿ ಬಸ್‌ಗಳ ಮಾಲೀಕರನ್ನು ಸಹ ವಿಶ್ವಾಸಕ್ಕೆ ಪಡೆದು, ಬೆಂಬಲಿಸುವಂತೆ ವಿನಂತಿಸುತ್ತಿದ್ದೇವೆ. ಸಾರ್ವಜನಿಕರು ಸಹ ಸಹಕರಿಸಬೇಕು ಎಂದು ವಿನಂತಿಸಿದರು. 2020ರಿಂದ ಶೇ 15ರ ವೇತನ ಪರಿಷ್ಕರಣೆಯ 38 ತಿಂಗಳ ಬಾಕಿ ಹಣವನ್ನು ಕೂಡಲೇ ಪಾವತಿಸಬೇಕು. 2023ರಲ್ಲಿದ್ದ ನೌಕರರ ಮೂಲ ವೇತನಕ್ಕೆ ಶೇ 31ರಷ್ಟು ತುಟ್ಟಿ ಭತ್ಯೆ ವಿಲೀನಗೊಳಿಸಿ, 2024ರಿಂದ ಶೇ 25ರಷ್ಟು ವೇತನ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

## ಸರ್ಕಾರದ ಅಣಕು ಶವಯಾತ್ರೆಗೆ ದೊರೆಯದ ಅವಕಾಶ: ಪ್ರತಿಭಟನಾ ರ್ಯಾಲಿ

• ಉದಯವಾಹಿನಿ, ಮುದ್ದೇಬಿಹಾಳ

ಮಾದಿಗ ಒಳಮೀಸಲಾತಿ ಹೋರಾಟ ಸಮಿತಿಯಿಂದ ಪಟ್ಟಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಸರ್ಕಾರದ ಅಣಕು ಶವಯಾತ್ರೆಗೆ ಪೊಲೀಸರು ಅವಕಾಶ ಮಾಡಿಕೊಡಲಿಲ್ಲ. ಆದರೆ ಪ್ರತಿಭಟನಕಾರರು ಅಂಬೇಡ್ಕರ್ ಸರ್ಕಲ್‌ನಿಂದ ತಹಶೀಲ್ದಾರ್ ಕಚೇರಿಯವರೆಗೆ ರ್ಯಾಲಿ ನಡೆಸಿದರು.

ವಕೀಲ ಕೆ.ಬಿ. ದೊಡಮನಿ ಮಾತನಾಡಿ, ಆಳುವ ಸರ್ಕಾರಗಳು ಸಾರ್ವಜನಿಕ ನ್ಯಾಯ ಕೊಟ್ಟಿಲ್ಲ. ಸುಪ್ರೀಂಕೋರ್ಟ್ ನಿರ್ದೇಶನ ಇದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅಹಿಂದ ನಾಯಕ, ಶೋಷಿತ ಸಮುದಾಯದ ಪರ ಎಂದು ಹೇಳುತ್ತಾ ಮೇಲ್ವರ್ಗದ ಗುಲಾಮರಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ನಮ್ಮ ಸಮಾಜದ ಶಾಸಕ, ಸಂಸದರು ಸಮಾಜವನ್ನು ಸರ್ಕಾರಗಳ ಮುಂದೆ ಅಡ ಇಟ್ಟಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

**ಮೀಸಲಾತಿ ಹೆಸರಿನಲ್ಲಿ ಬಲಾಢ್ಯ ಸಮುದಾಯದವರು ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದಾರೆ ಎಂದು ದೂರಿದರು. ಮುಖಂಡ ದುರಗಪ್ಪ ದೊಡಮನಿ, ನಮ್ಮ ಸಮುದಾಯಕ್ಕೆ ನ್ಯಾಯ ಒದಗಿಸಲು ಬಯಸುವ ನಿಜವಾದ ನಾಯಕರು ಮಾತ್ರ ಹೋರಾಟಕ್ಕೆ ಬರಲಿ.**

**- ಮಾರುತಿ ಸಿದ್ದಾಪೂರ, ಮುಖಂಡ**

## ಯುವಜನಾಂಗ ದುಶ್ಚಟಗಳಿಗೆ ಬಲಿಯಾಗದಿರಲಿ: ಖಂಡ್ರೆ

• ಉದಯವಾಹಿನಿ, ಬೀದರ್

ಇಂದಿನ ಯುವಜನಾಂಗ ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳುವ ಅಗತ್ಯ ಹೆಚ್ಚಿದ್ದು, ಅದಕ್ಕಾಗಿ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಸಲಹೆ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶ್ರೀ ವಿಜಯ ಮಹಾಂತ ಎಜ್ಯುಕೇಷನಲ್ ಮತ್ತು ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಏರ್ಪಡಿಸಿದ್ದ ವ್ಯಸನಮುಕ್ತ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಇಂದಿನ ಮಕ್ಕಳು ಚಿಕ್ಕ ವಯಸ್ಸಿನಲ್ಲೇ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಅವರಲ್ಲಿ ಅರಿವು ಮೂಡಿಸಬೇಕು. ಯುವಕರು ಧೂಮಪಾನ, ಮದ್ಯಪಾನ ಬಿಟ್ಟು ಆರೋಗ್ಯವಂತ ಜೀವನ ಕಟ್ಟಿಕೊಳ್ಳಬೇಕು. ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು. ಮೊಬೈಲ್, ಸಾಮಾಜಿಕ ಮಾಧ್ಯಮಗಳಿಂದ ದೂರವಿದ್ದು, ಶಿಕ್ಷಣ, ಕ್ರೀಡೆ, ಯೋಗಾಸನದಂತಹ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಂಡು ದೇಶದ ಹಾಗೂ ಸಮಾಜದ ಒಳಿತಿಗಾಗಿ ಕೊಡುಗೆ ನೀಡಬೇಕು. ಜಿಲ್ಲೆಯಲ್ಲಿ ಗಿಡ-ಮರಗಳನ್ನು ಬೆಳೆಸಿ, ಹಸಿರು ಹೊದಿಕೆ ಹೆಚ್ಚಿಸಿ, ಪರಿಸರ ಸಂರಕ್ಷಣೆ ಮಾಡಬೇಕು. ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ, ಪ್ಲಾಸ್ಟಿಕ್ ಮುಕ್ತ ಜಿಲ್ಲೆಯಾಗಲು ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಅದರ ಬಳಕೆ ಹೆಚ್ಚಾದಂತೆಲ್ಲಾ ನಮ್ಮ ದೇಹದ ಮೇಲೆ ದುಷ್ಪರಿಣಾಮ ಬೀರಲು ಪ್ರಾರಂಭಿಸುತ್ತದೆ. ನಂತರ ಇದಕ್ಕೆ ದಾಸರಾಗಿ ವ್ಯಸನಕ್ಕೆ ಒಳಗಾಗುತ್ತಾರೆ. ಈ ಹಂತದಲ್ಲಿ ಇದರಿಂದ ಹೊರಕ್ಕೆ ಬರುವುದು ಹೆಚ್ಚು ಕಷ್ಟವಾಗುತ್ತದೆ. ಕ್ಯಾನ್ಸರ್ ಮತ್ತು ಇತರೆ ರೋಗಗಳು ಬರುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ. ಆದಕಾರಣ ದುಶ್ಚಟಗಳಿಂದ ದೂರವಿರಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಮಾದಕ ವಸ್ತುಗಳ ಬಳಕೆಯಿಂದ ನಮ್ಮ ಮೆದುಳು ಹಾಗೂ ನರಮಂಡಲದ ಮೇಲೆ ದುಷ್ಪರಿಣಾಮ ಬೀರುತ್ತದೆ. ಮಾದಕ ವಸ್ತುಗಳು ಅಥವಾ ಮಾದಕ ದ್ರವ್ಯಗಳಾದ ತಂಬಾಕು ಉತ್ಪನ್ನಗಳು, ಆಲ್ಕೋಹಾಲ್, ಗಾಂಜಾ, ಹೆರಾಯಿನ್, ಕೊಕೇನ್, ಎಂಡಿಎಂಎ ಮುಂತಾದವು ಸೇರಿವೆ. ಕಾಲೇಜು ದಿನಗಳಲ್ಲಿ ಕುತೂಹಲಕ್ಕೆ ಸ್ನೇಹಿತರ ಪ್ರಚೋದನೆಯಿಂದ ಮಾದಕ ವಸ್ತುಗಳ ಬಳಕೆ ಪ್ರಾರಂಭವಾಗುತ್ತದೆ. ಆನಂತರ ಅದು ಹವ್ಯಾಸವಾಗಿ ಬದಲಾಗುತ್ತದೆ.**

**-ಡಾ. ರಾಘವೇಂದ್ರ ವಾಗೋಲ್ ಮನೋ ವೈದ್ಯ**

# ಮಗುವಿಗೆ ಸ್ತನ್ಯಪಾನ ಪ್ರಕೃತಿಯ ಮೊದಲ ಲಸಿಕೆ

## ಜನಿಸಿದ ಮಗುವಿಗೆ ತಾಯಿಯ ಎದೆಹಾಲು ಮೊದಲ ಲಸಿಕೆಯಾಗಿದ್ದು, ಮಗುವಿಗೆ ರೋಗನಿರೋಧಕ ಶಕ್ತಿಯನ್ನು ನೀಡುತ್ತದೆ

• ಉದಯವಾಹಿನಿ, ಚಿತ್ರದುರ್ಗ

ನಗರದ ಸಾದಿಕ್ ನಗರ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ಮತ್ತು ಶಿಶು ಅಭಿವೃದ್ಧಿ ಇಲಾಖೆ ವತಿಯಿಂದ ಆಯೋಜಿಸಿದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ವರ್ಷದ ಧ್ಯೇಯ ವಾಕ್ಯ ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ ಜನಿಸಿದ ಮಗುವಿಗೆ ಎರಡು ವರ್ಷದ ತನಕ ತಪ್ಪದೇ ತಾಯಿ ಎದೆ ಹಾಲು ನೀಡಬೇಕು ಆರು ತಿಂಗಳ ತನಕ ತಾಯಿಯ ಎದೆಹಾಲು ಬಿಟ್ಟು ಬೇರೆ ಏನನ್ನು ಮಗುವಿಗೆ ಕೊಡಬಾರದು. ಎದೆಹಾಲು ಊಣಿಸುವ ತಾಯಿ ಪೋಷಕಾಂಶ ಇರುವ ಎಲ್ಲಾ ಆಹಾರ ಪದಾರ್ಥಗಳ ಸೇವನೆ ಮಾಡಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ. ಮಾತನಾಡುತ್ತಾ ತಾಯಂದಿರು ಮತ್ತು ಶಿಶುಗಳ ಆರೋಗ್ಯವನ್ನು ಉತ್ತೇಜಿಸಲು ಮತ್ತು ಜಾಗೃತಿ ಮೂಡಿಸಲು ಪ್ರತಿ ವರ್ಷ ಆಗಸ್ಟ್ ಒಂದರಿಂದ ಆಗಸ್ಟ್ ಏಳರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಆಯೋಜಿಸುತ್ತಿದ್ದು, ಆರೋಗ್ಯವಂತ ಮಗು ಆರೋಗ್ಯವಂತ ತಾಯಿ ಆರೋಗ್ಯವಂತ ರಾಷ್ಟ್ರ ನಿರ್ಮಾಣ ಮಾಡಲು, ಆರೋಗ್ಯವಂತ ಮಗು ಜನಿಸಬೇಕಾದರೆ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಬೇಕು


ಉದಯವಾಹಿನಿ ಚಿತ್ರ

**ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಿ**

18 ವರ್ಷದ ಒಳಗಡೆ ಹೆಣ್ಣು ಮಕ್ಕಳಿಗೆ ಮದುವೆ ಮಾಡಬಾರದು ಗರ್ಭಿಣಿ ತಾಯಂದಿರು ಸಕಾಲಕ್ಕೆ ವೈದ್ಯರಲ್ಲಿ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯಬೇಕು. ಹೆರಿಗೆಯ ನಂತರ 2.5 ಕೆಜಿ ಗಿಂತ ಕಡಿಮೆ ತೂಕದ ಮಗು ಜನಿಸಿದರೆ 48 ಗಂಟೆ ಸ್ನಾನ ಮಾಡಿಸದೆ, ಸ್ವಚ್ಛತೆಗೆ ಆದ್ಯತೆ ನೀಡಿ ತಾಯಿಯ ಪಕ್ಕದಲ್ಲಿ ಮಗುವನ್ನ ಮಲಗಿಸುವುದರಿಂದ ತಾಯಿ ಮಗುವಿನ ಬಾಂಧವ್ಯ ಬೆಳೆಯುವುದಲ್ಲದೆ ಎದೆ ಹಾಲು ಉತ್ಪತ್ತಿ ಹೆಚ್ಚಾಗುತ್ತದೆ, ಪ್ರಶಾಂತವಾದ ವಾತಾವರಣದಲ್ಲಿ ಸಮಾಧಾನವಾಗಿ ಕುಳಿತು ತಾಯಿ ಮಗುವಿಗೆ ಎದೆ ಹಾಲು ಊಣಿಸಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾಹಿತಿ ನೀಡುತ್ತಾ ಮಗು ಅತ್ತಾಗಲೆಲ್ಲಾ ತಾಯಿ ಮಗುವಿಗೆ ಎದೆ ಹಾಲುಣಿಸಬೇಕು, ಉಚಿತವಾಗಿ ದೊರೆಯುವ ಅಮ್ಮನ ಎದೆ ಹಾಲು ನೀಡುವುದು ತಾಯಿಯ ಜವಾಬ್ದಾರಿ, ತಾಯಿ ಎದೆ ಹಾಲು ಊಣಿಸುವಾಗ ಅನುಸರಿಸುವ ಬಂಗಿ ಮತ್ತು ಹೊಂದಾಣಿಕೆಯ ಬಗ್ಗೆ ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

**ಗರ್ಭಿಣಿಯಾಗಿದ್ದಾಗಿನಿಂದ ತಾಯಿಯು ತನ್ನ ಎದೆ ತೊಟ್ಟಿನ ಹಾರೈಕೆ ಮಾಡಿಕೊಳ್ಳಬೇಕು. ಮಗು ಜನಿಸಿದ ಒಂದು ಗಂಟೆಯ ಒಳಗಡೆ ತಾಯಿ ಎದೆ ಹಾಲು ಮಗುವಿಗೆ ಊಣಿಸಬೇಕು, ಮಗುವಿಗೆ ಇರುಳುಗಣ್ಣು ಇತರೆ ಸೋಂಕು ರೋಗಗಳು ತಡೆಯಲು ತಾಯಿ ಮಗುವಿನ ಬಾಂಧವ್ಯ ಹೆಚ್ಚಿಸಲು ಸ್ತನ್ಯಪಾನ ಬಹುಮುಖ್ಯ.**

**- ಗೌರಮ್ಮ, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ**

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ನಾಗರತ್ನ ಅಂಗನವಾಡಿ ಕಾರ್ಯಕರ್ತೆ ಮುನಿಯಮ್ಮ ಆಶಾ ಕಾರ್ಯಕರ್ತೆ ರೇಣುಕಾ ಹಾಗೂ ಎದೆ ಹಾಲುಣಿಸುವ ತಾಯಂದಿರು ಸಾರ್ವಜನಿಕ ತಾಯಂದಿರು ಹಾಜರಿದ್ದರು.

## ಮಿನಿ ನ್ಯೂಸ್

### ನಾಳೆ ವಿದ್ಯುತ್ ವ್ಯತ್ಯಯ ಸಾರ್ವಜನಿಕರು ಸಹಕರಿಸಿ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ 110/33/11ಕೆವಿ ಚಿಂಚೋಳಿ ವಿದ್ಯುತ್ ಉಪ- ಕೇಂದ್ರದಲ್ಲಿ ತುರ್ತು ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳುತ್ತಿರುವ ಪ್ರಯುಕ್ತ ಹಾಗೂ 33ಕೆವಿಯ ವಿದ್ಯುತ್ ಮಾರ್ಗಗಳ ದುರಸ್ತಿ ಕಾಮಗಾರಿಗಳನ್ನು ಮಾಡುತ್ತಿರುವುದರಿಂದ ನಾಳೆ ಆ.04 ರಂದು ಬೆಳಗ್ಗೆ 10:00 ಗಂಟೆಯಿಂದ ಸಾಯಂಕಾಲ 05:00 ಗಂಟೆವರೆಗೆ ವಿದ್ಯುತ್‌ನಲ್ಲಿ ವ್ಯತ್ಯಯ ಉಂಟಾಗಲಿದೆ ಸಾರ್ವಜನಿಕರು ಗ್ರಾಹಕರು ಸಹಕರಿಸುವಂತೆ ಜೇಸ್ಕಾಂ ಎಇಇ ಕಾಮಣ್ಣ ಇಂಜೇಳಿ ತಿಳಿಸಿದ್ದಾರೆ.

ಚಿಂಚೋಳಿ ಉಪ ಕೇಂದ್ರದಿಂದ ಹೊರಹೋಗುವ ಚಿಂಚೋಳಿ ಪಟ್ಟಣ ಚಂದಾಪೂರ ಸೇರಿದಂತೆ ಗ್ರಾಮಗಳಾದ ಅಣವಾರ, ಐನೋಳ್ಳಿ, ದಸ್ತಾಪುರ, ಚಿಮ್ಮಾಇದಲಾಯಿ ಗ್ರಾಮಗಳಲ್ಲಿ, 33/11ಕೆ.ವಿ ವಿದ್ಯುತ್ ಉಪಕೇಂದ್ರಗಳಾದ ಕುಂಚಾವರಂ, ಸುಲೆಪೇಟ, ನಿಡಗುಂದಾ, ಚಿಮ್ಮನಚೋಡ, ಐನಾಪುರ, ಮಿರಿಯಾಣ, ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಆದ್ದರಿಂದ ಸಮಸ್ತ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ.

### ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ವಿವೇಕ್ ಯಾವಗಲ್ ಪುನರಾಯ್ಕೆ

• ಉದಯವಾಹಿನಿ, ನರಗುಂದ



ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ವಿವೇಕ ಯಾವಗಲ್ ಅವರನ್ನು ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯನ್ನಾಗಿ ಕಾಂಗ್ರೆಸ್ ಹೈ ಕಮಾಂಡ್ ಪುನರಾಯ್ಕೆ ಮಾಡಿದೆ. ಪಂಚರಾಜ್ಯಗಳ ಚುನಾವಣೆಯಲ್ಲಿ ತೆಲಂಗಾಣ ರಾಜ್ಯದಲ್ಲಿ ವಿವೇಕ್ ಯಾವಗಲ್ ಚುನಾವಣಾ ಉಸ್ತುವಾರಿಯಾಗಿ ಕಾಂಗ್ರೆಸ್ ಗೆಲ್ಲುವಲ್ಲಿ ಶ್ರಮವಹಿಸಿದ್ದರು.

ಇವರ ಸಂಘಟನಾತ್ಮಕ ಕಾರ್ಯ ಗಮನಿಸಿ ಕಾರ್ಯದರ್ಶಿ ಹುದ್ದೆಗೆ ಪುನರಾಯ್ಕೆ ಮಾಡಿದೆ. ಪಕ್ಷದ ಸಿದ್ಧಾಂತಕ್ಕೆ ಬದ್ಧನಾಗಿ, ಹೈ ಕಮಾಂಡ್ ನಿರ್ದೇಶನದಂತೆ ಸಂಘಟನೆಯಲ್ಲಿ ತೊಡಗುತ್ತೇನೆ' ಎಂದು ವಿವೇಕ್ ಯಾವಗಲ್ ಹೇಳಿದರು.

### ಬಾಲ್ಯ ವಿವಾಹ ತಡೆ ಕಾಯ್ದೆಯ ಬಗ್ಗೆ ಜಾಗೃತಿ ಮೂಡಿಸುವುದು ಅವಶ್ಯಕ

• ಉದಯವಾಹಿನಿ, ಸಂಡೂರು

ಬಳ್ಳಾರಿ ಜಿಲ್ಲೆಯಲ್ಲಿ ಪ್ರಸ್ತುತ ದಿನಗಳಲ್ಲಿ ಅತಿ ಹೆಚ್ಚು ಬಾಲ್ಯ ವಿವಾಹ ಪ್ರಕರಣಗಳು ಕಂಡು ಬರುತ್ತಿದ್ದು, ಅವುಗಳ ನಿಯಂತ್ರಣಕ್ಕಾಗಿ ಗ್ರಾಮೀಣ ಪ್ರದೇಶದ ಜನರಲ್ಲಿ ಬಾಲ್ಯ ವಿವಾಹ ತಡೆ ಕಾಯ್ದೆಯ ಬಗ್ಗೆ ಜಾಗೃತಿ ಮೂಡಿಸುವುದು ಬಹಳ ಅವಶ್ಯಕವಾಗಿದೆ ಎಂದು ಸಂಡೂರು ತಾಲ್ಲೂಕಿನ ಶಾಲಾ ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿ ಜಕಣಚಾರಿ ಹೇಳಿದರು.

ತಾಲ್ಲೂಕಿನ ಚೋರುನೂರು ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ, ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಬಾಲ್ಯ ವಿವಾಹ ತಡೆ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಬಾಲ್ಯ ವಿವಾಹ, ಬಾಲ ಕಾರ್ಮಿಕತನ, ಮಕ್ಕಳ ಹಕ್ಕುಗಳ ಬಗ್ಗೆ ಸಮಗ್ರವಾಗಿ ಅರಿತುಕೊಳ್ಳಲು ಗ್ರಾಮೀಣ ಪ್ರದೇಶದಲ್ಲಿನ ಜನರಿಗೆ ಶಿಕ್ಷಣ ಜೊತೆಗೆ ಅರಿವು ಮೂಡಿಸುವ ಸರ್ಕಾರಿ ಕಾರ್ಯಕ್ರಗಳು ಸಹ ಅವಶ್ಯಕವಾಗಿದೆ ಎಂದರು.

### ಆಸ್ತಿಗಾಗಿ ಅಕ್ಕನನ್ನು ಕೊಂದ ತಮ್ಮನಿಗೆ ಜೀವಾವಧಿ ಶಿಕ್ಷೆ

• ಉದಯವಾಹಿನಿ, ಬಳ್ಳಾರಿ

ಆಸ್ತಿಗಾಗಿ ಸ್ವಂತ ಅಕ್ಕನನ್ನೇ ಕೊಂದಿದ್ದ ವೇಣುಗೋಪಾಲ್ ಕೆ.ಜೆ ಎಂಬುವವನಿಗೆ ಜಿಲ್ಲಾ 2ನೇ ಸೆಷನ್ಸ್ ನ್ಯಾಯಾಲಯದ ಪ್ರಭಾರ ನ್ಯಾಯಾಧೀಶರು ಕಠಿಣ ಜೀವಾವಧಿ ಶಿಕ್ಷೆ ಮತ್ತು 25 ಸಾವಿರ ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ದಂಡ ನೀಡಲು ವಿಫಲವಾದರೆ, 1 ವರ್ಷ ಸಾದಾ ಶಿಕ್ಷೆ ವಿಧಿಸಬೇಕು ಎಂದು ಕೋರ್ಟ್ ಹೇಳಿದೆ. ಜತೆಗೆ ಮೃತ ಸುನಂದಾ ಪೂಜಾರ್ ಪುತ್ರ ಅಖಿಲ್ ಪೂಜಾರ್‌ಗೆ 50 ಸಾವಿರ ಪರಿಹಾರ ನೀಡಬೇಕು. ಇಲ್ಲವಾದರೆ ಆಸ್ತಿಯಿಂದ ಈ ಹಣವನ್ನು ಹೊಂದಿಸಿಕೊಡಬೇಕು ಎಂದು ತೀರ್ಪಿನಲ್ಲಿ ಹೇಳಲಾಗಿದೆ. ಬಳ್ಳಾರಿ ನಗರದ ಸತ್ಯನಾರಾಯಣ ಪೇಟೆಯಲ್ಲಿ ವೇಣುಗೋಪಾಲ ನೆಲೆಸಿದ್ದರು.

ಅಕ್ಕ ಸುನಂದಾ ಕೂಡ ಅದೇ ಮನೆಯಲ್ಲಿ ಇದ್ದರು. ಗಂಡನನ್ನು ಬಿಟ್ಟು ಬಂದಿದ್ದ ಆಕೆ ಆಸ್ತಿಯಲ್ಲಿ ಭಾಗ ಕೇಳಿದ್ದಳು. ಇದರಿಂದ ಪಾರಾಗಲು ಬಯಸಿದ್ದ ವೇಣುಗೋಪಾಲ 2017ರ ನ.3ರಂದು ತನ್ನ ಅಕ್ಕನ ಮೇಲೆ ಮಚ್ಚಿನಿಂದ ದಾಳಿ ಮಾಡಿದ್ದ. ತಲೆಗೆ ತೀವ್ರ ಪೆಟ್ಟಾಗಿದ್ದ ಸುನಂದಾ ಅವರನ್ನು ವಿಮ್ಸ್ ಗೆ ದಾಖಲಿಸಲಾಗಿತ್ತಾದರೂ ಅವರು ಮೃತಪಟ್ಟಿದ್ದರು. ಪ್ರಕರಣದಲ್ಲಿ 16 ಸಾಕ್ಷಿದಾರರನ್ನು ವಿಚಾರಣೆ ಆಡಲಾಗಿದೆ. ಸರ್ಕಾರದ ಪರವಾಗಿ ಲಕ್ಷ್ಮೀ ದೇವಿ ಪಾಟೀಲ ವಾದಿಸಿದ್ದರು.

### ಯೂರಿಯಾ ಗೊಬ್ಬರ ಪೂರೈಕೆಗೆ ಮನವಿ

• ಉದಯವಾಹಿನಿ, ನಿಡಗುಂದಿ

ತೊಗರಿ, ಮೆಕ್ಕೆಜೋಳ, ಈರುಳ್ಳಿ ಮತ್ತಿತರ ಬೆಳೆಗಳಿಗೆ ಯೂರಿಯಾ ಗೊಬ್ಬರ ನೀಡಬೇಕು. ಇಲ್ಲದಿದ್ದರೆ ಬೆಳೆಗಳು ಹಳದಿ ಬಣ್ಣಕ್ಕೆ ತಿರುಗಿ ನಾಶವಾಗುವ ಆತಂಕವಿದೆ. ಕೂಡಲೆ ಸರ್ಕಾರ ಈ ಕುರಿತು ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ರೈತ ಸಂಘ, ಹಸಿರು ಸೇನೆ ಜಿಲ್ಲಾ ಘಟಕದ ಪದಾಧಿಕಾರಿಗಳು ತಹಶೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿದರು.

ಸಂಘಟನೆ ಜಿಲ್ಲಾ ಅಧ್ಯಕ್ಷ ನಿಂಗರಾಜ ಆಲೂರ ಮಾತನಾಡಿ, ರೈತರು ಯೂರಿಯಾ ಗೊಬ್ಬರಕ್ಕಾಗಿ ನಿತ್ಯ ಅಲೆದಾಡುತ್ತಿದ್ದರೂ ಗೊಬ್ಬರ ಸಿಗುತ್ತಿಲ್ಲ. ಗುರಿಗಿಂತ ಹೆಚ್ಚು ಬಿತ್ತನೆ ಆಗಿದ್ದು, ಅದಕ್ಕೆ ತಕ್ಕಂತೆ ಗೊಬ್ಬರ ವಿತರಿಸುವಲ್ಲಿ ಕೃಷಿ ಸಚಿವರು ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಗ್ರೇಡ್-2 ತಹಶೀಲ್ದಾರ್ ಎಸ್.ಎಸ್.ಭಾವಿಕಟ್ಟಿ ಅವರಿಗೆ ಮನವಿ ಸಲ್ಲಿಸಲಾಯಿತು. ಮುಖಂಡರಾದ ಮಹಾಂತಪ್ಪ ವಾಲೀಕಾರ, ಶಶಿಕಾಂತ ದೇಸಾಯಿ, ಸಂಜೀವ ಚನಗೊಂಡ, ರಾಮಣ್ಣ ಸೀತಿಮನಿ, ಲಕ್ಷ್ಮಣಗೌಡ ಬಿರಾದಾರ, ಶಿವಪ್ಪ ಪಾಟೀಲ, ಶೇಖಪ್ಪ ಕೋಳೂರ, ಶಿವಪ್ಪ ಹೆಬ್ಬಾಳ ಇದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 13:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ತೊಂದರೆಗಳ ಬಗ್ಗೆ ಚಿಂತಿಸುವ, ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು.

**ವೃಷಭ** ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ.

**ಮಿಥುನ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ಪ್ರೀತಿ ಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ.

**ಕರ್ಕಾಟಕ** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು ಮತ್ತು ಸಾಧ್ಯವಾದರೆ ನಿಮ್ಮ ಸ್ನೇಹಿತರು ಧೂಮಪಾನ ಮಾಡುವಾಗ ಅವರ ಜೊತೆ ನಿಲ್ಲಬೇಡಿ. ಏಕೆಂದರೆ ಅದು ಮಗುವನ್ನು ಬಾಧಿಸಬಹುದು. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

**ಸಿಂಹ** ನಿಮ್ಮ ಮಹತ್ವಾಕಾಂಕ್ಷೆ, ಆಕಾಂಕ್ಷೆಗಳು ಭಯದಿಂದ ಹಾನಿಗೊಳಗಾಗುವ ಸಾಧ್ಯತೆಗಳು ಹೆಚ್ಚಿವೆ. ಇದನ್ನು ನಿಭಾಯಿಸಲು ನಿಮಗೆ ಸರಿಯಾದ ಸಲಹೆ ಬೇಕು. ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು, ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ನೀವು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ಕನ್ಯಾ** ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ನಿಮ್ಮ ಪಾಲುದಾರರು ಅವರ ಅಭಿಪ್ರಾಯಗಳನ್ನು ನಿರ್ಲಕ್ಷಿಸಿದರೆ ಅವರ ತಾಳ್ಮೆ ಕಳೆದುಕೊಳ್ಳುತ್ತಾರೆ.

**ತುಲಾ** ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಇಂದು ಹೂಡಿಕೆಗಳನ್ನು ಮಾಡಬಾರದು. ನಿಮ್ಮ ಮಕ್ಕಳು ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ಇದು ಚಿಕಿತ್ಸೆಯ ಅತ್ಯುತ್ತಮ ರೂಪ.

**ವೃಶ್ಚಿಕ** ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

**ಧನಸ್ಸು** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಮನೆಯಲ್ಲಿ ನಿಮ್ಮ ಮಕ್ಕಳು ಅತಿಶಯೋಕ್ತಿಯಿರುವ ಸಂಧರ್ಭದಲ್ಲಿ ನಿಮ್ಮನ್ನು ಸಿಲುಕಿಸುತ್ತಾರೆ.

**ಮಕರ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ.

**ಕುಂಭ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು.

**ಮೀನ** ಕೋಪದ ಬಡಿದೆಬ್ಬಿಸುವಿಕೆ ವಾದ ಮತ್ತು ಘರ್ಷಣೆಗೆ ಕಾರಣವಾಗಬಹುದು. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ನಿಮ್ಮ ಕುಟುಂಬದ ಸದಸ್ಯರ ಭಾವನೆಗಳನ್ನು ನೋಯಿಸುವುದನ್ನು ತಪ್ಪಿಸುವ ಮೂಲಕ ನಿಮ್ಮ ಕೋಪವನ್ನು ನಿಯಂತ್ರಿಸಿ.

# ಪಠ್ಯದ ಜತೆಗೆ ಸೃಜನಶೀಲ ಚಟುವಟಿಕೆಗಳಲ್ಲಿಯೂ ಪಾಲ್ಗೊಳ್ಳಿ

• ಉದಯವಾಹಿನಿ, ಚಿತ್ರದುರ್ಗ

ವಿದ್ಯಾರ್ಥಿಗಳು ಪಠ್ಯದ ಕಲಿಕೆ ಜೊತೆಗೆ ಸೃಜನಶೀಲ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಇದರಿಂದ ಭವಿಷ್ಯದಲ್ಲಿ ಸಮಾಜದಲ್ಲಿ ಉತ್ತಮ ಅವಕಾಶಗಳು ದೊರೆತರೆ ನಾಡಿನಲ್ಲಿ ಒಳ್ಳೆಯ ಹೆಸರು ಗಳಿಸಲು ಸಾಧ್ಯವಿದೆ ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಹೇಳಿದರು. ನಗರದ ಜೋಗಿಮಟ್ಟಿ ರಸ್ತೆಯ ಪರಿಶಿಷ್ಟ ವರ್ಗಗಳ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ಕನ್ನಡ, ಸಂಸ್ಕೃತಿ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ ಸುಗಮ ಸಂಗೀತ, ಹಾರ್ಮೋನಿಯಂ, ತಬಲಾ ವಾದ್ಯ ಕಲಿಕಾ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಉತ್ತಮ ಅಂಕ ಗಳಿಸಿ, ಉತ್ತೀರ್ಣರಾಗುವ ವಿದ್ಯಾರ್ಥಿಗಳು ಮಾತ್ರ ಪ್ರತಿಭಾವಂತರಲ್ಲ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವವರು ಸಹ ಪ್ರತಿಭಾವಂತರಾಗಿ ನಮ್ಮ ನಾಡಿನ ಹಾಗೂ ದೇಶಕ್ಕೆ ಕೀರ್ತಿ ತರಲು ಸಾಧ್ಯವಿದೆ ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಯುವ ಜನರ



ಉದಯವಾಹಿನಿ ಚಿತ್ರ

ಪ್ರತಿಭೆಗಳ ಅನಾವರಣಕ್ಕೆ ಯುವ ಸೌರಭ, ಸಾಂಸ್ಕೃತಿಕ ಸೌರಭ, ಸುಗ್ಗಿ-ಹುಗ್ಗಿ, ಜನಪರ ಉತ್ಸವ, ಗಿರಿಜನ ಉತ್ಸವ, ಚಿಗುರು ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದ ಅವರು, ನಮ್ಮ ದೇಶವು ವೈವಿದ್ಯಮಯವಾದ ಸಂಸ್ಕೃತಿ ಹೊಂದಿದ್ದು, ಒಂದೊಂದು ನಾಡಿನಲ್ಲಿ ಒಂದೊಂದು ಬಗೆಯ ಸಂಸ್ಕೃತಿ ಇದೆ. ಭಾರತ ದೇಶ ಸುತ್ತಿದರೆ ಇಡೀ ಜಗತ್ತನ್ನು ಸುತ್ತಿದಂತೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಬಹಳಷ್ಟು ವಿದ್ಯಾರ್ಥಿಗಳು ಕಲೆಯಲ್ಲಿ ವೈವಿದ್ಯಮಯ ಪ್ರತಿಭೆ ಹೊಂದಿದ್ದು, ಸುಪ್ತವಾಗಿ ಅಡಗಿರುವ ಪ್ರತಿಭಾ ಪ್ರದರ್ಶನಕ್ಕೆ ವೇದಿಕೆ, ಪ್ರತಿಭೆಗಳ ಗುರುತಿಸುವ ಕಾರ್ಯ ಶಾಲಾ ಹಾಗೂ ಕಾಲೇಜು ಮಟ್ಟದಲ್ಲಿ ಆಗಬೇಕಿದೆ. ಆಸಕ್ತಿದಾಯಕವಾಗಿರುವ ಕ್ಷೇತ್ರಗಳ ಗುರುತಿಸಿ, ಅವರಿಗೆ ಆ ಕ್ಷೇತ್ರದಲ್ಲಿ ತರಬೇತಿ ಕೊಡುತ್ತಿರುವುದು ನಿಜಕ್ಕೂ ಉತ್ತಮ ಕೆಲಸ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಸುಗಮ ಸಂಗೀತ, ಹಾರ್ಮೋನಿಯಂ ಹಾಗೂ ತಬಲಾ ವಾದ್ಯ ಕಲಿಕಾ ತರಬೇತಿ ನೀಡುವುದರಿಂದ ಭವಿಷ್ಯದಲ್ಲಿ ಉತ್ತಮ ಅವಕಾಶಗಳು ಲಭಿಸಲಿವೆ ಎಂದು ತಿಳಿಸಿದ ಅವರು, ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಕಲಿಕೆಯ ಗುಣಮಟ್ಟ ಹೆಚ್ಚಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ದಿವಾಕರ್, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಂ.ಟಿ. ಶಿವರಾಜ್, ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಪಾಲಕಿ ಕೆ.ಎಸ್.ವೈಶಾಲಿ, ಹೊಸದುರ್ಗದ ಸುಗಮ ಸಂಗೀತ ಕಲಾವಿದ ಓ.ಮೂರ್ತಿ ಸೇರಿದಂತೆ ಸರ್ಕಾರಿ ಪರಿಶಿಷ್ಟ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ವಿದ್ಯಾರ್ಥಿನಿಯರು ಇದ್ದರು.

> ಮಾನಸಿಕ ನೆಮ್ಮದಿ ಹಾಗೂ ಹರ್ಷವನ್ನು ಕೊಡುವ ಮಾಧ್ಯಮ ಸಂಗೀತ, ಕಲಾ ಮಾಧ್ಯಮವಾಗಿದೆ. ಚಿತ್ರದುರ್ಗದ ನೆಲ ಸಂಗೀತ, ಸಾಹಿತ್ಯ, ಸಂಸ್ಕೃತಿಗೆ ತುಂಬಾ ಹೆಸರುವಾಸಿಯಾದ ನೆಲ. ಸಂಗೀತ, ಸಾಹಿತ್ಯ, ಕಲೆ, ಸಂಸ್ಕೃತಿಯು ನಮ್ಮ ಬದುಕಿನ ಭಾಗವೂ ಹೌದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ ಸುಗಮ ಸಂಗೀತ, ಹಾರ್ಮೋನಿಯಂ ಹಾಗೂ ತಬಲಾ ವಾದ್ಯ ಕಲಿಕಾ ತರಬೇತಿಯನ್ನು ಸುಮಾರು 6 ತಿಂಗಳ ಕಾಲ ನೀಡಲಿದ್ದು, ವಾರದಲ್ಲಿ 3 ದಿನ ತರಬೇತಿ ನಡೆಯಲಿದೆ. ವಿದ್ಯಾರ್ಥಿಗಳು ಆಸಕ್ತಿವಹಿಸಿ ಕಲಿಯುಬೇಕಿದೆ.
>
> -ಡಾ. ಬಿ.ಎಂ. ಗುರುನಾಥ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ

# ಸಂಗೊಳ್ಳಿ ರಾಯಣ್ಣ ದೇಶಭಕ್ತರ ಪ್ರತೀಕ

## ಕುಂಟೋಜಿ ಗ್ರಾಮದಲ್ಲಿ ರಾಯಣ್ಣ ಪ್ರತಿಮೆ ಪ್ರತಿಷ್ಠಾಪನೆ, ರಾಯಣ್ಣ ಪ್ರತಿಮೆಯ ಮೆರವಣಿಗೆ

• ಉದಯವಾಹಿನಿ, ಮುದ್ದೇಬಿಹಾಳ


ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಪ್ರತಿಮೆ ಪ್ರತಿಷ್ಠಾಪನೆ ಹಾಗೂ ರಾಯಣ್ಣ ವೃತ್ತದ ಲೋಕಾರ್ಪಣೆ ಕಾರ್ಯಕ್ರಮವು ತಾಲ್ಲೂಕಿನ ಕುಂಟೋಜಿ ಗ್ರಾಮದಲ್ಲಿ ಅದ್ದೂರಿಯಾಗಿ ನಡೆಯಿತು. ಕಾರ್ಯಕ್ರಮಕ್ಕೂ ಮುನ್ನ ಮುದ್ದೇಬಿಹಾಳ ಪಟ್ಟಣದ ಕನಕದಾಸ ಶಾಲೆಯಿಂದ ಕುಂಟೋಜಿ ಗ್ರಾಮದವರೆಗೆ ಸಂಗೊಳ್ಳಿ ರಾಯಣ್ಣ ಪ್ರತಿಮೆಯ ಭವ್ಯ ಮೆರವಣಿಗೆ ಮಾಡಲಾಯಿತು. ಈ ಮೆರವಣಿಗೆಯಲ್ಲಿ ಸುಮಂಗಲಿಯರು ಪೂರ್ಣಕುಂಭ ಹೊತ್ತು ಸಾಗಿದರೆ, ರಾಯಣ್ಣನ ಭಕ್ತರು ಡೊಳ್ಳು ಮೇಳದೊಂದಿಗೆ ಸಡಗರದಿಂದ ರಾಯಣ್ಣನನ್ನು ಬರಮಾಡಿಕೊಂಡರು.

**ರಾಯಣ್ಣ ತನಗಾಗಿ ಬದುಕಲಿಲ್ಲ**

ಕುಂಟೋಜಿಯ ನೂತನ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಎಂಟೂವರೆ ಅಡಿ ಎತ್ತರದ ಫೈಬರ್‌ನಿಂದ ನಿರ್ಮಿಸಿದ ರಾಯಣ್ಣನ ಮೂರ್ತಿ ಪ್ರತಿಷ್ಠಾಪಿಸಲಾಯಿತು. ತಿಂಥಣಿ ಕನಕಗುರುಪೀಠದ ಶ್ರೀ ಸಿದ್ಧರಮಾನಂದ ಮಹಾಸ್ವಾಮಿಗಳು, ಸರೂರು ಅಗತೀರ್ಥದ ಶ್ರೀ ರೇವಣಸಿದ್ಧೇಶ್ವರ ಶಾಂತಮಯ ಮಹಾಸ್ವಾಮಿಗಳು, ಹಾಲುಮತ ಗುರುಪೀಠದ ಶಿವಕುಮಾರ್ ಸ್ವಾಮಿಗಳು, ಹದಡಿ ಚಂದ್ರ ರಿಮಠ ವಿದ್ಯಾವರಣ್ಣ ಯೋಗೇಶ್ವರ ಆಶ್ರಮದ ಶ್ರೀ ಮುರಳಿಧರ ಮಹಾ ಸ್ವಾಮಿಗಳು ಪುಷ್ಪಾರ್ಚನೆ ಮಾಡುವ ಮೂಲಕ ಮೂರ್ತಿ ಪ್ರತಿಷ್ಠಾಪನೆ ನೆರವೇರಿಸಿದರು. ಅವರು ಮುಂದುವರೆದು, ಸಂಗೊಳ್ಳಿ ರಾಯಣ್ಣ ತನಗಾಗಿ ಬದುಕಲಿಲ್ಲ. ಆಸ್ತಿ, ಅಂತಸ್ತುಗಳ ಆಮಿಷಕ್ಕೆ ಒಳಗಾಗದೆ ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದರು.

ಅಂತಹ ದೇಶಭಕ್ತನ ಪ್ರತಿಮೆ ಸ್ಥಾಪಿಸಿದ ಕುಂಟೋಜಿ ಯುವಕರು ಯಾವುದೇ ದುಶ್ಚಟಗಳಿಗೆ ದಾಸರಾಗದೆ, ಅವುಗಳನ್ನು ತ್ಯಜಿಸುವ ಸಂಕಲ್ಪವನ್ನು ರಾಯಣ್ಣ ಪ್ರತಿಮೆ ಮುಂದೆ ಮಾಡಬೇಕು ಎಂದು ಕರೆ ನೀಡಿದರು. ಪತ್ರಕರ್ತ ಬಸವರಾಜ ಹುಲಗಣ್ಣೆ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಸ್. ಕೆ. ಹರನಾಳ ಅವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕುರಿತು ದೇಶಭಕ್ತಿಯ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಪ್ರತಿಮೆ ಪ್ರತಿಷ್ಠಾಪನೆಗೆ ಶ್ರಮಿಸಿದ ಗಣ್ಯಮಾನ್ಯರು ಮತ್ತು ಸಂಗೊಳ್ಳಿ ರಾಯಣ್ಣ ಯುವ ಸಮಿತಿಯ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು. ರುದ್ರಯ್ಯ ಮಠ, ಗುರುಲಿಂಗಪ್ಪ ಸುಲ್ಲಳ್ಳಿ, ಸಂಗನಗೌಡ ಪಾಟೀಲ್, ರವಿ ಜಗಲಿ, ಬಿ.ಟಿ. ಚಿಗರಿ, ಎಂ.ಎಂ. ನಾಟೀಕಾರ, ಎಂ.ಬಿ. ಹುಲಿಬೆಂಚಿ, ಕಾಳಿದಾಸ ಜಾತೋಣಿ ಸೇರಿದಂತೆ ಕುಂಟೋಜಿ ಗ್ರಾಮದ ಹಿರಿಯರು, ಗಣ್ಯರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ನಾಗರಾಜ ಮಿಲಟರಿ ಪ್ರಾರ್ಥನೆ ಸಲ್ಲಿಸಿದರೆ, ನ್ಯಾಯವಾದಿ ಬಸವರಾಜ ಬಡಿಗೇರ ನಿರೂಪಿಸಿ ವಂದಿಸಿದರು.



ಉದಯವಾಹಿನಿ ಚಿತ್ರ

### ಕಂಚಿನ ರಾಯಣ್ಣ ಪ್ರತಿಮೆ ಸ್ಥಾಪನೆ

ಮಲ್ಲಿಕಾರ್ಜುನ ಮದರಿ ಸಮಾರಂಭ ಉದ್ಘಾಟಿಸಿ ಮಾತನಾಡಿದ ತಾಲ್ಲೂಕು ಕುರುಬರ ಸಂಘದ ಅಧ್ಯಕ್ಷ, ಸಮಾಜಸೇವಕ ಮಲ್ಲಿಕಾರ್ಜುನ ಮದರಿ, ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಸಂಗೊಳ್ಳಿ ರಾಯಣ್ಣನ ಪ್ರತಿಮೆಗಳು ಅನಾವರಣಗೊಂಡಿವೆ. ಅದೇ ರೀತಿ ಶೀಘ್ರದಲ್ಲೇ ಮುದ್ದೇಬಿಹಾಳ ಪಟ್ಟಣಕ್ಕೆ ರಾಯಣ್ಣನ ಕಂಚಿನ ಪ್ರತಿಮೆ ಬರಲಿದ್ದು, ಕೆಲವೇ ತಿಂಗಳಲ್ಲಿ ವೃತ್ತ ಹಾಗೂ ಪ್ರತಿಮೆಯನ್ನು ಲೋಕಾರ್ಪಣೆ ಮಾಡಲಾಗುತ್ತದೆ ಎಂದು ಘೋಷಿಸಿದರು.

### ರಾಯಣ್ಣ ಯಾವುದೇ ಒಂದು ವರ್ಗಕ್ಕೆ ಸೀಮಿತವಲ್ಲ

ಶ್ರೀ ಸಿದ್ಧರಮಾನಂದ ಮಹಾಸ್ವಾಮಿಗಳು ಕುಂಟೋಜಿ ವಿದ್ಯಾವರಣ್ಯ ಆಶ್ರಮದ ಆವರಣದಲ್ಲಿ ನಡೆದ ಸಮಾರಂಭದಲ್ಲಿ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಸಿದ್ಧರಮಾನಂದ ಮಹಾಸ್ವಾಮಿಗಳು ಮತ್ತು ಶ್ರೀರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿಗಳು, ಸಂಗೊಳ್ಳಿ ರಾಯಣ್ಣ ಕೇವಲ ಕುರುಬರ ಪ್ರತೀಕವಲ್ಲ. ರಾಯಣ್ಣ ಸ್ವಾಭಿಮಾನ ಹಾಗೂ ದೇಶಭಕ್ತರ ಪ್ರತೀಕವಾಗಿದ್ದಾರೆ. ಅವರನ್ನು ಯಾವುದೇ ಒಂದು ವರ್ಗಕ್ಕೆ ಸೀಮಿತಗೊಳಿಸಬೇಡಿ. ಪ್ರತಿಯೊಬ್ಬರೂ ದೇಶಪ್ರೇಮ ಮೈಗೂಡಿಸಿಕೊಂಡು ಮನೆತನದ ಸಂಸ್ಕೃತಿಯನ್ನು ಉಳಿಸಬೇಕು ಎಂದರು.

# ಹುಟ್ಟುಹಬ್ಬದ ನಿಮಿತ್ತ: ಆಸ್ವತ್ರೆಯಲ್ಲಿ ಹಣ್ಣುಹಂಪಲು ವಿತರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಚಂದಾಪೂರದ ಸರ್ಕಾರಿ ಸಾರ್ವಜನಿಕ ಆಸ್ವತ್ರೆಯಲ್ಲಿ ವೀರ ಕನ್ನಡಿಗರ ಸೇನೆಯ ತಾಲ್ಲೂಕಾಧ್ಯಕ್ಷ ಗೋಪಾಲ ಇಡಗೋಟ್ಟಿ ಅವರ 34ನೇ ಹುಟ್ಟುಹಬ್ಬದ ಪ್ರಯುಕ್ತ ವೀರ ಕನ್ನಡಿಗರ ಸೇನೆಯ ಪದಾಧಿಕಾರಿಗಳ ನೇತೃತ್ವದಲ್ಲಿ ಬಡರೋಗಿಗಳಿಗೆ ಹಣ್ಣುಹಂಪಲು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ವೀರ ಕನ್ನಡಿಗರ ಸೇನೆಯ ವಿಭಾಗೀಯ ಕಾರ್ಯಾಧ್ಯಕ್ಷ ವಿಠ್ಠಲ್ ಕುಸಾಳೆ, ರಾಜು ತೋಡಿ ಇದ್ಲಾಯಿ, ಸಚಿನ ಅಣವಾರ, ವಕೀಲರು ಇರ್ಫಾನ್ ಮಾಲಿ ಪಟೇಲ್, ಬಸವರಾಜ ವಾಡಿ, ಮಹೇಶ ರಾಣಾಪೂರ, ವೀರಶೆಟ್ಟಿ, ಶ್ರೀಕಾಂತ ಪೋಲಕಪಳ್ಳಿ, ಶರತ್ ಚಿಮ್ಮಾಯಿದ್ಲಾಯಿ ಸೇರಿದಂತೆ ಅನೇಕರಿದ್ದರು.

# ವಿದ್ಯುತ್ ವ್ಯತ್ಯಯ ಇಂದು

• ಉದಯವಾಹಿನಿ, ಸವದತ್ತಿ

ಇಲ್ಲಿನ 220 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ 10 ಎಂವಿಎ, 110/11 ಕೆವಿ ಪರಿವರ್ತಕ ಅವಳವಡಿಕೆ ಹಾಗೂ 110 ಕೆವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಎರಡನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಇರುವ ಕಾರಣ ಆಗಸ್ಟ್ 3ರಂದು ಸಂಪೂರ್ಣ ವಿದ್ಯುತ್ ವ್ಯತ್ಯಯವಾಗಲಿದೆ.

ಆ.3ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ಇಲ್ಲಿನ ರಾಮಾಪೂರ ಸೈಟ್, ಮಾಮನಿಕೇರಿ ರಸ್ತೆ, ಎಸ್‌ಎಲ್‌ಎಓ ಕ್ರಾಸ್, ಗೋಕಾಕ್ ಮಿಲ್, ಪದಕಿಪುರಂ, ಹೊಸ ಬಸ್ ನಿಲ್ದಾಣ, ತಾಲ್ಲೂಕಾಸ್ಪತ್ರೆ, ಕೆಂಚಲಾರಕೊಪ್ಪ, ಪುರಸಭೆ, ಸೌಗಂಧಿಪುರ, ಕುಂಬಾರ ಓಣಿ, ತಾಲ್ಲೂಕಿನ ಕರೀಕಟ್ಟಿ, ಅಸುಂಡಿ, ಶಿಂಗಾರಗೊಪ್ಪ, ಸುತಗಟ್ಟಿ, ಹಿಟ್ಟಣಗಿ, ಕುರುವಿನಕೊಪ್ಪ, ಕಟಮಳ್ಳಿ, ಗೊರವನಕೊಳ್ಳ, ಯಡ್ರಾಂವಿ, ಬೆಟಸೂರ, ಹಿರೇಉಳ್ಳಿಗೇರಿ, ಇನಾಮ ಹೊಂಗಲ, ಸಂಗ್ರೇಶಕೊಪ್ಪ, ಯಡಹಳ್ಳಿ, ಕೆಂಚರಾಮನಹಾಳ, ಶಿಂಗಾರಗೊಪ್ಪ ಜಾಕವೆಲ್‌ಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ.

ಅದೇ ದಿನ ಬೆಳಿಗ್ಗೆ 8.30ರಿಂದ ಮಧ್ಯಾಹ್ನ 1.30ವರೆಗೆ ಇಲ್ಲಿನ ಕೆಹೆಚ್‌ಬಿ ಕಾಲೊನಿ, ಬಸವ ಸದನ, ರೇಣುಕಾ ನಗರ, ಅಂಬೇಡ್ಕರ ನಗರ, ಎಪಿಎಂಸಿ, ಕಟಕೋಳ ಬ್ಯಾಂಕ್, ಆನಿ ಅಗಸಿ, ಬಂಡಿ ಓಣಿ, ಶಾಂತಿ ನಗರ, ತಾಲ್ಲೂಕಿನ ಯಲ್ಲಮ್ಮನಗುಡ್ಡ, ಯಲ್ಲಮ್ಮಗುಡ್ಡ ತಾಂಡಾ, ಚುಳಕಿ, ಚಿಕ್ಕುಂಬಿ, ಹಿರೇಕುಂಬಿ, ಹಂಚಿನಾಳ, ದಡೇರಕೊಪ್ಪ, ಹರ್ಲಾಪೂರ, ಉಗರಗೋಳ, ಬೆಟಸೂರ, ಯಡ್ರಾಂವಿ, ಗೊರವನಕೊಳ್ಳ, ಕುರುವಿಕೊಪ್ಪ, ಕಟಮಳ್ಳಿ, ಹಿರೇಉಳ್ಳಿಗೇರಿ, ಚಿಕ್ಕಉಳ್ಳಿಗೇರಿ ಇನಾಮಹೊಂಗಲ, ಸಂಗ್ರೇಶಕೊಪ್ಪ, ಯಡಹಳ್ಳಿ, ಅಸುಂಡಿ, ಶಿಂಗಾರಗೊಪ್ಪ, ಸುತಗಟ್ಟಿ, ಹಿಟ್ಟಣಗಿಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಆಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ಪಂಚ ಗ್ಯಾರಂಟಿ: ಶೀಘ್ರ ದೋಷ ತಿದ್ದಿಕೊಳ್ಳಿ

• ಉದಯವಾಹಿನಿ, ಬೆಳಗಾವಿ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಎಲ್ಲಾ ಅಧಿಕಾರಿಗಳು, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷರು ಕೈ ಜೋಡಿಸಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ತಾಂತ್ರಿಕ ದೋಷಗಳನ್ನು ಸರಿಪಡಿಸಿ ಅರ್ಹ ಫಲಾನುಭವಿಗಳಿಗೆ ಯೋಜನೆಗಳು ಸಿಗುವಂತೆ ಎಲ್ಲರೂ ಕಾರ್ಯ ನಿರ್ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ತಿಳಿಸಿದರು.

ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ವಿಡಿಯೋ ಸಂವಾದದಲ್ಲಿ ಮಾತನಾಡಿದ ಅವರು, ತಾಲ್ಲೂಕು ಮಟ್ಟದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಪ್ರತಿ ತಿಂಗಳು ಅಧಿಕಾರಗಳ ಸಭೆ ಕರೆದು ಪ್ರಗತಿ ಪರಿಶೀಲನಾ ಸಭೆ ನಡೆಬೇಕು. ಅದೇ ರೀತಿಯಲ್ಲಿ ಗ್ಯಾರಂಟಿ ಸಮಿತಿ ಸದಸ್ಯರು ಗ್ರಾಮ ಪಂಚಾಯಿತಿಗಳಿಗೂ ಭೇಟಿ ನೀಡಿ ಯೋಜನೆಯಿಂದ ಹೊರಗುಳಿದವರಿಗೆ ಯೋಜನೆಗಳು ಸಿಗುವಂತೆ ನೋಡಿಕೊಳ್ಳಬೇಕು' ಎಂದು ಸೂಚಿಸಿದರು. ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಮಾತನಾಡಿ, ಬಡಜನರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಮಾಡಿದ್ದು, ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ತಲುಪುವಂತೆ ಮಾಡಬೇಕು ಎಂದು ಹೇಳಿದರು. ಜಿಲ್ಲೆಯಲ್ಲಿ 1,865 ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿದ್ದು, ಅರ್ಹ ಫಲಾನುಭವಿಗಳಿಗೆ ಪಡಿತರ ವಿತರಣೆ ಕಾರ್ಯ ಪ್ರಗತಿಯಲ್ಲಿದೆ. ಅಂತ್ಯೋದಯ 67,704, ಪಿ.ಎಚ್.ಎಚ್, 10,73,772 ಸೇರಿ ಒಟ್ಟು 11.41 ಲಕ್ಷಕ್ಕೂ ಹೆಚ್ಚು ಪಡಿತರ ಚೀಟಿಗಳು ಚಾಲ್ತಿಯಲ್ಲಿವೆ. ಅನ್ನಭಾಗ್ಯ ಯೋಜನೆಯಡಿ ಒಟ್ಟು 39,48,770 ಫಲಾನುಭವಿಗಳು ಪ್ರತಿ ಮಾಹೆ ಉಚಿತವಾಗಿ ಪಡಿತರ ಆಹಾರ ಧಾನ್ಯದ ಸದುಪಯೋಗ ಪಡೆಯುತ್ತಿದ್ದಾರೆ ಎಂದು ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ ಹೇಳಿದರು. ಆಗಸ್ಟ್ 2023 ರಿಂದ 200 ಯೂನಿಟ್ ಉಚಿತ ವಿದ್ಯುತ್ ಸೌಲಭ್ಯ ನೀಡಲಾಗುತ್ತಿದೆ. ಒಂದು ವೇಳೆ ಅರ್ಹ ಯೂನಿಟ್ ಬಳಕೆಕ್ಕಿಂತ ಕಡಿಮೆ ಬಳಕೆ ಮಾಡಿದಲ್ಲಿ ಶೂನ್ಯ ಬಿಲ್ ನೀಡಲಾಗುತ್ತಿದೆ ಎಂದು ಹೆಸ್ಕಾಂ ಅಧಿಕಾರಿಗಳು ವಿವರಿಸಿದರು.



ಉದಯವಾಹಿನಿ ಚಿತ್ರ

# ವೈದ್ಯರ ಕೊರತೆ ಖಂಡಿಸಿ ಧರಣಿ

• ಉದಯವಹಿನಿ,ಶಿಗ್ಗಾವಿ

ತಾಲ್ಲೂಕಿನ ಬಂಕಾಪುರ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ ನೀಗಿಸುವಂತೆ ಆಗ್ರಹಿಸಿ ಸಾರ್ವಜನಿಕರು ಆಸ್ಪತ್ರೆ ಮುಂದೆ ಪ್ರತಿಭಟನೆ ನಡೆಸಿ, ತಾಲ್ಲೂಕು ಆರೋಗ್ಯಾಧಿಕಾರಿ ಸತೀಶ ಅವರಿಗೆ ಮನವಿ ಸಲ್ಲಿಸಿದರು. ಸುತ್ತಲಿನ ಗ್ರಾಮಗಳ ಜನರು ಚಿಕಿತ್ಸೆಗಾಗಿ ಇಲ್ಲಿನ ಆಸ್ಪತ್ರೆ ಅವಲಂಬಿಸಿದ್ದು, ವೈದ್ಯರು, ಸಿಬ್ಬಂದಿ ಕೊರತೆಯಿಂದ ಸಮರ್ಪಕವಾಗಿ ಚಿಕಿತ್ಸೆ ಸಿಗುತ್ತಿಲ್ಲ. 30 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯಲ್ಲಿ ಶೌಚಾಲಯ ಸೇರಿದಂತೆ ಮೂಲಸೌಕರ್ಯಗಳೂ ಇಲ್ಲ. ಇದರಿಂದ ರೋಗಿಗಳು ಪರದಾಡುವಂತಾಗಿದೆ ಎಂದು ಪ್ರತಿಭಟನಕಾರರು ಆರೋಪಿಸಿದರು.

ಇಲ್ಲಿಗೆ ಬರುವ ವೈದ್ಯರನ್ನು ಬೇರೆಡೆ ವರ್ಗಾವಣೆ ಮಾಡಲಾಗುತ್ತಿದೆ. ಮುಖ್ಯವೈದ್ಯಾಧಿಕಾರಿ ಮನೋಜ ನಾಯಕ್ ಅವರ ವರ್ಗಾವಣೆ ರದ್ದುಪಡಿಸಬೇಕು ಎಂದೂ ಆಗ್ರಹಿಸಿದರು. ಈ ಆಸ್ಪತ್ರೆಗೆ ಬರುವ ರೋಗಿಗಳನ್ನು ಶಿಗ್ಗಾವಿ, ಹುಬ್ಬಳ್ಳಿ ಮತ್ತು ಹಾವೇರಿ ಆಸ್ಪತ್ರೆಗಳಿಗೆ ಕಳುಹಿಸಲಾಗುತ್ತಿದೆ. ಇಷ್ಟೆಲ್ಲ ಅವ್ಯವಸ್ಥೆಗಳ ನಡುವೆಯೂ ಮೂರು ವರ್ಷಗಳಿಂದ ಉತ್ತಮ ಆಸ್ಪತ್ರೆ ಪ್ರಶಸ್ತಿ ಪಡೆಯುತ್ತಿದೆ. ಇನ್ನಾದರೂ, ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದರ ಜತೆಗೆ, ರೋಗಿಗಳಿಗೆ ಸಕಲ ಸೌಲಭ್ಯ ದೊರೆಯುವಂತಾಗಬೇಕು ಎಂದು ಒತ್ತಾಯಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ತಾಲ್ಲೂಕು ಆರೋಗ್ಯಾಧಿಕಾರಿ ಸತೀಶ ಅವರು, 'ಜಿಲ್ಲಾ ಆರೋಗ್ಯಾಧಿಕಾರಿ ಜತೆ ಚರ್ಚಿಸಿ ವೈದ್ಯರ ನೇಮಕಾತಿ ಸೇರಿದಂತೆ ಸಕಲ ಸೌಲಭ್ಯ ಕಲ್ಪಿಸಲಾಗುವುದು' ಎಂದು ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು.



ಉದಯವಾಹಿನಿ ಚಿತ್ರ

# ಢವಳೇಶ್ವರ ಸೇತುವೆ ಸಂಚಾರಕ್ಕೆ ಮುಕ್ತ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಹಾಲಿಂಗಪುರ

ಘಟಪ್ರಭಾ ನದಿ ಪ್ರವಾಹದಿಂದ ಜಲಾವೃತಗೊಂಡು ಸಂಚಾರ ಸ್ಥಗಿತಗೊಂಡಿದ್ದ ಸಮೀಪದ ಢವಳೇಶ್ವರ ಸೇತುವೆ ಸಂಚಾರಕ್ಕೆ ಮುಕ್ತಗೊಂಡಿದೆ. ನದಿ ಒಳಹರಿವಿನ ಪ್ರಮಾಣ ಹೆಚ್ಚಾಗಿದ್ದರಿಂದ ಸೇತುವೆ ಜಲಾವೃತಗೊಂಡಿತ್ತು.

ಒಳ ಹರಿವು ಇಳಿಮುಖಗೊಂಡಿದ್ದರಿಂದ ಸೇತುವೆ ಮೇಲಿನ ಅಲ್ಪ ಪ್ರಮಾಣದ ನೀರಿನಲ್ಲಿಯೇ ಜನರು ಸಂಚರಿಸಲು ಆರಂಭಿಸಿದರು. ಪೂರ್ಣ ಪ್ರಮಾಣದಲ್ಲಿ ನೀರಿನ ಪ್ರಮಾಣ ಇಳಿಕೆಯಾಗಿದ್ದು, ಸೇತುವೆ ಸಂಚಾರಕ್ಕೆ ಮುಕ್ತವಾಗಿದೆ. ಇದರಿಂದ ಬಾಗಲಕೋಟೆ ಹಾಗೂ ಬೆಳಗಾವಿ ಜಿಲ್ಲೆಗಳ ಗಡಿಗೆ ಹೊಂದಿಕೊಂಡಿರುವ ಜನರ ಸಂಚಾರ ಎಂದಿನಂತೆ ಆರಂಭವಾಗಿದೆ.

# ಮಹಿಳೆಯರು ಆರೋಗ್ಯ ಕಾಳಜಿ ಮಾಡಿ

• ಉದಯವಾಹಿನಿ, ಗದಗ

ಆರೋಗ್ಯ ಎಲ್ಲರಿಗೂ ಅತಿ ಮುಖ್ಯ. ಹಾಗಾಗಿ, ಆರೋಗ್ಯ ಕಾಳಜಿ ಮಾಡುವುದು ಕೂಡ ಅಷ್ಟೇ ಮುಖ್ಯವಾಗಿದೆ ಎಂದು ಪ್ರಸೂತಿ ತಜ್ಞೆ ಡಾ. ಶಿಲ್ಪಾ ಪ್ರಕಾಶ ಕುಷ್ಟಗಿ ಹೇಳಿದರು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ಸುವರ್ಣ ಮಹೋತ್ಸವದ ಸಂಭ್ರಮದ ಅಂಗವಾಗಿ ಸಂಸ್ಥೆಯ ಮಹಿಳಾ ಘಟಕದಿಂದ ಆಯೋಜಿಸಿದ್ದ ಮನರಂಜನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹೆಣ್ಣುಮಕ್ಕಳು ಮನೆಯ ದೀಪ. ಮಹಿಳೆಯರು ಆರೋಗ್ಯವಾಗಿದ್ದರೆ ಮನೆಯವರೆಲ್ಲರೂ ಆರೋಗ್ಯದಿಂದ ಇರುತ್ತಾರೆ. ಋತುಚಕ್ರದ ಸಮಸ್ಯೆ ಇರುವ ಮಹಿಳೆಯರ ಆರೋಗ್ಯದಲ್ಲಿ ಏರುಪೇರು ಕಂಡುಬರುತ್ತದೆ. ಇಂತಹ ಸಂದರ್ಭದಲ್ಲಿ ವೈದ್ಯರನ್ನು ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬೇಕು ಎಂದರು. ಇತ್ತೀಚಿನ ದಿನಗಳಲ್ಲಿ 40ರಿಂದ 50 ವರ್ಷ ವಯಸ್ಸಿನ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಹಾಗೂ ಗರ್ಭಕೋಶದ ಕ್ಯಾನ್ಸರ್ ಕಂಡು ಬರುತ್ತಿವೆ. ಈ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ವರ್ಷಕ್ಕೊಮ್ಮೆ ಪರೀಕ್ಷಿಸಿಕೊಳ್ಳಬೇಕು ಎಂದರು.



ಉದಯವಾಹಿನಿ ಚಿತ್ರ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶಾತನಗೌಡ ಎಸ್.ಪಾಟೀಲ ಮಾತನಾಡಿ, ಸಂಸ್ಥೆಯ ಮಹಿಳಾ ಘಟಕವು ಮಹಿಳಾ ದಿನಾಚರಣೆಯಿಂದ ಹಿಡಿದು ವರ್ಷಪೂರ್ತಿ ಉತ್ತಮ ಕಾರ್ಯಕ್ರಮಗಳನ್ನು ಮಾಡುತ್ತಾ ಬರುತ್ತಿದೆ. ಕ್ರೀಡಾ ಚಟುವಟಿಕೆಯಿಂದ ಮಹಿಳೆಯರ ಶಕ್ತಿ ಸಾಮರ್ಥ್ಯ, ಧೈರ್ಯ ಹೆಚ್ಚಾಗುತ್ತದೆ ಎಂದರು. ಗದಗ ನಗರದ ವೈಷ್ಣವಿ ಈರಣ್ಣ ಇಮ್ಮಡಿ ಕುಸ್ತಿ ಆಟದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರನ್ನು ಗಳಿಸಿರುವುದು ಹೆಮ್ಮೆಪಡುವ ವಿಷಯವಾಗಿದೆ ಎಂದರು.

# ನ್ಯಾನೊ ಯೂರಿಯಾ ಸಿಂಪಡಣೆ ಪ್ರಾತ್ಯಕ್ಷಿಕೆ

• ಉದಯವಾಹಿನಿ, ರಾಣೆಬೆನ್ನೂರು

ತಾಲ್ಲೂಕಿನ ಹಿರೇಮಾಗನೂರು ಗ್ರಾಮದ ರೈತ ಪ್ರಭು ಕರಡೇರ ಜಮೀನಿನಲ್ಲಿ ಡ್ರೋಣ್ ಮೂಲಕ ನ್ಯಾನೊ ಯೂರಿಯಾ ಸಿಂಪಡಿಸುವ ಪ್ರಾತ್ಯಕ್ಷಿಕೆ ಜರುಗಿತು. ಇಫ್ಕೋ, ಕೃಷಿ ಇಲಾಖೆ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಅಧಿಕಾರಿ ಮಹ್ಮದ್ ಪಾಶಾ ಅವರು ನ್ಯಾನೊ ಯೂರಿಯಾ ಸಿಂಪಡಿಸಿ, ಜಾಗೃತಿ ಮೂಡಿಸಿದರು. ಜಗದೀಶ ಮಂಜನಗೌಡ ಪಾಟೀಲ, ಶಂಕರಗೌಡ ಹೊಸಗೌಡ್ರ, ಜಯಪ್ಪ ಕರಡೇರ, ಮಂಜುನಾಥ ನಿಂಗಜ್ಜನವರ ಇದ್ದರು.

# ಯುವ ಸಂಶೋಧಕರಿಂದ ಅರ್ಜಿ ಆಹ್ವಾನ

• ಉದಯವಾಹಿನಿ, ಬಾಗಲಕೋಟೆ

ಕರ್ನಾಟಕ ಬಯಲಾಟ ಅಕಾಡೆಮಿ ರಾಜ್ಯದ ವಿವಿಧ ಜಿಲ್ಲೆಗಳ ಬಯಲಾಟ ಕಲೆಗಳ ಅಧ್ಯಯನ, ಪರಿಚಯಕ್ಕಾಗಿ ಜಿಲ್ಲಾವಾರು ಬಯಲಾಟ ಪರಿಚಯ ಪುಸ್ತಕ ಪ್ರಕಟಿಸಲು ಯೋಜನೆ ರೂಪಿಸಿದೆ. ಪುಸ್ತಕ ರಚನೆಗೆ ಸಂಬಂಧಿಸಿದಂತೆ ಅಧ್ಯಯನಕ್ಕೆ ಯುವ ಸಂಶೋಧಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಕನ್ನಡ, ಜಾನಪದ, ಭಾಷಾವಿಜ್ಞಾನ, ಸಮಾಜವಿಜ್ಞಾನ, ರಾಜ್ಯಶಾಸ್ತ್ರ, ಮಾನವ ಶಾಸ್ತ್ರ ವಿಷಯಗಳಲ್ಲಿ ಸ್ನಾತಕೋತ್ತರ ಪದವೀಧರರಾಗಿರಬೇಕು. ಡಾಕ್ಟರೇಟ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದರು ತಮ್ಮ ಆಯ್ದ ಜಿಲ್ಲೆ ಬಯಲಾಟಗಳ ಕುರಿತು ಕನಿಷ್ಠ 100 ರಿಂದ ಗರಿಷ್ಠ 150 ಪುಟಗಳ ಎ4 ಗಾತ್ರದ ಪುಸ್ತಕವನ್ನು ಮೂರು ತಿಂಗಳೊಳಗೆ ರಚಿಸಬೇಕು. ಲೇಖಕರಿಗೆ 10,000 ಗೌರವ ಧನ 50 ಮುದ್ರಿತ ಪುಸ್ತಕ ನೀಡಲಾಗುವುದು.

ಪುಸ್ತಕದಲ್ಲಿ ಜಿಲ್ಲೆಯ ಭೌಗೋಳಿಕ, ಸಾಂಸ್ಕೃತಿಕ ಹಿನ್ನಲೆ, ಬಯಲಾಟ ಪ್ರಕಾರಗಳು, ಹಸ್ತಪ್ರತಿಗಳ ಶೋಧನೆ, ಕಲಾವಿದರು, ಜಾತ್ರೆ-ಹಬ್ಬಗಳ ಕಾಲದ ಪ್ರದರ್ಶನಗಳು ಸೇರಿದಂತೆ ವಿವಿಧ ಅಂಶ ಒಳಗೊಂಡಿರಬೇಕು. ಮಾಹಿತಿಗೆ 08354-235070, 8970678147 ಸಂಪರ್ಕಿಸಬಹುದು ಎಂದು ಅಕಾಡೆಮಿ ರಿಜಿಸ್ಟ್ರಾರ್ ಕಸ್ತೂರಿ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ; ಸ್ತ್ರೀರೋಗ ತಜ್ಞ ಡಾ.ಕಾವೇರಿ

# ವಿಶ್ವ ಸ್ತನ್ಯಪಾನ ಸಪ್ತಾಹ ಆಚರಣೆ

• ಉದಯವಾಹಿನಿ, ಸಿಂಧನೂರು

ತಾಯಿ ಮೊದಲು ದೇವರ ಎಂಬುದು ನೂರಕ್ಕೆ ನೂರರಷ್ಟು ಸತ್ಯ. ಅದರಂತೆ ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ ಎಂದು ಹೇಳಿದರು. ನಗರದ ತಾಲ್ಲೂಕ ಆರೋಗ್ಯ ಅಧಿಕಾರಿಗಳ ಕಛೇರಿಯಲ್ಲಿ ತಾಲ್ಲೂಕ ಸಾರ್ವಜನಿಕ ಆಸ್ಪತ್ರೆ ಸಿಂಧನೂರು ಮತ್ತು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಸಿಂಧನೂರು ಇವರ ಸಹಯೋಗದಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಆಚರಣೆ. ನಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಕಾವೇರಿ ಸ್ತ್ರೀರೋಗ ತಜ್ಞರು ತಾಯಿಯೇ ಮೊದಲು ದೇವರು ಎಂಬುದು ಎಷ್ಟು ಸತ್ಯವೋ ಅಷ್ಟೇ ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ ಎಂಬುವುದು ಅಷ್ಟೇ ಸತ್ಯ ಎಂದು ತಿಳಿಸುತ್ತಾ ವಿಶ್ವ ಸ್ತನ್ಯಪಾನ ಸ್ವಪ್ತಾಹವನ್ನು ಪ್ರತಿ ವರ್ಷ, ಪ್ರಪಂಚದಾದ್ಯಂತ ಜನರು ಸ್ತನ್ಯಪಾನದ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಸ್ತನ್ಯಪಾನ ಮಾಡುವ ತಾಯಂದಿರನ್ನು ಬೆಂಬಲಿಸಲು ಕಾರ್ಯಕ್ರಮಗಳು, ಚಟುವಟಿಕೆಗಳನ್ನು ಮಾಡಿ ಆಚರಿಸುತ್ತಾರೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಗೀತಾ ಹಿರೇಮಠ ಅವರು ಮಾತನಾಡಿ. 2025ನೆಯ ಘೋಷವಾಕ್ಯ ಸ್ತನ್ಯಪಾನದಲ್ಲಿ ಹೂಡಿಕೆ ಮಾಡಿ, ಭವಿಷ್ಯದಲ್ಲಿ ಹೂಡಿಕೆ ಮಾಡಿ ಎಂಬ ವಿಷಯದಲ್ಲಿ ತಿಳಿಸುತ್ತಾ ವಿಶ್ವ ಸ್ತನ್ಯಪಾನ ಸಪ್ತಾಹವನ್ನು ಪ್ರತಿ ವರ್ಷ ಆಗಸ್ಟ್ ಮೊದಲ ವಾರದಲ್ಲಿ ಆಚರಿಸಲಾಗುತ್ತದೆ, ವಿಶ್ವ ಸ್ತನ್ಯಪಾನ ವಾರವು ಮಹಿಳೆಯರು ಮತ್ತು ಶಿಶುಗಳಿಗೆ ತಮ್ಮ ಸ್ತನ್ಯಪಾನ ಪ್ರಯಾಣದ ಮೂಲಕ ಆರೋಗ್ಯ ವ್ಯವಸ್ಥೆಯಿಂದ ಅಗತ್ಯವಿರುವ ನಿರಂತರ ಬೆಂಬಲದ ಮೇಲೆ ನಿರ್ದಿಷ್ಟ ಬೆಳಕು ಚೆಲ್ಲುತ್ತದೆ. ಇದರರ್ಥ ಪ್ರತಿಯೊಬ್ಬ ತಾಯಿಯೂ ತಾನು ಬಯಸುವವರೆಗೆ ಮಗುವಿಗೆ ಹಾಲುಣಿಸಲು ಅಗತ್ಯವಿರುವ ಬೆಂಬಲ, ಮಾಹಿತಿಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳುವುದು. ಕೌಶಲ್ಯಪೂರ್ಣ ಹಾಲುಣಿಸುವ ಸಮಾಲೋಚನೆಯಲ್ಲಿ ಹೂಡಿಕೆ ಮಾಡುವುದು, ಎದೆಹಾಲು ಬದಲಿಗಳ ಅಂತರರಾಷ್ಟ್ರೀಯ ಮಾರುಕಟ್ಟೆ ಸಂಹಿತೆಯನ್ನು ಜಾರಿಗೊಳಿಸುವುದು ಮತ್ತು ಮನೆಯಲ್ಲಿ, ಆರೋಗ್ಯ ರಕ್ಷಣೆಯಲ್ಲಿ ಮತ್ತು ಕೆಲಸದಲ್ಲಿ ಮಹಿಳೆಯರಿಗೆ ಬೆಂಬಲ, ಸಬಲೀಕರಣ ನೀಡುವ ವಾತಾವರಣವನ್ನು ಸೃಷ್ಟಿಸುವುದು ಆಗಿದೆ ಎಂದು ತಿಳಿಸಿದರು. ಸನ್ ರೈಸ್ ಸ್ಕೊಲ್ ಆಫ್ ನರ್ಸಿಂಗ್ ನ ಪ್ರಾಚಾರ್ಯ ಲಾಜರ್ ಸಿರಿಲ್ ಮಾತನಾಡಿ ಕಾಂಗರು ಮದರ್ ಆರೈಕೆ ಬಗ್ಗೆ ತಿಳಿಸುತ್ತಾ ಕಡಿಮೆ ತೂಕದ ಮಗುವಿನ ನಿರ್ವಹಣೆ ಮತ್ತು ವಿಶ್ವಾಸನ್ಯಪನ್ನ ಸಪ್ತಾಹದ ಮಹತ್ವವನ್ನು ತಿಳಿಸಿದರು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ನ ವಿದ್ಯಾರ್ಥಿಗಳು ಕಾಂಗರು ಮದರ್ ಆರೈಕೆ ಪ್ರಾಥಿಕ್ಷವನ್ನು ಪ್ರದರ್ಶನ ಮಾಡಿದರು.

ಕಾರ್ಯಕ್ರಮದಲ್ಲಿ ಕಾರ್ಯಕ್ರಮದಲ್ಲಿ ಚಿಕ್ಕ ಮಕ್ಕಳ ತಜ್ಞರಾದ ಡಾಕ್ಟರ್ ಶೃತಿ ಸಂಗನಗೌಡ ಹಿರಿಯ ಆರೋಗ್ಯ ಸಹಾಯಕರು ಹಿರಿಯ ಶುಶ್ರೂಷಕ ಅಧಿಕಾರಿಗಳಾದ ಶ್ರೀಮತಿ ಪುಷ್ಪಾರಾಣಿ ಗುರು ಶಾಂತಮ್ಮ ಹೆರಿಗೆ ವಿಭಾಗದ ಶುಶ್ರೂಷಕ ಅಧಿಕಾರಿಯಾದ ನಿರ್ಮಲ ಎ ಆರ್ ಸನ್ ರೈಸ್ ನರ್ಸಿಂಗ್ ಕಾಲೇಜಿನ ಕಾರ್ಯದರ್ಶಿಗಳಾದ ಇರ್ಷಾದ್ ಸನ್ ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಉಪನ್ಯಾಸಕರಾದ ವೀರೇಶ್ ಸಾರ್ವಜನಿಕರು ಉಪಸ್ತರಿದ್ದರು.



ಉದಯವಾಹಿನಿ ಚಿತ್ರ

**ತಾಯಿಯೇ ಮೊದಲು ದೇವರು**

> ಶಿಶುಗಳಿಗೆ ಜೀವನದ ಮೊದಲ 6 ತಿಂಗಳುಗಳವರೆಗೆ ಎದೆಹಾಲು ಮಾತ್ರ ನೀಡಬೇಕು ಎಂದು ವಿಶ್ವ ಆರೋಗ್ಯ ಸಂಸ್ಥೆ ಶಿಫಾರಸು ಮಾಡುತ್ತದೆ. 3 ಇದರರ್ಥ ಅವರು ಎದೆ ಹಾಲು ಮಾತ್ರ ಪಡೆಯಬೇಕು ಮತ್ತು ಬೇರೆ ಯಾವುದೇ ಆಹಾರ ಅಥವಾ ಪಾನೀಯವನ್ನು ಪಡೆಯಬಾರದು. ಸ್ತನ್ಯಪಾನವು ಶಿಶುಗಳಿಗೆ ಅಗತ್ಯವಾದ ಪೋಷಕಾಂಶಗಳನ್ನು ಒದಗಿಸುತ್ತದೆ ಮತ್ತು ಸೋಂಕುಗಳಿಂದ ಅವರನ್ನು ರಕ್ಷಿಸಲು ಸಹಾಯ ಮಾಡುತ್ತದೆ. 4 ಇದು ತಾಯಿ ಮತ್ತು ಮಗುವಿನ ನಡುವಿನ ಬಾಂಧವ್ಯವನ್ನು ಬಲಪಡಿಸಲು ಸಹಾಯ ಮಾಡುತ್ತದೆ ಎಂದು ತಿಳಿಸಿದರು.

# ರಷ್ಯಾದಿಂದ ಭಾರತ ತೈಲ ಖರೀದಿ ನಿಲ್ಲಿಸಿದೆ: ಇದು ಉತ್ತಮ ಕ್ರಮ ಎಂದ ಟ್ರಂಪ್



**ಅಮೆರಿಕ:** ಭಾರತ, ರಷ್ಯಾ ಆರ್ಥಿಕತೆಯನ್ನು ಟೀಕಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇದರ ಬೆನ್ನಲ್ಲೇ ಈಗ ಮತ್ತೆ ಹೊಸ ಹೇಳಿಕೆಯೊಂದನ್ನು ನೀಡಿದ್ದು, ಭಾರತವು ರಷ್ಯಾದೊಂದಿಗೆ ತೈಲ ಖರೀದಿ ನಿಲ್ಲಿಸುತ್ತಿರುವ ಬಗ್ಗೆ ಕೇಳಲ್ಪಟ್ಟೆ, ಇದು ಉತ್ತಮ ನಡೆ ಎಂದಿದ್ದಾರೆ. ಆದರೆ ಭಾರತ ಅಧಿಕೃತವಾಗಿ ತೈಲ ಖರೀದಿ ನಿಲ್ಲಿಸುತ್ತಿರುವ ಬಗ್ಗೆ ಯಾವ ಹೇಳಿಕೆಯನ್ನೂ ಬಿಡುಗಡೆ ಮಾಡಿಲ್ಲ. ಶನಿವಾರ ಎಎನ್ಐ ಮಾಧ್ಯಮದ ಜೊತೆ ಮಾತನಾಡಿದ ಟ್ರಂಪ್, ಇನ್ನು ಮುಂದೆ ಭಾರತವು ರಷ್ಯಾದಿಂದ ತೈಲ ಖರೀದಿ ಮಾಡುವುದಿಲ್ಲ ಎಂದು ನಾನು ಕೇಳಿದ್ದೇನೆ, ಆದರೆ ಇದು ಸತ್ಯವೋ ಇಲ್ಲವೋ ಗೊತ್ತಿಲ್ಲ, ಆದರೆ ಇದು ಒಳ್ಳೆಯ ಹೆಜ್ಜೆ ಮುಂದೇನಾಗುತ್ತದೆ ನೋಡೋಣ ಎಂದು ಟ್ರಂಪ್ ಹೇಳಿದ್ದಾರೆ. ರಷ್ಯಾ ಹಾಗೂ ಭಾರತದ ಆರ್ಥಿಕತೆಯು ಸತ್ತ ಆರ್ಥಿಕತೆ ಎಂದು ವಿವಾದಾತ್ಮಕ ಹೇಳಿಕೆ ಕೊಟ್ಟ ಟ್ರಂಪ್, ರಷ್ಯಾದೊಂದಿಗೆ ತೈಲ ವ್ಯಾಪಾರ ಮಾಡುತ್ತಿರುವುದಕ್ಕೆ, ರಕ್ಷಣಾ ಒಪ್ಪಂದಗಳನ್ನು ಮಾಡಿಕೊಂಡಿರುವ ಹಿನ್ನೆಲೆ, ಭಾರತದ ಸರಕುಗಳಿಗೆ ಅಮೆರಿಕದಲ್ಲಿ 25% ಪ್ರತಿಸುಂಕ ತೆರಿಗೆಯನ್ನೂ ಘೋಷಿಸಿದರು. ಇದೀಗ ಮತ್ತೆ ವರಸೆ ಬದಲಿಸಿದ ಟ್ರಂಪ್ ಭಾರತದ್ದು ಉತ್ತಮ ನಡೆ ಎಂದಿದ್ದಾರೆ.

ಅಮೆರಿಕದ ವಿದೇಶಾಂಗ ಇಲಾಖೆ ರಷ್ಯಾ ಜೊತೆ ಭಾರತವು ತೈಲ ಹಾಗೂ ರಕ್ಷಣಾ ಸಂಕರಣೆಗಳ ಖರೀದಿ ಬಗ್ಗೆ ಟ್ರಂಪ್ ಕಳೆದೆರಡು ದಿನದಿಂದ ಕಿಡಿಕಾರಿದ್ದಾರೆ. ಭಾರತ ಹಾಗೂ ರಷ್ಯಾದ್ದು ಸತ್ತ ಆರ್ಥಿಕತೆ ಎಂದೂ ಟೀಕೆ ಮಾಡಿದ್ದರು. ಅತಿ ಹೆಚ್ಚು ತೆರಿಗೆ ಹೊಂದಿರುವ ಭಾರತದ ಜೊತೆ ನಾವು ಕಡಿಮೆ ವ್ಯಾಪಾರ ಮಾಡುತ್ತೇವೆ ಎಂದಿದ್ದರು. ನಮ್ಮೆಲ್ಲಾ ದ್ವಿಪಕ್ಷೀಯ ಸಂಬಂಧಗಳು ತಮ್ಮದೇ ಆದ ಅರ್ಹತೆಗಳನ್ನು ಹೊಂದಿವೆ.


### ಟ್ರಂಪ್‌ಗೆ ಭಾರತ ತಿರುಗೇಟು

**ಭಾರತ ಹಾಗೂ ರಷ್ಯಾ ನಡುವೆ ಉತ್ತಮ ವ್ಯಾಪಾರ ಸಂಬಂಧವಿದೆ ಎಂದು ಹೇಳುವ ಮೂಲಕ ಟ್ರಂಪ್ ಆಕ್ರಮಣವನ್ನು ತಿರಸ್ಕರಿಸಿದೆ. ಆದರೆ ಭಾರತವು ಟ್ರಂಪ್ ಹೊಸ ಹೇಳಿಕೆ ಬಗ್ಗೆ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ. ಆದರೆ ವಿದೇಶಿ ವ್ಯವಹಾರಗಳ ಸಚಿವಾಲಯದ ವಕ್ತಾರರು, ವಿವಿಧ ದೇಶಗಳೊಂದಿಗಿನ ನಮ್ಮ ದ್ವಿಪಕ್ಷೀಯ ಸಂಬಂಧಗಳನ್ನು ಬೇರೆ ದೇಶದ ದೃಷ್ಟಿಕೋನದಿಂದ ನೋಡಬಾರದು. ಭಾರತ ಮತ್ತು ರಷ್ಯಾ ನಡುವೆ ಸ್ಥಿರವಾದ ಮತ್ತು ಕಾಲ ಪರೀಕ್ಷಿತ ಪಾಲುದಾರಿಕೆ ಇದೆ ಎಂದು ಹೇಳಿದ್ದಾರೆ.**

ಭಾರತ ಮತ್ತು ರಷ್ಯಾ ನಡುವಿನ ಸಂಬಂಧದ ಬಗ್ಗೆ ಟ್ರಂಪ್ ಈ ಹಿಂದೆ ಟೀಕೆ ಮಾಡಿದ್ದರು. ಭಾರತವು ತನ್ನದೇ ಆದ ಆರ್ಥಿಕ ಮತ್ತು ಕಾರ್ಯತಂತ್ರದ ಹಿತಾಸಕ್ತಿಗಳನ್ನು ಹೊಂದಿದೆ ಎಂದು ಭಾರತವು ಸ್ಪಷ್ಟಪಡಿಸಿದೆ.

ರಷ್ಯಾದಿಂದ ತೈಲವನ್ನು ಖರೀದಿಸುವುದನ್ನು ನಿಲ್ಲಿಸುವ ಬಗ್ಗೆ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ, ಟ್ರಂಪ್ ಅವರ ಹೇಳಿಕೆಯು ಅಚ್ಚರಿ ಮೂಡಿಸಿದೆ. ಭಾರತವು ರಷ್ಯಾದೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದೆ. ಉಕ್ರೇನ್ ಯುದ್ಧದ ನಂತರವೂ ರಷ್ಯಾದಿಂದ ತೈಲವನ್ನು ಖರೀದಿಸುತ್ತಿದೆ. ಟ್ರಂಪ್ ಅವರ ಹೇಳಿಕೆಯು ರಾಜತಾಂತ್ರಿಕವಾಗಿ ಮಹತ್ವದ್ದಾಗಿದೆ. ಏಕೆಂದರೆ ಭಾರತವು ಪ್ರಮುಖ ಆರ್ಥಿಕ ಶಕ್ತಿಯಾಗಿದೆ. ಭಾರತದ ನಿರ್ಧಾರವು ಜಾಗತಿಕ ತೈಲ ಮಾರುಕಟ್ಟೆ ಮತ್ತು ರಷ್ಯಾ ಮೇಲೆ ಪರಿಣಾಮ ಬೀರಬಹುದಾಗಿದೆ.

# ವಿಶ್ವ ಚೆಸ್ ಚಾಂಪಿಯನ್ ದಿವ್ಯಾಗೆ 3 ಕೋಟಿ ನಗದು ಬಹುಮಾನ ನೀಡಿದ ಮ. ಸಿಎಂ




**ನಾಗ್ಪುರ:** ಫಿಡೆ ಚೆಸ್ ಮಹಿಳಾ ವಿಶ್ವಕಪ್ ಕಿರೀಟ ಧರಿಸಿದ ಭಾರತದ ಯುವ ತಾರೆ ದಿವ್ಯಾ ದೇಶಮುಖ್ ಅವರನ್ನು ಸನ್ಮಾನಿಸಿದ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡಣವೀಸ್, 3 ಕೋಟಿ ನಗದು ಬಹುಮಾನವನ್ನು ನೀಡಿದ್ದಾರೆ. ಜುಲೈ 28 ರಂದು ಜಾರ್ಜಿಯಾದ ಬಟುಮಿಯಲ್ಲಿ ನಡೆದ ಫೈನಲ್‌ನಲ್ಲಿ ಸ್ವದೇಶದ ಅನುಭವಿ ಕೋನೇರು ಹಂಪಿ ಅವರನ್ನು ಸೋಲಿಸಿ ಫಿಡೆ ಚೆಸ್ ಮಹಿಳಾ ವಿಶ್ವಕಪ್ ಕಿರೀಟ ಧರಿಸಿದ ದಿವ್ಯಾ ಅವರು ಜೊತೆಯಲ್ಲೇ 'ಗ್ರಾಂಡ್‌ಮಾಸ್ಟರ್' ಬಿರುದಿಗೂ ಪಾತ್ರರಾಗಿದ್ದರು. ದಿವ್ಯಾ ನಾಗುರದ ಮೂಲದವರಾಗಿದ್ದು, ಸಿಎಂ ಫಡಣವೀಸ್ ಕೂಡ ಇದೇ ಊರಿನವರು. ಕಾರ್ಯಕ್ರಮದಲ್ಲಿ ಮಾತನಾಡಿದ ದಿವ್ಯಾ, ಸನ್ಮಾನಿಸಿದ್ದಕ್ಕಾಗಿ ಸಿಎಂ ಹಾಗೂ ನಾಗುರದ ಜನರಿಗೆ ಧನ್ಯವಾದ ಅರ್ಪಿಸಿದರು. ಜೀವನದಲ್ಲಿ ಅಪರೂಪಕ್ಕೆ ಇಂತಹ ಕ್ಷಣಗಳನ್ನು ಆನಂದಿಸಲು ಅವಕಾಶ ಸಿಗುತ್ತದೆ. ಇದು ನನಗೆ ತುಂಬಾ ವಿಶೇಷವಾದ ಕ್ಷಣ. ನನಗೆ ತುಂಬಾ ಸಂತೋಷವಾಗುತ್ತಿದೆ. ಮಹಾರಾಷ್ಟ್ರ ಸರ್ಕಾರ ಮತ್ತು ಮಹಾರಾಷ್ಟ್ರ ಚೆಸ್ ಅಸೋಸಿಯೇಷನ್ ನೀಡಿದ ಬೆಂಬಲಕ್ಕೆ ಧನ್ಯವಾದ ಎಂದರು.

ಸಿಎಂ ಫಡಣವೀಸ್ ಮಾತನಾಡಿ, ಸ್ಥಳೀಯ ಹುಡುಗಿಯೊಬ್ಬರು ವಿಶ್ವ ಮಟ್ಟದಲ್ಲಿ ದೇಶ ಹೆಮ್ಮೆಪಡುವಂತೆ ಸಾಧನೆ ಮಾಡಿದ್ದಾರೆ. ಈ ಬಗ್ಗೆ ಒಬ್ಬ ಭಾರತೀಯನಾಗಿ, ಮಹಾರಾಷ್ಟ್ರದ ಮುಖ್ಯಮಂತ್ರಿಯಾಗಿ ಮತ್ತು ನಾಗುರದ ನಿವಾಸಿಯಾಗಿ ನಾನು ಹೆಮ್ಮೆಪಡುತ್ತೇನೆ ಎಂದು ಹೇಳಿದರು.

## ಬಿಜೆಪಿಗೆ ಉಜ್ವಲ್ ನಿಕಮ್, ಹರ್ಷವರ್ಧನ್ ಶ್ರಿಂಗ್ಲಾ, ಸಿ ಸದಾನಂದನ್ ಮಾಸ್ಟರ್ ಬೆಂಬಲ

# ಆಡಳಿತಾರೂಢ ಪಕ್ಷಕ್ಕೆ ಮಹತ್ವದ ಬಲ

**ಹೊಸದಿಲ್ಲಿ:** ರಾಜ್ಯಸಭೆಯಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯರ ಸಂಖ್ಯೆ ಮತ್ತೊಮ್ಮೆ 100 ಸದಸ್ಯರ ಗಡಿ ದಾಟಿದೆ. ಇತ್ತೀಚೆಗೆ ನಾಮನಿರ್ದೇಶನಗೊಂಡಿದ್ದ ಮೂವರು ಸದಸ್ಯರು ಈ ವಾರ ಪಕ್ಷಕ್ಕೆ ಸೇರ್ಪಡೆಯಾಗಿದ್ದರು. ಇದಾದ ನಂತರ 2022ರ ಏಪ್ರಿಲ್ ಬಳಿಕ ಇದೇ ಮೊದಲ ಬಾರಿಗೆ ಕಮಲ ಪಕ್ಷ ಈ ಸಾಧನೆ ಮಾಡಿದೆ. ಸೆಪ್ಟೆಂಬರ್ 9ರಂದು ಉಪರಾಷ್ಟ್ರಪತಿ ಚುನಾವಣೆ ನಡೆಯಲಿದ್ದು, ಇದಕ್ಕೂ ಮುನ್ನ ಆಡಳಿತಾರೂಢ ಪಕ್ಷಕ್ಕೆ ಇದು ಮಹತ್ವದ ಬಲ ನೀಡಿದೆ.

ಇತ್ತೀಚೆಗೆ ಪ್ರಖ್ಯಾತ ವಕೀಲ ಉಜ್ವಲ್ ನಿಕಮ್, ಮಾಜಿ ವಿದೇಶಾಂಗ ಕಾರ್ಯದರ್ಶಿ ಹರ್ಷವರ್ಧನ್ ಶ್ರಿಂಗ್ಲಾ, ಕೇರಳ ಮೂಲದ ಸಾಮಾಜಿಕ ಕಾರ್ಯಕರ್ತ ಸಿ. ಸದಾನಂದನ್ ಮಾಸ್ಟರ್ ಅವರನ್ನು ರಾಷ್ಟ್ರಪತಿಗಳು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿದ್ದರು. ಇವರು ಮೂವರೂ ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಗೊಂಡಿದ್ದು, ಇದರೊಂದಿಗೆ ಮೇಲ್ಮನೆಯಲ್ಲಿ ಪಕ್ಷದ ಸಂಖ್ಯಾಬಲ 102ಕ್ಕೆ ಏರಿಕೆಯಾಗಿದೆ.

**ಯಾರು ಈ ಹೊಸ ಸದಸ್ಯರು?:** 26, 11 ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ, ಅಜ್ಮಲ್ ಕಸಬ್‌ಗೆ ಶಿಕ್ಷೆ ಆಗುವಂತೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದವರು 72 ವರ್ಷದ ಉಜ್ವಲ್ ನಿಕಮ್. 2016ರಲ್ಲಿ ಪದ್ಮಶ್ರೀ ಪುರಸ್ಕೃತರಾದ ಇವರು, 2024ರ ಲೋಕಸಭಾ ಚುನಾವಣೆಯಲ್ಲಿ ಮುಂಬೈ ಉತ್ತರ ಕೇಂದ್ರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಆದರೆ ಇದರಲ್ಲಿ ಅವರಿಗೆ ಸೋಲಾಗಿತ್ತು. 2020 ರಿಂದ 2022ರವರೆಗೆ ಭಾರತದ ವಿದೇಶಾಂಗ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದವರು ಹರ್ಷವರ್ಧನ್ ಶ್ರಿಂಗ್ಲಾ.



### ಎನ್‌ಡಿಎ ಬಲ ಎಷ್ಟಿದೆ?

**ಇವರು ಮೂವರು ಬಿಜೆಪಿಗೆ ಸೇರುವುದರೊಂದಿಗೆ ಬಿಜೆಪಿ ನೇತೃತ್ವದ ಎನ್‌ಡಿಎ ಬಲ 240 ಸದಸ್ಯ ಬಲದ ರಾಜ್ಯಸಭೆಯಲ್ಲಿ 134ಕ್ಕೆ ಏರಿಕೆಯಾಗಿದೆ. ಇದರಲ್ಲಿ ಆಡಳಿತರೂಢ ಒಕ್ಕೂಟದೊಂದಿಗೆ ಗುರುತಿಸಿಕೊಂಡಿರುವ ಐವರು ನಾಮನಿರ್ದೇಶಿತ ಸಂಸದರೂ ಸೇರಿದ್ದಾರೆ. ಸದ್ಯ ಬಹುಮತಕ್ಕೆ 123 ಸದಸ್ಯರ ಬೆಂಬಲ ಅಗತ್ಯವಿದ್ದು, ಎನ್‌ಡಿಎ ಮೈತ್ರಿಕೂಟ ಇದಕ್ಕೂ ಹೆಚ್ಚಿನ ಸದಸ್ಯಬಲ ಹೊಂದಿದೆ.**

2023ರ ಜಿ20 ಶೃಂಗಸಭೆಯ ಮುಖ್ಯ ಸಂಯೋಜಕರಾಗಿದ್ದ ಇವರು, ಅನುಭವಿ ರಾಜತಾಂತ್ರಿಕರೂ ಹೌದು. ಅಮೆರಿಕಕ್ಕೆ ಭಾರತದ ರಾಯಭಾರಿಯಾಗಿಯೂ ಸೇವೆ ಸಲ್ಲಿಸಿದ್ದರು. ಸಿ ಸದಾನಂದನ್ ಮಾಸ್ಟರ್ 1994ರಲ್ಲಿ ನಡೆದ ರಾಜಕೀಯ ದಾಳಿಯೊಂದರಲ್ಲಿ ತಮ್ಮ ಎರಡೂ ಕಾಲುಗಳನ್ನು ಕಳೆದುಕೊಂಡವರು. ಕೇರಳದ ಸಾಮಾಜಿಕ ಕಾರ್ಯಕರ್ತ, ಶಿಕ್ಷಣತಜ್ಞರಾಗಿರುವ ಇವರು, ಬಿಜೆಪಿಗೆ ಸೇರಿದ ಕಾರಣಕ್ಕೆ ಸಿಪಿಎಂ ಕಾರ್ಯಕರ್ತರು ಈ ದಾಳಿ ನಡೆಸಿದ್ದರು ಎಂದು ಆರೋಪಿಸಲಾಗಿದೆ. ಇವರ ಜೊತೆಗೆ ಇತಿಹಾಸಕಾರರಾದ ಮೀನಾಕ್ಷಿ ಜೈನ್ ಅವರನ್ನೂ ರಾಜ್ಯಸಭೆಗೆ ನಾಮನಿರ್ದೇಶನ ಮಾಡಲಾಗಿತ್ತು. ಆದರೆ, ಇವರು ಯಾವುದೇ ರಾಜಕೀಯ ಪಕ್ಷವನ್ನು ಸೇರಿಲ್ಲ.

### ರಾಜ್ಯಸಭೆ ಇತಿಹಾಸದಲ್ಲೇ ಇದು ಕೇವಲ 3ನೇ ಬಾರಿ

**ಭಾರತದ ಸಂಸದೀಯ ಇತಿಹಾಸದಲ್ಲಿ ಒಂದು ರಾಜಕೀಯ ಪಕ್ಷವು ಮೇಲ್ಮನೆಯಲ್ಲಿ 100 ಸದಸ್ಯರ ಸಂಖ್ಯೆಯನ್ನು ಮೀರಿರುವುದು ಇದು ಕೇವಲ ಮೂರನೇ ಬಾರಿ. ಈ ಹಿಂದೆ 1988 ಮತ್ತು 1990ರ ನಡುವೆ ಕಾಂಗ್ರೆಸ್ ಈ ಸಾಧನೆಯನ್ನು ಮಾಡಿತ್ತು. ಬಿಜೆಪಿ ಮೇ 2022ರಲ್ಲಿ 13 ರಾಜ್ಯಸಭಾ ಸ್ಥಾನಗಳಿಗೆ ನಡೆದ ಚುನಾವಣೆಯ ನಂತರ ತನ್ನ ಸಂಖ್ಯಾಬಲವನ್ನು 97 ರಿಂದ 101ಕ್ಕೆ ಹೆಚ್ಚಿಸಿಕೊಂಡು ಮೊದಲ ಬಾರಿಗೆ ಈ ಮೈಲಿಗಲ್ಲನ್ನು ತಲುಪಿತ್ತು. ಆದರೆ, ನಂತರದ ತಿಂಗಳುಗಳಲ್ಲಿ ಈ ಸಂಖ್ಯೆ 99ಕ್ಕೆ ಕುಸಿತ ಕಂಡಿತ್ತು. ಪ್ರಸ್ತುತ, ರಾಜ್ಯಸಭೆಯಲ್ಲಿ 240 ಸದಸ್ಯರಿದ್ದು, ಐದು ಸ್ಥಾನಗಳು ಖಾಲಿ ಇವೆ. ಈ ಸ್ಥಾನಗಳಿಗೆ ಚುನಾವಣೆ ನಡೆದಲ್ಲಿ ಬಿಜೆಪಿ ಸದಸ್ಯರ ಸಂಖ್ಯೆ ಇನ್ನಷ್ಟು ಹೆಚ್ಚುವ ಸಾಧ್ಯತೆ ಇದೆ.**

# ದಿ ಕೇರಳ ಸ್ಟೋರಿ ಗೆ ರಾಷ್ಟ್ರೀಯ ಪ್ರಶಸ್ತಿ: ಆರ್‌ಎಸ್‌ಎಸ್ ಅಜೆಂಡಾ ಎಂದ ಕೇರಳ ಸಚಿವ

**ತಿರುವನಂತರಪುರ:** ದಿ ಕೇರಳ ಸ್ಟೋರಿ ಚಿತ್ರಕ್ಕೆ ರಾಷ್ಟ್ರೀಯ ಪ್ರಶಸ್ತಿ ಲಭಿಸಿದ್ದರ ಹಿಂದೆ ಸಂಘ ಪರಿವಾರದ ರಾಜಯಕೀಯ ಅಜೆಂಡಾ ಕೆಲಸ ಮಾಡಿದೆ ಎಂದು ಕೇರಳದ ಸಂಸ್ಕೃತಿ ಸಚಿವ ಸಾಜಿ ಚೆರಿಯನ್ ಶನಿವಾರ ಆರೋಪಿಸಿದ್ದಾರೆ. 2023ನೇ ಸಾಲಿನ ರಾಷ್ಟ್ರೀಯ ಸಿನಿಮಾ ಪ್ರಶಸ್ತಿ ಶುಕ್ರವಾರ ಘೋಷಣೆಯಾಗಿದೆ. ಇದನ್ನು ತೀರ್ಪುಗಾರರ ಮುಖ್ಯಸ್ಥರೂ ಆದ ಚಿತ್ರ ನಿರ್ದೇಶಕ ಅಶುತೋಷ್ ಗೋವಾರಿಕರ್ ಇದನ್ನು ಪ್ರಕಟಿಸಿದರು.

ದಿ ಕೇರಳ ಸ್ಟೋರಿ ಚಿತ್ರದ ನಿರ್ದೇಶಕ ಸುದಿಪ್ತೊ ಸೇನ್ ಅವರಿಗೆ ಅತ್ಯುತ್ತಮ ನಿರ್ದೇಶಕ ಪ್ರಶಸ್ತಿ ಮತ್ತು ಇದೇ ಚಿತ್ರಕ್ಕೆ ಅತ್ಯುತ್ತಮ ಛಾಯಾಗ್ರಹಣ ಪ್ರಶಸ್ತಿ ಲಭಿಸಿದೆ. ಇಸ್ಲಾಮಿಕ್ ಸ್ಟೇಟ್ ಭಯೋತ್ಪಾದಕ ಸಂಘಟನೆಯು ಬಲವಂತದಿಂದ ಅನ್ಯ ಧರ್ಮದ ಮಹಿಳೆಯರನ್ನು ಮತಾಂತರ ಮಾಡಿ ಅವರನ್ನು ತಮ್ಮ ಕುಕೃತ್ಯಕ್ಕೆ ಬಳಸಿಕೊಳ್ಳುವ ಕಥಾವಸ್ತುವನ್ನು ಈ ಚಿತ್ರ ಹೊಂದಿತ್ತು. ಇದು ತೀವ್ರ ವಿವಾದ ಸೃಷ್ಟಿಸಿತ್ತು. ಈ ಚಿತ್ರವು ಸಮಾಜದಲ್ಲಿ ಒಡಕು ಹಾಗೂ ದ್ವೇಷ ಸೃಷ್ಟಿಸುವ ಕೃತ್ಯವಾಗಿದ್ದು, ಕೇರಳಕ್ಕೆ ಮಾಡಿದ ಅವಮಾನವಾಗಿದೆ. ಯಾವುದೇ ಮಾನದಂಡಗಳನ್ನು ಅನುಸರಿಸದೇ ಈ ಚಿತ್ರಕ್ಕೆ ರಾಷ್ಟ್ರ ಪ್ರಶಸ್ತಿ ಘೋಷಿಸಲಾಗಿದೆ. ಇದೇ ಸಂದರ್ಭದಲ್ಲಿ ನಮ್ಮ ಕಲಾವಿದರಾದ ಊರ್ವಶಿ ಮತ್ತು ವಿಜಯರಾಘವನ್ ಅವರಿಗೆ ಪ್ರಶಸ್ತಿ ಲಭಿಸಿರುವುದು ಹೆಮ್ಮೆಯ ವಿಷಯ ಎಂದು ಚೆರಿಯನ್ ಹೇಳಿದ್ದಾರೆ.




ಚಿತ್ರದಿಂದ ಸಮಾಜಕ್ಕೆ ಯಾವುದೇ ಸಂದೇಶವಿಲ್ಲ. ಆದರೆ ಕೆಲವು ವರ್ಗಗಳನ್ನು ಸಂತುಷ್ಟಗೊಳಿಸುವ ಉದ್ದೇಶದಿಂದ ಪ್ರಶಸ್ತಿ ನೀಡಲಾಗಿದೆ. ಸಂಘ ಪರಿವಾರವು ಇಂಥ ರಾಜಕೀಯದಿಂದ ದೇಶದ ಜನರಲ್ಲಿ ಭೀತಿ ಮೂಡಿಸುತ್ತಿದ್ದಾರೆ. ದೇಶದಲ್ಲಿ ಒಗ್ಗಟ್ಟು ಮೂಡಿಸಬೇಕಾದ ರಾಜಕೀಯ ಪಕ್ಷಗಳು ದೇಶವನ್ನೇ ಇಬ್ಭಾಗ ಮಾಡುತ್ತಿವೆ. ಅದಕ್ಕಾಗಿ ಇಂಥ ಸಣ್ಣ ಕೆಲಸಗಳಲ್ಲೂ ಅಜೆಂಡಾ ತೂರಿಸುವ ಕೆಲಸಗಳನ್ನು ಮಾಡುತ್ತಿದ್ದಾರೆ' ಎಂದು ಅವರು ಆರೋಪಿಸಿದ್ದಾರೆ.

ದಿ ಕೇರಳ ಸ್ಟೋರಿ ಚಿತ್ರಕ್ಕೆ ಪ್ರಶಸ್ತಿ ಘೋಷಿಸಿದ್ದಕ್ಕೆ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರೂ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಭಾರತೀಯ ಸಿನಿಮಾದ ಭವ್ಯ ಪರಂಪರೆಯನ್ನೇ ತೀರ್ಪುಗಾರ ಮಂಡಳಿ ನಾಶ ಮಾಡಿದೆ ಎಂದು ಕಿಡಿಯಾಡಿದ್ದಾರೆ. ವಿರೋಧ ಪಕ್ಷದ ನಾಯಕ ವಿ.ಡಿ. ಸತೀಶನ್ ಅವರೂ ಕೇಂದ್ರ ಸರ್ಕಾರದ ಈ ಕ್ರಮವನ್ನು ವಿರೋಧಿಸಿದ್ದಾರೆ.

# ಬಿಹಾರದಲ್ಲಿ ಕರಡು ಮತದಾರರ ಪಟ್ಟಿ ಬಿಡುಗಡೆ

**ನವದೆಹಲಿ:** ಒಂದು ತಿಂಗಳ ಕಾಲ ನಡೆದ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ನಂತರ, ಭಾರತೀಯ ಚುನಾವಣಾ ಆಯೋಗ ಬಿಹಾರದ ಕರಡು ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಸಾರ್ವಜನಿಕರಿಗೆ ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಒಂದು ತಿಂಗಳ ಕಾಲಾವಕಾಶವಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ, ಯಾವುದೇ ಹೆಸರನ್ನು ಕರಡು ಮತದಾರರ ಪಟ್ಟಿಯಿಂದ ನಿರ್ದಿಷ್ಟ ಕಾರಣವಿಲ್ಲದೆ ತೆಗೆದುಹಾಕಲಾಗುವುದಿಲ್ಲ ಎಂದು ಭರವಸೆ ನೀಡಿದೆ.

ಒಂದು ಹೇಳಿಕೆಯಲ್ಲಿ, ಇಸಿಐ ಕರಡು ಪಟ್ಟಿಯನ್ನು ಈಗಾಗಲೇ ಎಲ್ಲಾ ರಾಜಕೀಯ ಪಕ್ಷಗಳೊಂದಿಗೆ ಹಂಚಿಕೊಳ್ಳಲಾಗಿದೆ ಮತ್ತು ನಾಗರಿಕರು ತಮ್ಮ ಮತದಾರರ ಮಾಹಿತಿಯನ್ನು ಸಂಪೂರ್ಣವಾಗಿ ಪರಿಶೀಲಿಸುವಂತೆ ಒತ್ತಾಯಿಸಿದೆ, ಯಾವುದೇ ಹೆಸರನ್ನು ನಿರ್ದಿಷ್ಟ ಕಾರಣವಿಲ್ಲದೆ ಕರಡು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುವುದಿಲ್ಲ ಎಂದು ನಿರ್ದಿಷ್ಟಪಡಿಸಿದೆ ಎಂದು ಸ್ಪಷ್ಟಪಡಿಸಿದೆ. ಬಿಹಾರದಲ್ಲಿ ಇಂದು ಕರಡು ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ.

ಹಕ್ಕುಗಳು ಮತ್ತು ಆಕ್ಷೇಪಣೆಗಳಿಗೆ ಒಂದು ತಿಂಗಳ ಅವಧಿ ಪ್ರಾರಂಭವಾಗುತ್ತದೆ; ಕರಡು ಪಟ್ಟಿಯನ್ನು ರಾಜಕೀಯ ಪಕ್ಷಗಳೊಂದಿಗೆ ಹಂಚಿಕೊಳ್ಳಲಾಗಿದೆ. ಹೆಸರುಗಳನ್ನು ಸೇರಿಸಲು ಇನ್ನೂ ಒಂದು ತಿಂಗಳು ಇದೆ. ಮತದಾರರ ಸೇವೆಗಳ ಪೋರ್ಟಲ್. ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ, 243 ಚುನಾವಣಾ ನೋಂದಣಿ ಅಧಿಕಾರಿಗಳು ಆ ವಿಧಾನಸಭಾ ಕ್ಷೇತ್ರದ ಯಾವುದೇ ಮತದಾರರನ್ನು, ಬಿಹಾರದ ಯಾವುದೇ ಮಾನ್ಯತೆ ಪಡೆದ ರಾಜಕೀಯ ಪಕ್ಷವನ್ನು ಆಗಸ್ಟ್ 1 ರಿಂದ ಸೆಪ್ಟೆಂಬರ್ 1, 2025 ರವರೆಗೆ ಯಾವುದೇ ಕಾಣೆಯಾದ ಅರ್ಹ ಮತದಾರರ ಹೆಸರುಗಳನ್ನು ಸೇರಿಸಲು, ಯಾವುದೇ ಅನರ್ಹ ಮತದಾರರ ಹೆಸರುಗಳನ್ನು ತೆಗೆದುಹಾಕಲು ಅಥವಾ ಕರಡು ಮತದಾರರ ಪಟ್ಟಿಯಲ್ಲಿರುವ ಯಾವುದೇ ನಮೂದನ್ನು ಸರಿಪಡಿಸಲು ಮುಂದೆ ಬಂದು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆಹ್ವಾನಿಸುತ್ತಾರೆ ಎಂದು ಸಿಇಸಿ ತಿಳಿಸಿದೆ.



ಬಿಹಾರದಲ್ಲಿ 7.89 ಕೋಟಿ ನೋಂದಾಯಿತ ಮತದಾರರಲ್ಲಿ, 7.24 ಕೋಟಿಗೂ ಹೆಚ್ಚು ಮತದಾರರು ಜೂನ್ 24 ರಿಂದ ಜುಲೈ 25 ರವರೆಗೆ ನಡೆದ ವಿಶೇಷ ತೀವ್ರ ಪರಿಷ್ಕರಣೆ ಅಡಿಯಲ್ಲಿ ತಮ್ಮ ಎಣಿಕೆ ನಮೂನೆಗಳನ್ನು ಸಲ್ಲಿಸಿದ್ದಾರೆ ಎಂದು ಚುನಾವಣಾ ಆಯೋಗ ಭಾನುವಾರ ತಿಳಿಸಿದೆ, ಇದು ಶೇಕಡಾ 91.69 ರಷ್ಟು ಭಾಗವಹಿಸುವಿಕೆಯ ದರವನ್ನು ಪ್ರತಿಬಿಂಬಿಸುತ್ತದೆ. ಮುಂಬರುವ ವಿಧಾನಸಭಾ ಚುನಾವಣೆಗಳಿಗೆ ಮುಂಚಿತವಾಗಿ ಮತದಾರರ ಪಟ್ಟಿಯ ನಿಖರತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಎಸ್‌ಐಆರ್ ಅನ್ನು ರಾಜ್ಯಾದ್ಯಂತ ಬೃಹತ್ ಮತ್ತು ಯಶಸ್ವಿ ನಾಗರಿಕ ಭಾಗವಹಿಸುವಿಕೆಯ ಪ್ರಯತ್ನ ಎಂದು ಆಯೋಗವು ವಿವರಿಸಿದೆ.

**ನಿರ್ದಿಷ್ಟ ಕಾರಣವಿಲ್ಲದೆ ಯಾವುದೇ ಹೆಸರನ್ನು ಕರಡು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುವುದಿಲ್ಲ ಎಂದು ಆಯೋಗವು ಹೇಳಿಕೆಯಲ್ಲಿ ತಿಳಿಸಿದೆ. ಬಿಹಾರದ ಪ್ರಿಯ ಮತದಾರರೇ, ಆದೇಶಗಳ ಪ್ಯಾರಾಗ್ರಾಫ್ 7(4)ರ ಪ್ರಕಾರ (ಪುಟ 3), ಬಿಹಾರದ ಕರಡು ಮತದಾರರ ಪಟ್ಟಿಯನ್ನು ನಿನ್ನೆ ಪ್ರಕಟಿಸಲಾಗಿದೆ. ಬಿಹಾರದ ಎಲ್ಲಾ 38 ಜಿಲ್ಲಾ ಚುನಾವಣಾ ಅಧಿಕಾರಿಗಳು ಬಿಹಾರದ ಎಲ್ಲಾ 38 ಜಿಲ್ಲೆಗಳಲ್ಲಿರುವ ಎಲ್ಲಾ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳಿಗೆ ಭೌತಿಕ, ಡಿಜಿಟಲ್ ಪ್ರತಿಗಳನ್ನು ನೀಡಲಾಗುವುದು ಎಂದು ಒಂದು ಸಂದೇಶದಲ್ಲಿ ತಿಳಿಸಲಾಗಿದೆ.**

# 'ಆಟಂ ಬಾಂಬ್' ಇದ್ದರೆ ತಕ್ಷಣವೇ ಸ್ಫೋಟಿಸಲಿ ರಾಹುಲ್‌ಗೆ ರಾಜನಾಥ್ ಸಿಂಗ್ ಸವಾಲು

**ಪಟ್ನಾ:** ಆಡಳಿತಾರೂಢ ಬಿಜೆಪಿಯ ಮತಕಳ್ಳತನ ಕೃತ್ಯಕ್ಕೆ ಚುನಾವಣಾ ಆಯೋಗವು ನೆರವಾಗಿದೆ. ಈ ಆರೋಪವನ್ನು ಸಾಬೀತು ಪಡಿಸಲು ತಮ್ಮ ಬಳಿ 'ಆಟಂ ಬಾಂಬ್' ಇದೆ ಎಂದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶನಿವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಸಮಾರಂಭವೊಂದರಲ್ಲಿ ಮಾತನಾಡಿದ ಅವರು, ರಾಹುಲ್ ಗಾಂಧಿ ತಮ್ಮ ಬಳಿ 'ಆಟಂ ಬಾಂಬ್' ಇದೆ ಎಂದು ಹೇಳುತ್ತಾರೆ. ಒಂದೊಮ್ಮೆ ಅವರ ಬಳಿ ಆಟಂ ಬಾಂಬ್ ಇದ್ದರೆ ಒಮ್ಮೆಲೆ ಅದನ್ನು ಸ್ಫೋಟಿಸಬೇಕು. ಆದರೆ ಅದು ತನಗೇ ಹಾನಿಯಾಗದಂತೆ ಅವರು ಎಚ್ಚರ ವಹಿಸುವುದು ಸೂಕ್ತ ಎಂದಿದ್ದಾರೆ.

**ದೇಶದಲ್ಲಿ ಜಾಗವೇ ಇರುವುದಿಲ್ಲ**

ಭಾರತದ ಚುನಾವಣಾ ಆಯೋಗವು ಪ್ರಶ್ನಾತೀತ ಸಮಗ್ರತೆ ಖ್ಯಾತಿ ಹೊಂದಿರುವ ಸಂಸ್ಥೆ. ರಾಜ್ಯದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗಳು ಮುಕ್ತ, ನ್ಯಾಯಯುತ ರೀತಿಯಲ್ಲಿ ನಡೆಯುವಂತೆ ನೋಡಿಕೊಳ್ಳಲು ಅದು ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದೆ. ಸಾಂವಿಧಾನಿಕ ಸಂಸ್ಥೆಯ ಬಗ್ಗೆ ಕ್ಷುಲ್ಲಕ ಹೇಳಿಕೆಗಳನ್ನು ನೀಡುವುದು ವಿರೋಧ ಪಕ್ಷದ ನಾಯಕನಿಗೆ ಶೋಭೆ ತರದು ಎಂದೂ ಹೇಳಿದ್ದಾರೆ. ಈ ಕುರಿತು ಕಾಂಗ್ರೆಸ್ ಸಂಗ್ರಹಿಸಿರುವ ದಾಖಲೆ, ಪುರಾವೆಗಳನ್ನು ಅವರು ಆಟಂ ಬಾಂಬ್‌ಗೆ ಹೋಲಿಕೆ ಮಾಡಿ ಮಾತನಾಡಿದ್ದರು. ನಮ್ಮ ಬಳಿ ಇರುವ ಈ ಆಟಂ ಬಾಂಬ್ ಸ್ಫೋಟಿಸಿದಾಗ ಚುನಾವಣಾ ಆಯೋಗದವರಿಗೆ ತಪ್ಪಿಸಿಕೊಳ್ಳಲು ದೇಶದಲ್ಲಿ ಜಾಗವೇ ಇರುವುದಿಲ್ಲ ಎಂದು ಅವರು ವ್ಯಂಗ್ಯವಾಡಿದ್ದರು.



### ರಾಹುಲ್ ಹೇಳಿದ್ದೇನು?

**ಆಡಳಿತಾರೂಢ ಬಿಜೆಪಿಯ 'ಮತಕಳ್ಳತನ' ಕೃತ್ಯಕ್ಕೆ ಚುನಾವಣಾ ಆಯೋಗವು ನೆರವಾಗಿದೆ ಎಂದು ಪುನರುಚ್ಚರಿಸಿದ್ದ ರಾಹುಲ್ ಗಾಂಧಿ, ಈ ಆರೋಪವನ್ನು ಸಾಬೀತು ಪಡಿಸಲು ತಮ್ಮ ಬಳಿ 'ಆಟಂ ಬಾಂಬ್' ಇದೆ ಎಂದು ಹೇಳಿದ್ದರು.**

# ಭಾಗವತ್ ಸೆರೆಗೆ ಎಟಿಎಸ್ ಬಯಸಿತ್ತು; ವಾದ ತಿರಸ್ಕರಿಸಿದ ಕೋರ್ಟ್

## ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆ ಆರಂಭಿಸಿದ್ದ ಎಟಿಎಸ್, ಆರೋಪ ಪಟ್ಟಿಯನ್ನೂ ಪ್ರಕಟಿಸಿತ್ತು

**ಮುಂಬೈ:** ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳವು (ಎಟಿಎಸ್) 2008ರ ಮಾಲೆಗಾಂವ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ಬಂಧಿಸಲು ಬಯಸಿತ್ತು ಎಂಬ ವಾದವನ್ನು ರಾಷ್ಟ್ರೀಯ ತನಿಖಾ ಸಂಸ್ಥೆಯ ವಿಶೇಷ ನ್ಯಾಯಾಲಯ ತಿರಸ್ಕರಿಸಿದೆ. ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆ ಆರಂಭಿಸಿದ್ದ ಎಟಿಎಸ್, ಆರೋಪ ಪಟ್ಟಿಯನ್ನೂ ಪ್ರಕಟಿಸಿತ್ತು. ಅದಾದನಂತರ, ಎನ್‌ಐಎ ಈ ಪ್ರಕರಣವನ್ನು 2010ರಲ್ಲಿ ಕೈಗೆತ್ತಿಕೊಂಡಿತ್ತು. 2008ರ ಸೆಪ್ಟೆಂಬರ್ 29ರಂದು ಅಂಜುಮಾನ್ ಚೌಕ್, ಭಿಕ್ಕು ಚೌಕ್ ನಡುವೆ ಸ್ಫೋಟ ಸಂಭವಿಸಿತ್ತು. ಈ ವೇಳೆ 6 ಮಂದಿ ಮೃತಪಟ್ಟು 101 ಜನರು ಗಾಯಗೊಂಡಿದ್ದರು.ಎಟಿಎಸ್ ತನಿಖಾ ತಂಡದಲ್ಲಿದ್ದ ಮೆಹಬೂಬ್ ಮುಜಾವರ್ ಅವರು, ಭಾಗವತ್ ಅವರನ್ನು ಬಂಧಿಸುವಂತೆ ಮೇಲಧಿಕಾರಿಗಳಿಂದ ಆದೇಶವಿತ್ತು ಎಂದು ಇತ್ತೀಚೆಗೆ ಹೇಳಿದ್ದರು. ಆದರೆ, ಭಾಗವತ್ ಅವರು ಆರ್‌ಎಸ್‌ಎಸ್ ಮುಖ್ಯಸ್ಥರಾಗಿ ನೇಮಕಗೊಂಡದ್ದು 2009ರ ಮಾರ್ಚ್ 21ರಂದು. ಈ ಅಂಶಗಳನ್ನು ನ್ಯಾಯಾಲಯ ತನ್ನ ಆದೇಶದಲ್ಲಿ ಉಲ್ಲೇಖಿಸಿರಬಹುದು. ಪ್ರಕರಣದ ಆರೋಪಿಗಳಾಗಿದ್ದ ಏಳು ಮಂದಿಯನ್ನು ಖುಲಾಸೆಗೊಳಿಸಿದ 1,036 ಪುಟಗಳ ಆದೇಶವನ್ನು ವಿಶೇಷ ನ್ಯಾಯಾಧೀಶ ಅಭಯ್ ಲಹೋತಿ ಪ್ರಕಟಿಸಿದ್ದರು. ಎಟಿಎಸ್ ಅಧಿಕಾರಿಯಾಗಿದ್ದ ಮೆಹಬೂಬ್ ಮುಜಾವರ್ ಮಾಲೆಗಾಂವ್ ಪ್ರಕರಣದ ತನಿಖಾಧಿಕಾರಿಗಳಲ್ಲಿ ಒಬ್ಬರು. ಮೋಹನ್ ಭಾಗವತ್ ಅವರನ್ನು ಬಂಧಿಸುವಂತೆ ಹಿರಿಯ ಅಧಿಕಾರಿಗಳು ನಿರ್ದೇಶನ ನೀಡಿದ್ದರು. ಆದರೆ, ಪ್ರಕರಣದಲ್ಲಿ ಭಾಗವತ್ ಅವರ ಪಾತ್ರ ಇಲ್ಲದಿರುವುದರಿಂದ, ಅಂತಹ ಕಾನೂನುಬಾಹಿರ ಆದೇಶ ಪಾಲಿಸಲು ಮುಜಾವರ್ ನಿರಾಕರಿಸಿದ್ದರು.



**ಎಟಿಎಸ್ ತನಿಖಾ ತಂಡ**

> **ಸಿಆರ್‌ಪಿಸಿ ಸೆಕ್ಷನ್ 313ರ ಅಡಿಯಲ್ಲಿ ದಾಖಲಿಸಿಕೊಂಡ ಹೇಳಿಕೆಗಳನ್ನು ನ್ಯಾಯಾಲಯದ ಎದುರು ದಾಖಲಿಸಿಲ್ಲ. ಹಾಗಾಗಿ, ಅವುಗಳನ್ನು ಸಾಕ್ಷ್ಯಗಳೆಂದು ಪರಿಗಣಿಸಲಾಗದು. ಮುಜಾವರ್ ಅವರನ್ನು ಸಾಕ್ಷಿ ಎಂದು ನ್ಯಾಯಾಲಯದ ಎದುರು ವಿಚಾರಣೆಗೆ ಒಳಪಡಿಸಿಲ್ಲ. ದಾಖಲೆಗಳನ್ನು ಸಂಬಂಧಪಟ್ಟ ದೃಢ ಮತ್ತು ವಿಶ್ವಾಸಾರ್ಹ ಸಾಕ್ಷ್ಯಗಳ ಮೂಲಕ ಸಾಬೀತುಪಡಿಸಬೇಕು ಎಂದು ಹೇಳಿದ್ದಾರೆ.**

ಹಾಗಾಗಿಯೇ, ಮುಜಾವರ್ ಅವರನ್ನು ಸುಳ್ಳು ಪ್ರಕರಣದಲ್ಲಿ ಸಿಲುಕಿಸಲಾಯಿತು ಎಂದು ಆರೋಪಿ ನಂ.10 ಪರ ವಕೀಲ ವಾದಿಸಿದ್ದಾರೆ ಎಂದಿರುವ ನ್ಯಾಯಾಲಯ, ಮುಜಾವರ್ ಅವರ ಹೇಳಿಕೆಗಳನ್ನು ದಾಖಲಿಸುವುದಾದರೆ, ಪೂರಕ ಸಾಕ್ಷ್ಯಗಳನ್ನು ಉಲ್ಲೇಖಿಸುವುದು ಅಗತ್ಯ ಎಂದಿದೆ.

ಪ್ರಾಸಿಕ್ಯೂಷನ್ ಸಾಕ್ಷಿಯಾಗಿದ್ದ ಸಹಾಯಕ ಪೊಲೀಸ್ ಆಯುಕ್ತ ಮೋಹನ್ ಕುಲಕರ್ಣಿ ಅವರು ಮುಜಾವರ್ ಆರೋಪಗಳನ್ನು ಅಲ್ಲಗಳೆದಿದ್ದಾರೆ. ಆರ್‌ಎಸ್‌ಎಸ್ ನಾಯಕನನ್ನು ವಶಕ್ಕೆ ಪಡೆಯಲು ಮುಜಾವರ್ ಅವರನ್ನು ಕಳುಹಿಸಲಾಗಿತ್ತು ಎಂಬುದು ಸುಳ್ಳು. ಆದರೆ, ಅವರನ್ನು ತಲೆಮರೆಸಿಕೊಂಡಿದ್ದ ಆರೋಪಿಗಳಾದ ರಾಮ್‌ಜಿ ಕಲ್‌ಸಾಂಗ್ರ ಮತ್ತು ಸಂದೀಪ್ ದಾಂಗೆ ಪತ್ತೆಗೆ ಕಳಹಿಸಲಾಗಿತ್ತು ಎಂದಿದ್ದಾರೆ. ಹಾಗೆಯೇ, ಎಟಿಎಸ್ ಅಧಿಕಾರಿಗಳು ಇಬ್ಬರು ಆರೋಪಿಗಳನ್ನು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ. ಅದಕ್ಕೆ ಸಂಬಂಧಿಸಿದ ಸಾಕ್ಷಿಗಳ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರಿಸಿಲ್ಲ ಎಂಬುದಾಗಿ ಮುಜಾವರ್ ಬಹಿರಂಗವಾಗಿ ಮಾಡಿರುವ ಆರೋಪವನ್ನೂ ಕುಲಕರ್ಣಿ ನಿರಾಕರಿಸಿದ್ದಾರೆ ಎಂದು ನ್ಯಾ. ಲಹೋತಿ ಉಲ್ಲೇಖಿಸಿದ್ದಾರೆ.

### ಬಲವಾದ ಸಾಕ್ಷ್ಯಗಳು ಇಲ್ಲ

**ಆರೋಪಿಗಳ ವಿರುದ್ಧ ನಂಬಲರ್ಹ, ಬಲವಾದ ಸಾಕ್ಷ್ಯಗಳು ಇಲ್ಲ ಎಂದಿರುವ ನ್ಯಾಯಾಲಯ, ಬಿಜೆಪಿಯ ಮಾಜಿ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್, ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ, ಮೇಜರ್ ರಮೇಶ್ ಉಪಾಧ್ಯಾಯ (ಸದ್ಯ ನಿವೃತ್ತ), ಅಜಯ್ ರಾಹಿರ್ಕರ್, ಸುಧಾಕರ್ ದ್ವಿವೇದಿ, ಸುಧಾಕರ್ ಚತುರ್ವೇದಿ ಹಾಗೂ ಸಮೀರ್ ಕುಲಕರ್ಣಿ ಅವರನ್ನು ಜುಲೈ 31ರಂದು ಖುಲಾಸಗೊಳಿಸಿದೆ. ಪ್ರಕರಣದ ಆರೋಪಿ ನಂ. 10 ದ್ವಿವೇದಿ ಅವರೂ, ಮುಜಾವರ್ ಹೇಳಿಕೆಯನ್ನೇ ಉಲ್ಲೇಖಿಸಿದ್ದಾರೆ.**

## ಮಿನಿ ನ್ಯೂಸ್

### 1993ರ ನಕಲಿ ಎನ್‌ಕೌಂಟರ್; ಐವರು ನಿವೃತ್ತ ಪೊಲೀಸರು ದೋಷಿಗಳು

**ಚಂಡೀಗಢ:** 1993ರಲ್ಲಿ ತರಣ್ ತಾರನ್ ಜಿಲ್ಲೆಯಲ್ಲಿ ಸಂಭವಿಸಿದ ನಕಲಿ ಎನ್‌ಕೌಂಟರ್ ಪ್ರಕರಣದಲ್ಲಿ ಐವರು ನಿವೃತ್ತ ಪೊಲೀಸರು ದೋಷಿಗಳೆಂದು ಮೊಹಾಲಿಯ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ. ಅಪರಾಧ ಸಂಚು, ಹತ್ಯೆ, ಸಾಕ್ಷ್ಯನಾಶ ಮಾಡಿದ ಅಪರಾಧಕ್ಕೆ ಐವರು ನಿವೃತ್ತ ಪೊಲೀಸರನ್ನು ದೋಷಿಗಳೆಂದು ನ್ಯಾಯಾಲಯ ಘೋಷಿಸಿತು. ಶಿಕ್ಷೆಯ ಪ್ರಮಾಣವನ್ನು ಆಗಸ್ಟ್ 4ರಂದು ಪ್ರಕಟಿಸಲಾಗುವುದು ಎಂದು ನ್ಯಾಯಾಲಯ ಹೇಳಿದೆ.

ಈ ಪ್ರಕರಣದಲ್ಲಿ 10 ಜನ ಪೊಲೀಸರು ಆರೋಪಿಗಳಾಗಿದ್ದರು. ಈ ಪೈಕಿ ವಿಚಾರಣೆ ವೇಳೆ ಐವರು ಪೊಲೀಸರು ಮೃತಪಟ್ಟಿದ್ದಾರೆ. ನಿವೃತ್ತರಾದ ಡಿವೈಎಸ್‌ಪಿ ಭೂಪಿಂದರ್‌ಜಿತ್ ಸಿಂಗ್, ಡಿಎಸ್‌ಪಿ ದೇವಿಂದರ್ ಸಿಂಗ್, ಇನ್ಸ್‌ಪೆಕ್ಟರ್ ಸುಬಾ ಸಿಂಗ್, ಎಎಸ್‌ಐ ಗುಲ್ಬರ್ಗ್ ಸಿಂಗ್ ಹಾಗೂ ರಘುಬೀರ್ ಸಿಂಗ್ ದೋಷಿಗಳೆಂದು ನ್ಯಾಯಾಲ ಹೇಳಿದೆ. ಸರ್ಕಲ್ ಇನ್ಸ್‌ಪೆಕ್ಟರ್ ಗಿಯಾನ್ ಚಂದ್, ಇನ್ಸ್‌ಪೆಕ್ಟರ್ ಗುರುದೇವ್ ಸಿಂಗ್, ಎಎಸ್‌ಐ ಜಗೀರ್ ಸಿಂಗ್ ಮತ್ತು ಹೆಡ್ ಕಾನ್ಸ್‌ಟೆಬಲ್‌ಗಳಾದ ಮೊಹಿಂದರ್ ಸಿಂಗ್, ಅರೂರ್ ಸಿಂಗ್ ವಿಚಾರಣೆ ಸಂದರ್ಭದಲ್ಲಿ ಮೃತಪಟ್ಟಿದ್ದಾರೆ. 1993ರ ಜೂನ್ 27ರಂದು ಕಳ್ಳತನ ಆರೋಪದಲ್ಲಿ ಸರ್ಕಾರಿ ಗುತ್ತಿಗೆದಾರ ದೇಸಾ ಸಿಂಗ್ ಕುಟುಂಬದ ಮೇಲೆ ದಾಳಿ ಮಾಡಿದ್ದ ಪೊಲೀಸರು ಶಿಂದರ್ ಸಿಂಗ್, ದೇಸಾ ಸಿಂಗ್, ಸುಖದೇವ್ ಸಿಂಗ್, ಬಾಲ್ಕರ್ ಸಿಂಗ್ ಹಾಗೂ ದಲ್ಜಿತ್ ಸಿಂಗ್ ಅವರನ್ನು ಬಂಧಿಸಿದ್ದರು. ನಂತರ ಅವರ ಮೇಲೆ ಶಸ್ತ್ರಾಸ್ತ್ರಗಳ ಕಳ್ಳತನ ಆರೋಪ ಮಾಡಲಾಗಿತ್ತು.

ಜು.12ರಂದು ಪ್ರಕರಣದ ಮಹಜರಿಗೆ ಗ್ರಾಮಕ್ಕೆ ಕರೆದೊಯ್ಯುವಾಗ ಆರೋಪಿಗಳು ಪೊಲೀಸರ ಮೇಲೆ ದಾಳಿ ಮಾಡಿದರು ಎಂದು ಆತ್ಮ ರಕ್ಷಣೆಗಾಗಿ ಎನ್‌ಕೌಂಟರ್ ಮಾಡಿ ದೇಸಾ ಸಿಂಗ್, ಶಿಂದರ್ ಸಿಂಗ್, ಬಾಲ್ಕರ್ ಸಿಂಗ್, ಸುಖದೇವ್ ಸಿಂಗ್‌ನನ್ನು ಹತ್ಯೆ ಮಾಡಲಾಗಿತ್ತು. ಜುಲೈ 28ರಂದು ದೇಸಾ ಸಿಂಗ್ ಕುಟುಂಬದ ದಲ್ಜಿತ್ ಸಿಂಗ್, ಇತರೆ ಇಬ್ಬರನ್ನು ಎನ್‌ಕೌಂಟರ್‌ನಲ್ಲಿ ಹತ್ಯೆ ಮಾಡಲಾಗಿತ್ತು.

### ಬಲವಂತದ ಮತಾಂತರ ಆರೋಪ ಕ್ರೈಸ್ತ ಸನ್ಯಾಸಿನಿಯರಿಗೆ ಜಾಮೀನು

**ಬಿಲಾಸ್ಪುರ:** ಮಾನವ ಕಳ್ಳಸಾಗಣೆ ಮತ್ತು ಬಲವಂತದ ಮತಾಂತರ ಮಾಡಿದ ಆರೋಪದ ಮೇಲೆ ಬಂಧನಕ್ಕೊಳಗಾದ ಕೇರಳದ ಇಬ್ಬರು ಕ್ರೈಸ್ತ ಸನ್ಯಾಸಿನಿಯರು ಸೇರಿದಂತೆ ಮೂವರಿಗೆ ಛತ್ತೀಸಗಢದ ಬಿಲಾಸ್ಪುರ ಜಿಲ್ಲೆಯ ವಿಶೇಷ ನ್ಯಾಯಾಲಯ ಶನಿವಾರ ಜಾಮೀನು ನೀಡಿದೆ. ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ, ಸೆಷನ್ಸ್ ನ್ಯಾಯಾಧೀಶ ಸಿರಾಜುದ್ದೀನ್ ಖುರೇಷಿ ಅವರು, ಜಾಮೀನು ಅರ್ಜಿಗಳ ಮೇಲಿನ ಆದೇಶವನ್ನು ಕಾಯ್ದಿರಿಸಿದ್ದರು. ನ್ಯಾಯಾಲಯವು ಮೂವರಿಗೆ ಷರತ್ತುಬದ್ಧ ಜಾಮೀನು ನೀಡಿದೆ ಎಂದು ಪ್ರತಿವಾದಿ ವಕೀಲ ಅಮೃತೋ ದಾಸ್ ತಿಳಿಸಿದ್ದಾರೆ.

**ಪ್ರಕರಣವೇನು?:** ನಾರಾಯಣಪುರದ ಮೂವರು ಹುಡುಗಿಯರನ್ನು ಬಲವಂತವಾಗಿ ಮತಾಂತರಿಸಿ ಕಳ್ಳಸಾಗಣೆ ಮಾಡಿದ್ದಾರೆ ಎಂದು ಆರೋಪಿಸಿ ಸ್ಥಳೀಯ ಬಜರಂಗದಳ ಕಾರ್ಯಕರ್ತರೊಬ್ಬರು ದೂರು ನೀಡಿದ್ದರು. ಅವರ ದೂರಿನ ಮೇರೆಗೆ ಜು. 25 ರಂದು ದುರ್ಗ್ ರೈಲ್ವೆ ನಿಲ್ದಾಣದಿಂದ ಪ್ರೀತಿ ಮೆರ್ರಿ, ವಂದನಾ ಫ್ರಾನ್ಸಿಸ್, ಸುಕಮಾನ್ ಮಾಂಡವಿ ಅವರನ್ನು ಬಂಧಿಸಲಾಗಿತ್ತು. ಕ್ರೈಸ್ತ ಸನ್ಯಾಸಿನಿಯರ ಬಂಧನ ಖಂಡಿಸಿದ ವಿರೋಧ ಪಕ್ಷದ ನಾಯಕರು, ಬಿಜೆಪಿಯ ದ್ವೇಷದ ಕ್ರಮ ಎಂದು ಆರೋಪಿಸಿದ್ದರು. ಮುಂಗಾರು ಅಧಿವೇಶನದ ವೇಳೆ ಸಂಸತ್ ಆವರಣದಲ್ಲಿ ಬ್ಯಾನರ್ ಹಿಡಿದು ಪ್ರತಿಭಟನೆ ನಡೆಸಿದ್ದರು.

### ಇಯರ್‌ಫೋನ್ ಧರಿಸಿ ಹಳಿ ದಾಟುತ್ತಿದ್ದ ಬಾಲಕನ ಮೇಲೆ ಹರಿದ ರೈಲು

**ಬಲ್ಲಿಯಾ:** ಇಯರ್‌ಫೋನ್ ಧರಿಸಿ ಹಳಿ ದಾಟುತ್ತಿದ್ದ 16 ವರ್ಷದ ಬಾಲಕನ ಮೇಲೆ ಎಕ್ಸ್‌ಪ್ರೆಸ್ ರೈಲು ಹರಿದ ಪರಿಣಾಮ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಲ್ಲಿಯಾ ಮೌ ರೈಲ್ವೆ ನಿಲ್ದಾಣ ಸಮೀಪದ ಉದ್ಯೆನಾ ಗ್ರಾಮದ ಬಳಿ ಈ ಘಟನೆ ನಡೆದಿದೆ. ಮೃತ ಬಾಲಕನನ್ನು ಅರವಿಂದ ರಾಜಭರ್ ಎಂದು ಗುರುತಿಸಲಾಗಿದೆ. ಇವರು ಕಿವಿಗೆ ಇಯರ್‌ಫೋನ್ ಧರಿಸಿ ಸಂಗೀತ ಆಲಿಸುತ್ತಾ ಹಳಿ ದಾಟುತ್ತಿದ್ದರು. ಆದರೆ ವೇಗವಾಗಿ ಸಾಗುತ್ತಿದ್ದ ತಪತಿ ಗಂಗಾ ಎಕ್ಸ್‌ಪ್ರೆಸ್ ಬರುತ್ತಿರುವುದನ್ನು ಇವರು ಗಮನಿಸದ ಕಾರಣ ರೈಲಿಗೆ ಸಿಲುಕಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

ಘಟನೆಯ ಮಾಹಿತಿ ಪಡೆದ ರೈಲ್ವೆ ಸುರಕ್ಷಾ ದಳದ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಯಿತು. ತನಿಖೆ ಪ್ರಗತಿಯಲ್ಲಿದೆ ಎಂದು ಪೊಲೀಸರು ಹೇಳಿದ್ದಾರೆ.

### ಅತ್ಯಾಚಾರವಾಗಬಾರದು ಎಂದರೆ ಮನೆಯಲ್ಲೇ ಇರಿ; ಪೊಲೀಸರ ಪ್ರಚಾರಕ್ಕೆ ಆಕ್ರೋಶ




**ಅಹಮದಾಬಾದ್:** ಮಹಿಳೆಯರು ರಾತ್ರಿಯ ಪಾರ್ಟಿಗೆ ತೆರಳಬೇಡಿ, ಅತ್ಯಾಚಾರವಾಗಬಹುದು.., ಮಹಿಳೆಯರು ನಿರ್ಜನ ಪ್ರದೇಶಗಳಿಗೆ ನಿಮ್ಮ ಗೆಳೆಯರೊಂದಿಗೆ ತೆರಳಬೇಡಿ, ಸಾಮೂಹಿಕ ಅತ್ಯಾಚಾರವಾಗಬಹುದು.. ಎನ್ನುವ ಪೋಸ್ಟರ್‌ಗಳನ್ನು ಅಹಮದಾಬಾದ್‌ನ ರಸ್ತೆ ವಿಭಜಕಗಳ ಮೇಲೆ ಅಂಟಿಸಲಾಗಿದ್ದು, ವಿವಾದಕ್ಕೆ ಕಾರಣವಾಗಿದೆ. ನಗರದ ಕೆಲವು ಭಾಗಗಳಲ್ಲಿ ರಸ್ತೆ ವಿಭಜಕಗಳ ಮೇಲೆ ಈ ಪೋಸ್ಟರ್‌ಗಳನ್ನು ಅಂಟಿಸಲಾಗಿತ್ತು. ಸುರಕ್ಷತಾ ಅಭಿಯಾನದ ಹೆಸರಿನಲ್ಲಿ ಅಹಮದಾಬಾದ್ ಸಂಚಾರಿ ಪೊಲೀಸರು ಈ ಅಭಿಯಾನಕ್ಕೆ ಪ್ರಾಯೋಜಕತ್ವ ವಹಿಸಿದ್ದಾರೆ.


ಈ ಬಗ್ಗೆ ಸ್ಪಷ್ಟನೆ ನೀಡಿರುವ ಸಂಚಾರಿ ಉಪ ಪೊಲೀಸ್ ಆಯುಕ್ತ ನೀತಾ ದೇಸಾಯಿ ಸಂಚಾರಿ ಪೊಲೀಸರು ರಸ್ತೆ ಸುರಕ್ಷತೆಯ ಅಭಿಯಾನಕ್ಕೆ ಪ್ರಾಯೋಜನೆ ಮಾಡಿದ್ದಾರೆ. ಮಹಿಳಾ ಸುರಕ್ಷತೆ ಕುರಿತ ಅಭಿಯಾನಕ್ಕೆ ಅಲ್ಲ ಎಂದಿದ್ದಾರೆ. ಸತಾರ್ಕ್ತಾ ಗ್ರೂಪ್ ಎನ್ನುವ ಎನ್‌ಜಿಒ ಅವರು ಶಾಲೆ ಮತ್ತು ಕಾಲೇಜುಗಳಲ್ಲಿ ರಸ್ತೆ ಸಂಚಾರ ಕುರಿತ ಸುರಕ್ಷತಾ ಅಭಿಯಾನ ಮಾಡುತ್ತೇವೆ ಎಂದು ಸಂಚಾರಿ ಪೊಲೀಸರ ನೆರವು ಕೇಳಿದ್ದರು. ನಮಗೆ ರಸ್ತೆ ಸುರಕ್ಷತಾ ಅಭಿಯಾನದ ಪೋಸ್ಟರ್ ತೋರಿಸಿದ್ದರು. ಆದರೆ, ಅನುಮತಿಯಿಲ್ಲದೆ ಈ ಪೋಸ್ಟರ್ ಅಂಟಿಸಿದ್ದಾರೆ. ನಮ್ಮ ಗಮನಕ್ಕೆ ಬಂದ ತಕ್ಷಣವೇ ತೆಗೆಯಲಾಗಿದೆ ಎಂದು ತಿಳಿಸಿದ್ದಾರೆ. ಗುಜರಾತ್‌ನಲ್ಲಿ ಮಹಿಳಾ ಸುರಕ್ಷತೆಯ ಕುರಿತು ವಿರೋಧ ಪಕ್ಷಗಳು ಕಳವಳ ವ್ಯಕ್ತಪಡಿಸಿವೆ.



# ಜಾಂಡಿಸ್‌ನಿಂದ ಕೋಮಾಗೆ ಜಾರಿದ ಗಣಪ

ಗಣಪ ಸಿನಿಮಾ ನಟ ಸಂತೋಷ್ ಬಾಲರಾಜ್ ತೀವ್ರವಾದ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಜನಪ್ರಿಯ ನಿರ್ಮಾಪಕ ಆನೇಕಲ್ ಬಾಲರಾಜ್ ಅವರ ಪುತ್ರ ಸಂತೋಷ್ ಬಾಲರಾಜ್ ಅವರಿಗೆ ಜಾಂಡಿಸ್ ಹೆಚ್ಚಾಗಿ ಕೋಮಾಗೆ ಜಾರಿದ್ದಾರೆ. ಅವರ ಸ್ಥಿತಿ ಗಂಭೀರವಾಗಿದ್ದು, ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗಣಪ,ಕರಿಯ 2, ಬರ್ಕ್ಲಿ, ಕೆಂಪ'ಂತಹ ಸಿನಿಮಾದಲ್ಲಿ ಸಂತೋಷ್ ಬಾಲರಾಜ್ ನಟಿಸಿದ್ದಾರೆ. ಕನ್ನಡ ಚಿತ್ರರಂಗದಲ್ಲಿ ಯುವ ನಟರಾಗಿ ಅವರು ಗುರುತಿಸಿಕೊಂಡಿದ್ದಾರೆ. ಇದೀಗ ನಟ ಸಂತೋಷ್ ಬಾಲರಾಜ್ ತೀವ್ರವಾದ ಅನಾರೋಗ್ಯದಿಂದ ಬಳಲುತ್ತಿದ್ದು, ಅವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗುತ್ತಿದೆ. ಹಿರಿಯ ನಿರ್ಮಾಪಕ ಆನೇಕಲ್ ಬಾಲರಾಜ್ ಅವರ ಪುತ್ರ ಸಂತೋಷ್ ಬಾಲರಾಜ್ ಕೆಲ ದಿನಗಳಿಂದ ಜಾಂಡಿಸ್‌ನಿಂದ ಬಳಲುತ್ತಿದ್ದರು. ಇದು ತೀವ್ರಗೊಂಡ ಬೆನ್ನಲ್ಲೇ ಸಂತೋಷ್ ಅವರನ್ನ ಕುಮಾರಸ್ವಾಮಿ ಲೇಔಟ್‌ನಲ್ಲಿರುವ ಸಾಗರ್ ಅಪೋಲೋ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಜಾಂಡಿಸ್ ಹೆಚ್ಚಾಗಿ ಅವರು ಕೋಮಾಗೆ ಜಾರಿದ್ದು, ಸಂತೋಷ್ ಬಾಲರಾಜ್ ಅವರಿಗೆ ಅಪೋಲೋ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. 34 ವರ್ಷದ ನಟ ಸಂತೋಷ್ ಬಾಲರಾಜ್ ಅವರು ಜಾಂಡಿಸ್‌ನಿಂದ ಆಸ್ಪತ್ರೆಗೆ ದಾಖಲಾಗಿದ್ದು, ಸದ್ಯ ಕೋಮಾದಲ್ಲಿದ್ದಾರೆ. ಜಾಂಡಿಸ್ ದೇಹದಾದ್ಯಂತ ಹರಡಿರುವ ಕಾರಣ, ಅವರ ಸ್ಥಿತಿ ಗಂಭೀರವಾಗಿದೆ. ಸಂತೋಷ್ ಬಾಲರಾಜ್ ಅವರು ತಾಯಿಯೊಂದಿಗೆ ವಾಸಿಸುತ್ತಿದ್ದು, ಅವರಿಗೆ ಇನ್ನೂ ಮದುವೆಯಾಗಿಲ್ಲ.

**ನಿರ್ಮಾಪಕ ಆನೇಕಲ್ ಬಾಲರಾಜ್ ಪುತ್ರ ಸಂತೋಷ್:** ಸಂತೋಷ್ ಕೆಲ ಸಿನಿಮಾಗಳಲ್ಲಿ ನಾಯಕ ನಟನಾಗಿ ಕಾಣಿಸಿಕೊಂಡಿದ್ದರು. ಗಣಪ ಸಿನಿಮಾ ಮೂಲಕ ಚಿತ್ರರಂಗದಲ್ಲಿ ಗಮನ ಸೆಳೆದಿದ್ದರು. ಈ ಚಿತ್ರದಲ್ಲಿ ಅವರ ಅಭಿನಯವು ಕನ್ನಡ ಸಿನಿ ಪ್ರೇಕ್ಷಕರಿಗೆ ಒಂದು ಗಮನಾರ್ಹ ಪಾತ್ರವಾಗಿದೆ. ಕನ್ನಡದ ಖ್ಯಾತ ನಿರ್ಮಾಪಕ ಆನೇಕಲ್ ಬಾಲರಾಜ್‌ರ ಪುತ್ರನೇ ಸಂತೋಷ್ ಬಾಲರಾಜ್. ಆನೇಕಲ್ ಬಾಲರಾಜ್ ಅವರು ಕನ್ನಡ ಚಿತ್ರರಂಗದಲ್ಲಿ ಹಲವಾರು ಚಿತ್ರಗಳನ್ನು ನಿರ್ಮಿಸಿದರು. ಚಾಲೆಂಜಿಂಗ್ ಸ್ಟಾರ್ ದರ್ಶನ್ ನಟನೆಯ ಕರಿಯ ಸಿನಿಮಾವನ್ನ ಆನೇಕಲ್ ಬಾಲರಾಜ್ ನಿರ್ಮಿಸಿದರು. ಸಂತೋಷ್ ಬಾಲರಾಜ್ ಕನ್ನಡ ಚಿತ್ರರಂಗದ ಯುವ ಪ್ರತಿಭೆಯಾಗಿದ್ದು, ಅವರ ತಂದೆ ಆನೇಕಲ್ ಬಾಲರಾಜ್‌ರ ಚಿತ್ರರಂಗದ ಪರಂಪರೆಯನ್ನ ಮುಂದುವರೆಸಿದ್ದಾರೆ. ಆದರೆ, ಇತ್ತೀಚಿನ ಆರೋಗ್ಯದ ಸಮಸ್ಯೆಯಿಂದಾಗಿ ಅವರು ಗಂಭೀರ ಸ್ಥಿತಿಯಲ್ಲಿದ್ದಾರೆ. ಸಂತೋಷ್ ಬಾಲರಾಜ್ ಅವರ ಆರೋಗ್ಯ ಸ್ಥಿತಿಯು ಕನ್ನಡ ಚಿತ್ರರಂಗದಲ್ಲಿ ಆತಂಕವನ್ನುಂಟುಮಾಡಿದೆ.





# ಮಲಯಾಳಂನಲ್ಲೂ 'ಸು ಫ್ರಮ್ ಸೋ' ಹವಾ

ಕನ್ನಡದ ಯಶಸ್ವಿ ಚಿತ್ರ 'ಸು ಫ್ರಮ್ ಸೋ' ಮಲಯಾಳಂನಲ್ಲಿ ಯಶಸ್ವಿಯಾಗಿ ಬಿಡುಗಡೆಯಾಗಿದೆ. ಉತ್ತಮ ಡಬ್ಬಿಂಗ್ ಮತ್ತು ಕಥಾವಸ್ತುವಿನಿಂದಾಗಿ ಚಿತ್ರಕ್ಕೆ ಅತ್ಯುತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬುಕ್ ಮೈ ಶೋನಲ್ಲಿ ಉತ್ತಮ ರೇಟಿಂಗ್ ಪಡೆದಿದೆ. ಕೊಚ್ಚಿಯಲ್ಲಿ ಹೌಸ್‌ಫುಲ್ ಪ್ರದರ್ಶನ ಕಂಡಿದೆ. 'ಸು ಫ್ರಮ್ ಸೋ' ಸಿನಿಮಾ ನ್ನಡ ಚಿತ್ರರಂಗದ ಬಳಿಕ ಮಲಯಾಳಂ ಸಿನಿಮಾ ರಂಗಕ್ಕೆ ಕಾಲಿಟ್ಟಿದೆ. ಈ ಚಿತ್ರವನ್ನು ಒಳ್ಳೆಯ ರೀತಿಯಲ್ಲಿ ಡಬ್ ಮಾಡಿ ಮಲಯಾಳಂ ಭಾಷೆಯಲ್ಲಿ ರಿಲೀಸ್ ಮಾಡಲಾಗಿದೆ. ದುಲ್ಕರ್ ಸಲ್ಮಾನ್ ಅವರು ಚಿತ್ರವನ್ನು ಹಂಚಿಕೆ ಮಾಡಿದ್ದಾರೆ.

ಈ ಸಿನಿಮಾಗೆ ಕೇರಳದಲ್ಲಿ ಒಳ್ಳೆಯ ರೀತಿಯ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬುಕ್ ಮೈ ಶೋನಲ್ಲಿ ಮಲಯಾಳಂ ವರ್ಷನ್‌ಗೆ ಒಳ್ಳೆಯ ರೇಟಿಂಗ್ ಸಿಕ್ಕಿದೆ ಅನ್ನೋದು ವಿಶೇಷ. ಕೇರಳದ ಕೊಚ್ಚಿಯಲ್ಲಿ ಪ್ರೀಮಿಯರ್ ಶೋ ಆಯೋಜನೆ ಮಾಡಲಾಗಿತ್ತು. ರಾಜ್ ಬಿ. ಶೆಟ್ಟಿ ಮೊದಲಾದವರು ಈ ವೇಳೆ ಭಾಗವಹಿಸಿದ್ದರು. ಮಲಯಾಳಂ ವರ್ಷನ್ ನೋಡಿದ ಅನೇಕರು ಸಿನಿಮಾಗೆ ಮೆಚ್ಚುಗೆ ಸೂಚಿಸಿದ್ದಾರೆ. ಚಿತ್ರವನ್ನು ಸಾಕಷ್ಟು ಇಷ್ಟಪಟ್ಟಿದ್ದಾರೆ. ಮಲಯಾಳಂ ಭಾಷೆಗೆ ಉತ್ತಮವಾಗಿ ಡಬ್ ಮಾಡಲಾಗಿದೆ ಎಂದು ಅನೇಕರು ಹೇಳಿದ್ದಾರೆ.

# 'ಕೂಲಿ' ಸಿನಿಮಾಕ್ಕೆ ಎ ಸರ್ಟಿಫಿಕೇಟ್



ಸ್ಟಾರ್ ನಟರು ತಮ್ಮ ಸಿನಿಮಾಗಳಿಗೆ 'ಎ' ಸರ್ಟಿಫಿಕೇಟ್ ಬರುವುದನ್ನು ಸಹಿಸುವುದಿಲ್ಲ. ಸಿನಿಮಾಗಳಿಗೆ 'ಎ' ಸರ್ಟಿಫಿಕೇಟ್ ಸಿಕ್ಕರೆ ಅದನ್ನು ಅಗೌರವ ಎಂದು ಭಾವಿಸುವ ಹಲವಾರು ಮಂದಿ ನಟರುಗಳು ಇದ್ದಾರೆ. ಹಿರಿಯ ಸ್ಟಾರ್ ನಟರುಗಳಂತೂ ತಮ್ಮ ಸಿನಿಮಾಕ್ಕೆ 'ಎ' ಸರ್ಟಿಫಿಕೇಟ್ ಬರದಂತೆ ಸಾಕಷ್ಟು ಎಚ್ಚರ ವಹಿಸುತ್ತಾರೆ. ಆದರೆ ಇದೀಗ ಖ್ಯಾತ ನಟ, ಕೋಟ್ಯಂತರ ಸಂಖ್ಯೆಯ ಅಭಿಮಾನಿಗಳನ್ನು ಹೊಂದಿರುವ ರಜನೀಕಾಂತ್ ಅವರ ಹೊಸ ಸಿನಿಮಾ 'ಕೂಲಿಗೆ ಸಿಬಿಎಫ್‌ಸಿ ಎ ಪ್ರಮಾಣ ಪತ್ರ ನೀಡಿದೆ. ಲೋಕೇಶ್ ಕನಗರಾಜ್ ನಿರ್ದೇಶನ ಮಾಡಿರುವ 'ಕೂಲಿ' ಸಿನಿಮಾಕ್ಕೆ 'ಎ' ಪ್ರಮಾಣ ಪತ್ರ ದೊರೆತಿದ್ದು, ಸಿನಿಮಾದ ನಿರ್ಮಾಣ ಸಂಸ್ಥೆ ಸನ್ ಪಿಕ್ಚರ್ಸ್ ಈ ಸುದ್ದಿಯನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ. ರಜನೀಕಾಂತ್‌ರ ಕೆಲವು ಅಭಿಮಾನಿಗಳು ಇದರ ಬಗ್ಗೆ ಬೇಸರ ಸಹ ವ್ಯಕ್ತಪಡಿಸಿದ್ದಾರೆ. ಆದರೆ ರಜನೀಕಾಂತ್ ಅವರ ಸಿನಿಮಾಗಳಿಗೆ 'ಎ' ಪ್ರಮಾಣ ಪತ್ರ ಸಿಗುತ್ತಿರುವುದು ಇದು ಮೊದಲೇನೂ ಅಲ್ಲ. ಆದರೆ ಲೋಕೇಶ್ ಕನಗರಾಜ್ ನಿರ್ದೇಶನದ ಸಿನಿಮಾಕ್ಕೆ 'ಎ' ಪ್ರಮಾಣ ಪತ್ರ ಸಿಗುತ್ತಿರುವುದು ಇದೇ ಮೊದಲು. ರಜನೀಕಾಂತ್ ಅವರ ಹಿಂದಿನ ಕೆಲವು ಸಿನಿಮಾಗಳಿಗೆ 'ಎ' ಪ್ರಮಾಣ ಪತ್ರವನ್ನು ಸಿಬಿಎಫ್‌ಸಿ ನೀಡಿದೆ. ಆದರೆ ಅದೆಲ್ಲ ಬಹಳ ಹಿಂದೆ. 1985 ರ ಬಳಿಕ ರಜನೀಕಾಂತ್ ನಟಿಸಿರುವ ಯಾವುದೇ ಸಿನಿಮಾಕ್ಕೆ 'ಎ' ಪ್ರಮಾಣ ಪತ್ರ ಸಿಬಿಎಫ್‌ಸಿಯಿಂದ ದೊರೆತಿಲ್ಲ. 1982 ರಲ್ಲಿ ರಜನೀಕಾಂತ್ ನಟಿಸಿರುವ 'ಪುದುಕವಿದೈ' ಅದೇ ವರ್ಷ ಬಿಡುಗಡೆ ಆದ 'ರಂಗ' ಸಿನಿಮಾಗಳಿಗೆ 'ಎ' ಪ್ರಮಾಣ ಪತ್ರ ದೊರೆತಿತ್ತು. ಅದಾದ ಬಳಿಕ 1985 ರಲ್ಲಿ ಬಿಡುಗಡೆ ಆದ 'ನಾನ್ ಸಿಗಪ್ಪು ಮನಿದನ್' ಸಿನಿಮಾಕ್ಕೆ ಸಹ 'ಎ' ಪ್ರಮಾಣ ಪತ್ರ ನೀಡಲಾಗಿತ್ತು. ಅದೇ ಕೊನೆ, ಅದಾದ ಬಳಿಕ ಈಗ 'ಕೂಲಿ' ಸಿನಿಮಾಕ್ಕೆ 'ಎ' ಪ್ರಮಾಣ ಪತ್ರ ನೀಡಲಾಗಿದೆ. ಲೋಕೇಶ್ ಕನಗರಾಜ್ ಅವರ ಸಿನಿಮಾಗಳು ಬಹಳ ರಾ ಆಗಿರುತ್ತವೆ. ಅವರ ಸಿನಿಮಾಗಳಲ್ಲಿ ವಯಲೆನ್ಸ್ ಹೆಚ್ಚು ಅದರ ಜೊತೆಗೆ ಮಾದಕ ವಸ್ತುಗಳ ಬಳಕೆಯು ಸಹ ಹೆಚ್ಚಾಗಿ ಇರುತ್ತದೆ. ಅವರ ಸಿನಿಮಾಗಳಲ್ಲಿ ಬೈಗುಳಗಳು ಸಹ ಹೆಚ್ಚಾಗಿಯೇ ಇರುತ್ತವೆ. ಹಾಗಾಗಿ ಅವರ ಸಿನಿಮಾಗಳಿಗೆ ಸಿಬಿಎಫ್‌ಸಿಯವರು ಕಟ್‌ಗಳನ್ನು ಸೂಚಿಸುವುದು ಸಾಮಾನ್ಯ.

'ಕೂಲಿ' ಸಿನಿಮಾಕ್ಕೂ ಇದೇ ಕಾರಣಕ್ಕೆ 'ಎ' ಪ್ರಮಾಣ ಪತ್ರ ನೀಡಿದ್ದಾರೆ. ಅವರ ಈ ಹಿಂದಿನ ಯಾವ ಸಿನಿಮಾಕ್ಕೂ 'ಎ' ಪ್ರಮಾಣ ಪತ್ರ ಸಿಕ್ಕಿರಲಿಲ್ಲ. ಇದು ಅವರಿಗೆ ಮೊದಲು. ಕೂಲಿ ಸಿನಿಮಾನಲ್ಲಿ ರಜನೀಕಾಂತ್, ಅಕ್ಕಿನೇನಿ ನಾಗಾರ್ಜುನ, ಉಪೇಂದ್ರ, ಆಮಿರ್ ಖಾನ್, ಶೋಬಿನ್, ಶ್ರುತಿ ಹಾಸನ್, ಸತ್ಯರಾಜ್ ಅವರುಗಳು ನಟಿಸಿದ್ದಾರೆ. ಸಿನಿಮಾಕ್ಕೆ ಅನಿರುದ್ಧ್ ರವಿಚಂದ್ರನ್ ಸಂಗೀತ ನೀಡಿದ್ದಾರೆ. ಸಿನಿಮಾ ನಿರ್ಮಾಣ ಕಲಾನಿಧಿ ಮಾರನ್. ಸಿನಿಮಾ ಆಗಸ್ಟ್ 15 ರಂದು ಬಿಡುಗಡೆ ಆಗಲಿದೆ.

# ಅಶ್ಲೀಲ ಮೆಸೇಜ್:ಮೂವರು ಅರೆಸ್ಟ್ ಪೊಲೀಸರ ಕಾರ್ಯಕ್ಕೆ ರಮ್ಯಾ ಮೆಚ್ಚುಗೆ



ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾಗೆ ಅಶ್ಲೀಲ ಮೆಸೇಜ್ ಮಾಡಿದ್ದವರ ಪೈಕಿ ಮೂವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಈ ಹಿನ್ನೆಲೆ ಬೆಂಗಳೂರು ಪೊಲೀಸರ ಕಾರ್ಯಕ್ಕೆ ನಟಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಕುರಿತು ನಟಿ ರಮ್ಯಾ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

ತಪ್ಪು ಮಾಡಿದವರು ಕಾನೂನಿನ ಕೈಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಮಹಿಳೆಯರ ಘನತೆಗೆ ಧಕ್ಕೆ ತಂದವರನ್ನು ಬಂಧಿಸುವ ಕೆಲಸ ಆಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಈ ಮೂಲಕ ಬೆಂಗಳೂರು ಪೊಲೀಸರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ರೇಣುಕಾಸ್ವಾಮಿ ಕುಟುಂಬದ ಪರವಾಗಿ ನಿಂತ ಕಾರಣಕ್ಕೆ ನಟಿ ರಮ್ಯಾಗೆ ದರ್ಶನ್ ಅಭಿಮಾನಿಗಳು ಅಶ್ಲೀಲ ಮೆಸೇಜ್ ಕಳುಹಿಸಿದ್ದರು. ಇದರ ಬೆನ್ನಲ್ಲೇ ದರ್ಶನ್ ಫ್ಯಾನ್ಸ್ ವಿರುದ್ಧ ಗರಂ ಆದ ನಟಿ ಅಶ್ಲೀಲ ಮೆಸೇಜ್ ಕಳುಹಿಸಿದ್ದವರ ಖಾತೆಗಳನ್ನು ಬಹಿರಂಗಗೊಳಿಸಿದ್ದರು. ಜೊತೆಗೆ 43 ಅಕೌಂಟ್‌ಗಳ ವಿರುದ್ಧ ದೂರು ದಾಖಲಿಸಿದ್ದರು.

ದೂರಿನ ಬಳಿಕ ಆರೋಪಿಗಳ ಪತ್ತೆಗಿಳಿದ ಪೊಲೀಸರು ಸದ್ಯ 11 ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಹಾಗೂ ಬಂಧಿತರ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ.

# ಸಮಂತಾ ಕೈಯಲ್ಲಿ ಹೊಸ ಉಂಗುರ ಹುಟ್ಟಿತು ನಿಶ್ಚಿತಾರ್ಥದ ಚರ್ಚೆ



ಟಾಲಿವುಡ್ ಸ್ಟಾರ್ ನಾಯಕಿ ಸಮಂತಾ ಇತ್ತೀಚೆಗೆ 'ಶುಭಂ' ಚಿತ್ರ ನಿರ್ಮಾಣ ಮಾಡಿದರು. ಈ ಸಿನಿಮಾದಲ್ಲಿ ಅವರು ಅತಿಥಿ ಪಾತ್ರ ಕೂಡ ಮಾಡಿದ್ದರು. ಈಗ ಇವರು 'ರಕ್ತ ಬ್ರಹ್ಮಾಂಡ, ದಿ ಬ್ಲಡಿ ಕಿಂಗ್‌ಡಮ್' ಎಂಬ ವೆಬ್ ಸರಣಿಯಲ್ಲಿ ನಟಿಸುತ್ತಿದ್ದಾರೆ. ನಂದಿನಿ ರೆಡ್ಡಿ ನಿರ್ದೇಶನದ 'ಮಾ ಇಂಟಿ ಬಂಗಾರಂ' ಚಿತ್ರವನ್ನು ಸಹ ಅವರು ನಿರ್ಮಿಸುತ್ತಿದ್ದಾರೆ. ಈಗ ಅವರ ಕೈಯಲ್ಲಿ ಉಂಗುರ ಕಾಣಿಸಿದ್ದು ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. ಸಿನಿಮಾಗಳ ಹೊರತಾಗಿ, ಸಮಂತಾ ಅವರ ಹೆಸರು ಇತ್ತೀಚೆಗೆ ಸುದ್ದಿಯಲ್ಲಿದೆ. ವಿಶೇಷವಾಗಿ, ನಿರ್ದೇಶಕ ರಾಜ್ ನಿಧಿಮೋರು ಅವರೊಂದಿಗೆ ಕಾಣಿಸಿಕೊಂಡಿರುವುದು ಬಿಸಿ ಚರ್ಚೆಗೆ ಕಾರಣವಾಗಿದೆ. ಇತ್ತೀಚೆಗೆ, ಅವರಿಬ್ಬರೂ ಒಟ್ಟಿಗೆ ಊಟ ಮಾಡಿದ ನಂತರ ಒಂದೇ ಕಾರಿನಲ್ಲಿ ಸಾಗಿದ್ದರು. ಈ ಫೋಟೋಗಳು ಮತ್ತು ವೀಡಿಯೊಗಳು ವೈರಲ್ ಆಗಿದ್ದವು. ಇದು ಮತ್ತೊಮ್ಮೆ ಈ ಜೋಡಿಗಳ ಡೇಟಿಂಗ್ ಸಂಬಂಧದ ಬಗ್ಗೆ ವದಂತಿಗಳನ್ನು ಹುಟ್ಟುಹಾಕಿತು. ಇದಕ್ಕೂ ಮೊದಲು, ಇಬ್ಬರೂ ಲಂಡನ್‌ನ ಬೀದಿಗಳಲ್ಲಿ ಒಟ್ಟಿಗೆ ತಿರುಗಾಡುತ್ತಿರುವುದು ಕಂಡುಬಂದಿದೆ. ಇದಕ್ಕೆ ಸಂಬಂಧಿಸಿದ ಫೋಟೋಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿವೆ. ಆದಾಗ್ಯೂ, ಸ್ಯಾಮ್ ಅಥವಾ ರಾಜ್ ಇಬ್ಬರೂ ತಮ್ಮ ಡೇಟಿಂಗ್ ಮತ್ತು ಸಂಬಂಧದ ಬಗ್ಗೆ ಬಾಯಿ ಬಿಟ್ಟಿಲ್ಲ. ಸ್ಯಾಮ್ ಇತ್ತೀಚೆಗೆ ತನ್ನ ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ರೆಸ್ಟೋರೆಂಟ್ ಒಂದರ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಫೋಟೋ ಒಂದರಲ್ಲಿ ಸಮಂತಾ ಕೈಯಲ್ಲಿದ್ದ ಉಂಗುರ ಗಮನ ಸೆಳೆದಿದೆ. ಇದು ಚರ್ಚೆಗೆ ಕಾರಣವಾಗಿದೆ. ಸ್ಯಾಮ್ ಈ ಉಂಗುರವನ್ನು ಮೊದಲು ಅವಳ ಕೈಯಲ್ಲಿ ನೋಡಿರಲಿಲ್ಲ. ಈಗ ಅವರು ಉಂಗುರದೊಂದಿಗೆ ಕಾಣಿಸಿಕೊಂಡ ನಂತರ, ಎಲ್ಲರೂ ವಿಭಿನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಿದ್ದಾರೆ.



# ಏಷ್ಯಾಕಪ್ ಗೆಲ್ಲಲು ಪಾಕಿಸ್ತಾನ್ ತಂಡದ ಖತರ್‌ನಾಕ್ ಪ್ಲ್ಯಾನ್

ಏಷ್ಯನ್ ರಾಷ್ಟ್ರಗಳ ಕ್ರಿಕೆಟ್ ಕದನ ಏಷ್ಯಾಕಪ್ ಸೆಪ್ಟೆಂಬರ್ 9 ರಿಂದ ಶುರುವಾಗಲಿದೆ. ಯುಎಇನಲ್ಲಿ ನಡೆಯಲಿರುವ ಈ ಏಷ್ಯಾಕಪ್ ಗೆಲ್ಲಲು ಪಾಕಿಸ್ತಾನ್ ತಂಡ ಭರ್ಜರಿ ಪ್ಲ್ಯಾನ್ ರೂಪಿಸಿದೆ. ಅದು ಸಹ ಏಷ್ಯಾಕಪ್‌ಗೂ ಮುನ್ನ ತ್ರಿಕೋನ ಸರಣಿ ಆಯೋಜಿಸುವ ಮೂಲಕ. ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಆಗಸ್ಟ್ 29 ರಿಂದ ಯುಎಇನಲ್ಲಿ ಮೂರು ತಂಡಗಳ ನಡುವಣ ತ್ರಿಕೋನ ಸರಣಿ ಆಯೋಜಿಸಲು ನಿರ್ಧರಿಸಿದೆ.

ಶಾರ್ಜಾದಲ್ಲಿ ನಡೆಯಲಿರುವ ಈ ಸರಣಿಯಲ್ಲಿ ಪಾಕಿಸ್ತಾನ್ ವಿರುದ್ಧ ಅಫ್ಘಾನಿಸ್ತಾನ್ ಹಾಗೂ ಯುಎಇ ತಂಡಗಳು ಕಣಕ್ಕಿಳಿಯಲಿವೆ. ಫೈನಲ್ ಸೇರಿದಂತೆ ಒಟ್ಟು 7 ಪಂದ್ಯಗಳ ಸರಣಿಯ ಮೂಲಕ ಯುಎಇನಲ್ಲೇ ಏಷ್ಯಾಕಪ್‌ಗಾಗಿ ಸಿದ್ಧತೆ ನಡೆಸಲು ಪಾಕ್ ತಂಡ ಪ್ಲ್ಯಾನ್ ರೂಪಿಸಿದೆ. ಇದಕ್ಕಾಗಿ ಏಷ್ಯಾಕಪ್‌ಗೆ ಸರಿಹೊಂದುವಂತೆ ವೇಳಾಪಟ್ಟಿಯನ್ನು ಸಿದ್ಧಪಡಿಸಿದೆ. ಅದರಂತೆ ಈ ಸರಣಿಯು ಆಗಸ್ಟ್ 29 ರಿಂದ ಶುರುವಾಗಲಿದ್ದು, ಫೈನಲ್ ಪಂದ್ಯವು ಸೆಪ್ಟೆಂಬರ್ 7 ರಂದು ನಡೆಯಲಿದೆ. ಅಂದರೆ ಏಷ್ಯಾಕಪ್ ಆರಂಭಕ್ಕೂ ಒಂದು ದಿನ ಮುಂಚಿತವಾಗಿ ತ್ರಿಕೋನ ಸರಣಿಯ ಅಂತಿಮ ಪಂದ್ಯ ನಡೆಯಲಿದೆ. ಇದಾದ ಬಳಿಕ ಪಾಕಿಸ್ತಾನ್ ತಂಡವು ಏಷ್ಯಾಕಪ್‌ನಲ್ಲಿ ಕಣಕ್ಕಿಳಿಯಲಿದೆ. ಏಷ್ಯಾಕಪ್‌ನಲ್ಲಿ ಪಾಕ್ ಪಡೆಯ ಮೊದಲ ಎದುರಾಳಿ ಒಮಾನ್. ಸೆಪ್ಟೆಂಬರ್ 12 ರಂದು ಪಾಕಿಸ್ತಾನ್ ಹಾಗೂ ಒಮಾನ್ ಮುಖಾಮುಖಿಯಾಗಲಿದ್ದು. ಇದಾದ ಬಳಿಕ ಭಾರತ ಮತ್ತು ಪಾಕಿಸ್ತಾನ್ ನಡುವಣ ಹೈವೋಲ್ಟೇಜ್ ಪಂದ್ಯ ನಡೆಯಲಿದೆ. ಈ ಪಂದ್ಯವು ಸೆಪ್ಟೆಂಬರ್ 14 ರಂದು ಜರುಗಲಿದ್ದು, ಅದಕ್ಕೂ ಮುನ್ನ ತ್ರಿಕೋನ ಸರಣಿಯ ಮೂಲಕ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಲು ಪಾಕಿಸ್ತಾನ್ ತಂಡ ಪ್ಲ್ಯಾನ್ ರೂಪಿಸಿದೆ.



# ಕೊಹ್ಲಿ ಬಾತ್ರೂಮ್‌ನಲ್ಲಿ ಅಳುತ್ತಿರುವುದನ್ನು ನೋಡಿದೆ : ಯುಜ್ವೇಂದ್ರ ಚಾಹಲ್

ಟೀಂ ಇಂಡಿಯಾದ ಇಬ್ಬರು ದಿಗ್ಗಜ ಕ್ರಿಕೆಟಿಗರಾದ ಯುಜ್ವೇಂದ್ರ ಚಾಹಲ್ ಮತ್ತು ವಿರಾಟ್ ಕೊಹ್ಲಿ ಎಂತಹ ಸ್ನೇಹಿತರು ಎಂಬುದನ್ನು ಹೊಸದಾಗಿ ಹೇಳಬೇಕಿಲ್ಲ. ಈ ಇಬ್ಬರು ಟೀಂ ಇಂಡಿಯಾದಲ್ಲಿ ಜೊತೆಯಾಗಿ ಆಡಿದ್ದು ಮಾತ್ರವಲ್ಲದೆ, ಐಪಿಎಲ್‌ನಲ್ಲೂ ಸಹ ಬಹಳ ವರ್ಷಗಳ ಕಾಲ ಒಟ್ಟಿಗೆ ಆಡಿದ್ದರು. ಆದರೆ ವರ್ಷಗಳ ಹಿಂದೆ ಯುಜ್ವೇಂದ್ರ ಚಾಹಲ್‌ರನ್ನು ಆರ್‌ಸಿಬಿ ಕೈಬಿಟ್ಟಿತು. ಆ ಬಳಿಕ ಚಾಹಲ್‌ಗೆ ಟೀಂ ಇಂಡಿಯಾದಲ್ಲೂ ಸ್ಥಾನ ಸಿಕ್ಕಿಲ್ಲ. ಆದಾಗ್ಯೂ ಇಬ್ಬರ ನಡುವಿನ ಬಾಂಧವ್ಯ ಹಾಗೆಯೇ ಇದೆ. ಇದೀಗ ರಾಜ್ ಶಮಿ ಪಾಡ್‌ಕ್ಯಾಸ್ಟ್‌ನಲ್ಲಿ ತಮ್ಮ ಮನದಾಳವನ್ನು ತೆರೆದಿಟ್ಟಿರುವ ಯುಜ್ವೇಂದ್ರ ಚಾಹಲ್, ತಮ್ಮ ವೈಯಕ್ತಿಕ ಬದುಕಿನ ಬಗ್ಗೆ ಮಾತನಾಡಿರುವುದರ ಜೊತೆಗೆ ಕೊಹ್ಲಿಯ ಬಗ್ಗೆಯೂ ಭಾವನಾತ್ಮಕ ಕ್ಷಣವನ್ನು ವಿವರಿಸಿದ್ದಾರೆ.

ವಾಸ್ತವವಾಗಿ ಮೈದಾನದಲ್ಲಿ ವಿರಾಟ್ ಕೊಹ್ಲಿ ಎಷ್ಟು ಆಕ್ರಮಣಕಾರಿಯಾಗಿ ಕಾಣಿಸಿಕೊಳ್ಳುತ್ತಾರೋ ಅಷ್ಟೇ ಭಾವನಾತ್ಮಕ ಜೀವಿ ಕೂಡ. ಇದನ್ನು ನಾವು ಸಾಕಷ್ಟು ಭಾರಿ ನೋಡಿದ್ದೇವೆ. ಟೀಂ ಇಂಡಿಯಾ ಈ ಹಿಂದೆ ಟಿ20 ವಿಶ್ವಕಪ್ ಗೆದ್ದಾಗ, ಆ ಬಳಿಕ ಆರ್‌ಸಿಬಿ ಐಪಿಎಲ್ ಟ್ರೋಫಿ ಗೆದ್ದಾಗ ಮೈದಾನದಲ್ಲೇ ಭಾವುಕರಾಗಿ ಕಣ್ಣೀರಿಟ್ಟಿದ್ದರು. ಇದೀಗ ಅಂತಹದ್ದೇ ಸನ್ನಿವೇಶವನ್ನು ಯುಜ್ವೇಂದ್ರ ಚಾಹಲ್ ಬಹಿರಂಗಪಡಿಸಿದ್ದಾರೆ.

ರಾಜ್ ಶಮ್ಮಿ ಪಾಡ್‌ಕ್ಯಾಸ್ಟ್‌ನಲ್ಲಿ ಚಾಹಲ್ ಬಳಿ ಕೊಹ್ಲಿ ಬಗ್ಗೆಯೂ ಪ್ರಶ್ನೆ ಕೇಳಲಾಯಿತು. ಈ ವೇಳೆ, 2025 ರ ಐಪಿಎಲ್ ಟ್ರೋಫಿಯನ್ನು ಗೆದ್ದ ನಂತರ ವಿರಾಟ್ ಕೊಹ್ಲಿ ಮೈದಾನದಲ್ಲಿ ಕಣ್ಣೀರಿಟ್ಟಿದ್ದರು. ನೀವು ವಿರಾಟ್ ಅಳುವುದನ್ನು ಈ ಮೊದಲು ಎಂದಾದರೂ ನೋಡಿದ್ದೀರಾ ಎಂದು ಚಾಹಲ್ ಬಳಿ ರಾಜ್ ಕೇಳಿದರು. ಇದಕ್ಕೆ ಪ್ರತಿಕ್ರಿಯೆಯಾಗಿ ಚಾಹಲ್ 2019 ರ ವಿಶ್ವಕಪ್ ಅನ್ನು ಉಲ್ಲೇಖಿಸಿ, 2019 ರ ವಿಶ್ವಕಪ್‌ನಲ್ಲಿ, ಅವರು ಬಾತ್ರೂಮ್‌ನಲ್ಲಿ ಅಳುತ್ತಿರುವುದನ್ನು ನಾನು ನೋಡಿದೆ. ಇದಾದ ನಂತರ, ನಾನು ಕೊನೆಯದಾಗಿ ಬ್ಯಾಟಿಂಗ್ ಮಾಡಲು ಬಂದಾಗ, ನಾನು ಅವರ ಪಕ್ಕದಲ್ಲಿ ಹೋಗಿದ್ದೆ. ಆ ಸಮಯದಲ್ಲಿ ಅವರ ಕಣ್ಣುಗಳಲ್ಲಿ ನೀರು ಇತ್ತು ಎಂದಿದ್ದಾರೆ.



# ಮಾಜಿ ಆಟಗಾರನಿಗೆ ವಿಶೇಷ ಗೌರವ ಹೆಡ್‌ಬ್ಯಾಂಡ್ ಧರಿಸಿ ಕಣಕ್ಕಿಳಿದ ಸಿರಾಜ್

ಭಾರತ ಮತ್ತು ಇಂಗ್ಲೆಂಡ್ ನಡುವಣ ಐದನೇ ಟೆಸ್ಟ್ ಪಂದ್ಯದ ವೇಳೆ ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್ ವೈಟ್ ಹೆಡ್‌ಬ್ಯಾಂಡ್ ಧರಿಸಿ ಕಣಕ್ಕಿಳಿದಿದ್ದರು. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯುತ್ತಿರುವ ಈ ಪಂದ್ಯದ ದ್ವಿತೀಯ ದಿನದಾಟದ ವೇಳೆ ಸಿರಾಜ್ ಹೆಡ್‌ಬ್ಯಾಂಡ್ ನೊಂದಿಗೆ ಕೆಲ ಓವರ್‌ಗಳನ್ನು ಸಹ ಎಸೆದಿದ್ದರು. ಅತ್ತ ಟೀಮ್ ಇಂಡಿಯಾದ ಯಾವುದೇ ಆಟಗಾರರು ಯಾವುದೇ ಬ್ಯಾಂಡ್ ಧರಿಸದೇ ಇದ್ದರೂ, ಮೊಹಮ್ಮದ್ ಸಿರಾಜ್ ಮಾತ್ರ ವಿಶೇಷ ಹೆಡ್‌ಬ್ಯಾಂಡ್ ನಲ್ಲಿ ಕಾಣಿಸಿಕೊಂಡಿದ್ದರು. ಟೀಮ್ ಇಂಡಿಯಾ ವೇಗಿ ಹೀಗೆ ವಿಭಿನ್ನವಾಗಿ ಕಾಣಿಸಿಕೊಂಡ ಬೆನ್ನಲ್ಲೇ, ಸಿರಾಜ್ ಹೆಡ್‌ಬ್ಯಾಂಡ್ ಧರಿಸಿದ್ದೇಕೆ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿತ್ತು. ಈ ಪ್ರಶ್ನೆಗೆ ಉತ್ತರ ಗ್ರಹಾಂ ತೋರ್ಪ್ ಇಂಗ್ಲೆಂಡ್ ತಂಡದ ಮಾಜಿ ಆಟಗಾರ ಗ್ರಹಾಂ ತೋರ್ಪ್ ಅವರಿಗೆ ಗೌರವ ಸಲ್ಲಿಸುವ ಸಲುವಾಗಿ ಟೀಮ್ ಇಂಡಿಯಾ ವೇಗಿ ಸಿರಾಜ್ ಹೆಡ್ ಬ್ಯಾಂಡ್ ಧರಿಸಿದ್ದಾರೆ. ಅಲ್ಲದೆ ತೋರ್ಪ್ ಅವರ ಲೋಗೊ ಇರುವ ಈ ವಿಶೇಷ ಹೆಡ್ ಬ್ಯಾಡ್ ಧರಿಸಿ ಸಿರಾಜ್ ಬೌಲಿಂಗ್ ಅನ್ನು ಸಹ ಮಾಡಿದರು. ಅಂದಹಾಗೆ ಆಗಸ್ಟ್ 1 ಗ್ರಹಾಂ ತೋರ್ಪ್ ಅವರ 56ನೇ ಹುಟ್ಟುಹಬ್ಬ. ಇಂಗ್ಲೆಂಡ್ ಪರ 182 ಪಂದ್ಯಗಳನ್ನಾಡಿದ್ದ ತೋರ್ಪ್ ವೈಟ್ ಹೆಡ್‌ಬ್ಯಾಂಡ್‌ನೊಂದಿಗೆ ಮೈದಾನದಲ್ಲಿ ಕಾಣಿಸಿಕೊಳ್ಳುತ್ತಿದ್ದರು. 2024, ಆಗಸ್ಟ್ 4 ರಂದು ನಿಧನರಾದ ಅವರಿಗೆ ಗೌರವ ಸಲ್ಲಿಸುವ ಸಲುವಾಗಿ ಇಂಗ್ಲೆಂಡ್ ಆಟಗಾರರು ಆಗಸ್ಟ್ 1 ರಂದು ತೋರ್ಪ್ ಅವರ ಲೊಗೊ ಇರುವ ಹೆಡ್ ಬ್ಯಾಂಡ್ ಧರಿಸಿ ಕಣಕ್ಕಿಳಿದಿದ್ದಾರೆ. ಇದೇ ಬ್ಯಾಂಡ್ ಧರಿಸಿ ಮೊಹಮ್ಮದ್ ಸಿರಾಜ್ ಸಹ ಮಾಜಿ ಆಟಗಾರನಿಗೆ ಗೌರವ ಸಲ್ಲಿಸಿ ಗಮನ ಸೆಳೆದಿದ್ದಾರೆ. ಇದೀಗ ಸಿರಾಜ್ ಅವರ ಹೆಡ್ ಬ್ಯಾಂಡ್ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.



ಸೋಷಿಯಲ್ ಮೀಡಿಯಾದಲ್ಲಿ ವೈರಲ್

# 10 ರನ್‌ಗಳಿಂದ ಭರ್ಜರಿ ದಾಖಲೆ ತಪ್ಪಿಸಿಕೊಂಡ ಕೆಎಲ್ ರಾಹುಲ್




ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಸರಣಿಯಲ್ಲಿ ಟೀಮ್ ಇಂಡಿಯಾದ ಆರಂಭಿಕ ದಾಂಡಿಗ ಕೆಎಲ್ ರಾಹುಲ್ ಭರ್ಜರಿ ಪ್ರದರ್ಶನ ನೀಡಿದ್ದಾರೆ. ಈ ಪಂದ್ಯದ ನಾಲ್ಕು ಮ್ಯಾಚ್‌ಗಳಲ್ಲಿ 2 ಶತಕ ಹಾಗೂ 2 ಅರ್ಧಶತಕಗಳನ್ನು ಬಾರಿಸಿ ಮಿಂಚಿದ್ದ ರಾಹುಲ್ ಕೊನೆಯ ಪಂದ್ಯದಲ್ಲಿ ಎಡವಿದ್ದಾರೆ. ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯುತ್ತಿರುವ ಐದನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಕೆಎಲ್ ರಾಹುಲ್ ಕೇವಲ 14 ರನ್‌ಗಳಿಸಿ ಔಟಾಗಿದ್ದರು.

ಇನ್ನು ದ್ವಿತೀಯ ಇನಿಂಗ್ಸ್‌ನಲ್ಲಿ 28 ಎಸೆತಗಳನ್ನು ಎದುರಿಸಿದರೂ ಕೆಎಲ್ ರಾಹುಲ್ ಕಲೆಹಾಕಿದ್ದು ಕೇವಲ 7 ರನ್‌ಗಳು ಮಾತ್ರ. ಈ ಮೂಲಕ ಅಂತಿಮ ಪಂದ್ಯದಲ್ಲಿ 21 ರನ್‌ಗಳಿಸಿ ಬ್ಯಾಟಿಂಗ್ ಮುಗಿಸಿದ್ದಾರೆ. ಈ ಇಪ್ಪತ್ತೊಂದು ರನ್ ಗಳೊಂದಿಗೆ ಕೆಎಲ್‌ಆರ್ ಅವರು ಈ ಬಾರಿಯ ಸರಣಿಯಲ್ಲಿ ಒಟ್ಟು 532 ರನ್ ಕಲೆಹಾಕಿದ್ದಾರೆ. ಆದರೆ ಕೇವಲ 10 ರನ್‌ಗಳಿಂದ ಭರ್ಜರಿ ದಾಖಲೆಯೊಂದನ್ನು ನಿರ್ಮಿಸುವ ಅವಕಾಶವನ್ನು ಕೆಎಲ್ ರಾಹುಲ್ ತಪ್ಪಿಸಿಕೊಂಡಿದ್ದಾರೆ.

ಅಂದರೆ ಇಂಗ್ಲೆಂಡ್ ವಿರುದ್ಧ ಕೊನೆಯ ಟೆಸ್ಟ್‌ನಲ್ಲಿ ಕೆಲ್‌ಆರ್ 31 ರನ್‌ಗಳಿಸಿದ್ದರೆ ಆತಿಥೇಯ ಇಂಗ್ಲೆಂಡ್ ವಿರುದ್ಧ ಟೆಸ್ಟ್ ಸರಣಿಯಲ್ಲಿ ಅತ್ಯಧಿಕ ರನ್ ಕಲೆಹಾಕಿದ ಭಾರತೀಯ ಆರಂಭಿಕ ಬ್ಯಾಟ್ಸ್‌ಮನ್ ಎನಿಸಿಕೊಳ್ಳುತ್ತಿದ್ದರು. ಸದ್ಯ ಈ ದಾಖಲೆ ಲಿಟಲ್ ಮಾಸ್ಟರ್ ಸುನಿಲ್ ಗವಾಸ್ಕರ್ ಅವರ ಹೆಸರಿನಲ್ಲಿಯೇ ಉಳಿದುಕೊಂಡಿದೆ. 1979 ರಲ್ಲಿ ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ಟೀಮ್ ಇಂಡಿಯಾ ಪರ ಆರಂಭಿಕನಾಗಿ ಕಣಕ್ಕಿಳಿದಿದ್ದ ಗವಾಸ್ಕರ್ ಬರೋಬ್ಬರಿ 542 ರನ್‌ಗಳಿಸಿದ್ದರು. ಈ ಮೂಲಕ ವಿದೇಶಿ ಟೆಸ್ಟ್‌ನಲ್ಲಿ ಇಂಗ್ಲೆಂಡ್ ವಿರುದ್ಧ ಟೆಸ್ಟ್ ಸರಣಿಯೊಂದರಲ್ಲಿ ಅತ್ಯಧಿಕ ರನ್ ಕಲೆಹಾಕಿದ ಭಾರತೀಯ ಬ್ಯಾಟರ್ ಎನಿಸಿಕೊಂಡಿದ್ದರು. ಈ ಭರ್ಜರಿ ದಾಖಲೆಯನ್ನು ಮುರಿಯಲು ಕೆಎಲ್ ರಾಹುಲ್‌ಗೆ ಉತ್ತಮ ಅವಕಾಶವಿತ್ತು. ಆದರೆ ಅಂತಿಮ ಪಂದ್ಯದ ಮೊದಲ ಇನಿಂಗ್ಸ್ ನಲ್ಲಿ ಕೇವಲ 14 ರನ್ ಗಳಿಸಿ ಔಟಾಗಿದ್ದ ಕೆಎಲ್ ರಾಹುಲ್, ದ್ವಿತೀಯ ಇನಿಂಗ್ಸ್ ನಲ್ಲಿ 7 ರನ್‌ಗಳಿಸಿ ನಿರಾಸೆ ಮೂಡಿಸಿದ್ದಾರೆ. ಈ ಮೂಲಕ 5 ಪಂದ್ಯಗಳ ಸರಣಿಯಲ್ಲಿ ಒಟ್ಟು 532 ರನ್ ಗಳಿಸಿ ಇಂಗ್ಲೆಂಡ್ ವಿರುದ್ಧದ ವಿದೇಶಿ ಟೆಸ್ಟ್ ಸರಣಿಯಲ್ಲಿ ಅತ್ಯಧಿಕ ರನ್ ಗಳಿಸಿದ 2ನೇ ಭಾರತೀಯ ಆರಂಭಿಕ ಬ್ಯಾಟರ್ ಎಂಬ ದಾಖಲೆಗೆ ತೃಪ್ತಿಪಟ್ಟುಕೊಂಡಿದ್ದಾರೆ.

# ಶಾರ್ದೂಲ್‌ಗೆ ನಾಯಕತ್ವ



ದುಲೀಪ್ ಟ್ರೋಫಿಗಾಗಿ ಪಶ್ಚಿಮ ವಲಯ ತಂಡವನ್ನು ಪ್ರಕಟಿಸಲಾಗಿದೆ. ಈ ಬಾರಿ ವೆಸ್ಟ್ ಝೋನ್ ತಂಡವನ್ನು ಆಲ್‌ರೌಂಡರ್ ಶಾರ್ದೂಲ್ ಠಾಕೂರ್ ಮುನ್ನಡೆಸಲಿದ್ದಾರೆ. ಇನ್ನು ಉಪನಾಯಕನಾಗಿ ಅಭಿಮನ್ಯು ಈಶ್ವರನ್ ಕಾಣಿಸಿಕೊಳ್ಳಲಿದ್ದಾರೆ. ಹಾಗೆಯೇ 15 ಸದಸ್ಯರ ತಂಡದಲ್ಲಿ ಈ ಬಾರಿ ಸ್ಟಾರ್ ಆಟಗಾರ ಶ್ರೇಯಸ್ ಅಯ್ಯರ್ ಕೂಡ ಸ್ಥಾನ ಪಡೆದಿದ್ದಾರೆ. ಏಕದಿನ ಹಾಗೂ ಟಿ20 ಪಂದ್ಯಗಳಿಗೆ ಹೆಚ್ಚಿನ ಒತ್ತು ನೀಡುತ್ತಿದ್ದ ಶ್ರೇಯಸ್ ಅಯ್ಯರ್ ಇದೀಗ ಟೆಸ್ಟ್ ಕ್ರಿಕೆಟ್‌ಗೆ ಮರಳುವ ಇಂಗಿತದಲ್ಲಿದ್ದಾರೆ.

ಇನ್ನು ಅಯ್ಯರ್ ಜೊತೆ ಸರ್ಫರಾಝ್ ಖಾನ್, ಯಶಸ್ವಿ ಜೈಸ್ವಾಲ್, ರುತುರಾಜ್ ಗಾಯಕ್ವಾಡ್ ಕೂಡ ಪಶ್ಚಿಮ ವಲಯ ತಂಡದಲ್ಲಿದ್ದಾರೆ.

**ಪಶ್ಚಿಮ ವಲಯ ತಂಡ:** ಶಾರ್ದೂಲ್ ಠಾಕೂರ್ (ನಾಯಕ), ಯಶಸ್ವಿ ಜೈಸ್ವಾಲ್, ಆರ್ಯ ದೇಸಾಯಿ, ಹಾರ್ವಿಕ್ ದೇಸಾಯಿ, ಶ್ರೇಯಸ್ ಅಯ್ಯರ್, ಸರ್ಫರಾಝ್ ರುತುರಾಜ್ ಗಾಯಕ್ವಾಡ್, ಜಯಮೀತ್ ಪಟೇಲ್, ಮನನ್ ಹಿಂಗ್ರಾಜಿಯಾ, ಸೌರಭ್ ನವಲೆ, ಶಮ್ಸ್ ಮುಲಾನಿ, ತನುಷ್, ಅರ್ಜಾನ್ ನಾಗವಾಸ್ವಾಲ, ದರ್ಮೇಂದ್ರ ಜಡೇಜಾ, ದೇಶಪಾಂಡೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966